ಸಂಪುಟ: 21, ಸಂಚಿಕೆ: 158, ಪುಟಗಳು: 8, ಭಾನುವಾರ, 17 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಭಾನುವಾರ 17, ಮಾರ್ಚ್ -2024)

- ಶ್ರೀ ಶೋಭಕೃತನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಫಾಲ್ಗುಣ ಮಾಸ, ಶುಕ್ಲ ಪಕ್ಷ,
- ದಶಮಿ, ಕೃತಿಕಾ ನಕ್ಷತ್ರ.
- ರಾಹುಕಾಲ: 04:59 PM 06 : 30 PM
- ಗುಳಿಕಕಾಲ: 03:28 PM04 : 59 PM
- ಯಮಗಂಡಕಾಲ: 12:27 PM 01 : 58 PM

# ಲೋಕಸಭೆಗೆ ಏಪ್ರಿಲ್ 19 ರಿಂದ 7 ಹಂತಗಳಲ್ಲಿ ಮತದಾನ

**» ಜೂನ್ 4 ರಂದು ಫಲಿತಾಂಶ**



**ನವದೆಹಲಿ:** 18ನೇ ಲೋಕಸಭೆಗೆ ಚುನಾವಣೆಯನ್ನು ಕೇಂದ್ರ ಚುನಾವಣಾ ಆಯೋಗ ಶನಿವಾರ ಘೋಷಣೆ ಮಾಡಿದೆ. ಏಪ್ರಿಲ್ 19 ರಿಂದ ಜೂನ್ 1ರವರೆಗೆ ಚುನಾವಣೆ ನಡೆಯಲಿದ್ದು, ಒಟ್ಟು 7 ಹಂತಗಳಲ್ಲಿ ಮತದಾನ ನಡೆಯಲಿದೆ ಎಂದು ತಿಳಿಸಿದೆ. ಜೂನ್ 4ಕ್ಕೆ ಫಲಿತಾಂಶ ಪ್ರಕಟವಾಗಲಿದೆ. ಕೇಂದ್ರ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹಾಗೂ ಇತ್ತೀಚೆಗೆ ಚುನಾವಣಾ ಆಯೋಗ ಸೇರಿರುವ ಆಯುಕ್ತದ ಜ್ಞಾನೇಶ್ ಕುಮಾರ್ ಹಾಗೂ ಸುಖ್ಬೀರ್ ಸಿಂಗ್ ಸಂಧು ಶನಿವಾರ ದೆಹಲಿಯ ವಿಜ್ಞಾನ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಚುನಾವಣಾ ದಿನಾಂಕವನ್ನು ಘೋಷಣೆ ಮಾಡಿದರು.

ಲೋಕಸಭೆ ಚುನಾವಣೆ ಘೋಷಣೆ ಆದ ಬೆನ್ನಲ್ಲಿಯೇ ನೀತಿ ಸಂಹಿತೆ ಕೂಡ ಜಾರಿಯಾಗಿದೆ. ಇನ್ನು ಆಂಧ್ರಪ್ರದೇಶ, ಸಿಕ್ಕಿಂ, ಅರುಣಾಚಲ ಪ್ರದೇಶ ಹಾಗೂ ಒಡಿಶಾ ರಾಜ್ಯಗಳ ವಿಧಾನಸಭೆ ಅವಧಿ ಕೂಡ ಜೂನ್‌ನಲ್ಲಿ ಮುಕ್ತಾಯಗೊಳ್ಳಲಿದೆ. ಆ ರಾಜ್ಯಗಳ ವಿಧಾನಸಭೆಗೂ ಲೋಕಸಭೆಯ ಜೊತೆಗೇ ಚುನಾವಣೆ ಘೋಷಣೆಯಾಗಿದೆ.

ಕರ್ನಾಟಕದಲ್ಲಿ ಒಟ್ಟು ಎರಡು ಹಂತಗಳಲ್ಲಿ ಮತದಾನ ನಡೆಯಲಿದ್ದು, ಏಪ್ರಿಲ್ 26ಕ್ಕೆ ಮೊದಲ ಹಂತದಲ್ಲಿ 14 ಕ್ಷೇತ್ರದಲ್ಲಿ ಚುನಾವಣೆ ನಡೆಯಲಿದ್ದರೆ, ಮೇ 7ಕ್ಕೆ 2ನೇ ಹಂತದಲ್ಲಿ ಉಳಿದ 14 ಕ್ಷೇತ್ರಕ್ಕೆ ಮತದಾನ ನಡೆಯಲಿದೆ.

'ಚುನಾವ್ ಕಾ ಪರ್ವ್, ದೇಶ್ ಕಾ ಗರ್ವ್' ಎನ್ನುವ ಧ್ಯೇಯವಾಕ್ಯದಲ್ಲಿ ಈ ಬಾರಿಯ ಚುನಾವಣೆ ನಡೆಯಲಿದೆ. ನಮ್ಮ ತಂಡವು ಈಗ ಪೂರ್ಣಗೊಂಡಿದೆ, ಭಾರತೀಯ ಪ್ರಜಾಪ್ರಭುತ್ವದ ಅತಿದೊಡ್ಡ ಹಬ್ಬಕ್ಕೆ ನಾವು ಸಂಪೂರ್ಣವಾಗಿ ಸಿದ್ಧರಾಗಿದ್ದೇವೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಶನಿವಾರ ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಈ ಬಾರಿ ಒಟ್ಟು 97 ಕೋಟಿ ಮತದಾರರು ಮತದಾನ ಮಾಡುವ ಹಕ್ಕು ಹೊಂದಿದ್ದಾರೆ. 10.5 ಲಕ್ಷ ಮತಗಟ್ಟೆಗಳು ಈ ಬಾರಿ ಇರಲಿದ್ದು, ಚುನಾವಣೆಗೆ 1.5 ಕೋಟಿ ಅಧಿಕಾರಿಗಳನ್ನು ಬಳಸಿಕೊಳ್ಳಲಾಗುತ್ತಿದೆ. 55 ಲಕ್ಷ ಇವಿಎಂ, 4 ಲಕ್ಷ ವಾಹನಗಳು ಬಳಕೆ ಮಾಡುತ್ತಿದ್ದೇವೆ ಎಂದು ತಿಳಿಸಿದ್ದಾರೆ. 1.8 ಕೋಟಿ ಮಂದಿ ಮೊದಲ ಬಾರಿ ಮತದಾರರಿದ್ದರೆ, 49.7 ಕೋಟಿ ಪುರುಷ, 47.1 ಕೋಟಿ ಮಹಿಳಾ ಮತದಾರರಿದ್ದಾರೆ.48 ಸಾವಿರ ತೃತೀಯ ಲಿಂಗಿ ಮತದಾರರಿದ್ದಾರೆ ಎಂದು ಮಾಹಿತಿ ನೀಡಿದರು.

ಪುಟ 2

## ಸಂಕ್ಷಿಪ್ತ ಸುದ್ದಿ

### ಕೆಎಸ್ ಈಶ್ವರಪ್ಪ ಸಂಧಾನ ವಿಫಲ



**ಶಿವಮೊಗ್ಗ:** ತನ್ನ ಪುತ್ರ ಕೆಇ ಕಾಂತೇಶ್‌ಗೆ ಬಿಜೆಪಿ ಟಿಕೆಟ್ ಕೈತಪ್ಪಿದ ಕಾರಣದಿಂದ ಬಿಎಸ್ ಯಡಿಯೂರಪ್ಪ ವಿರುದ್ಧ ಆಕ್ರೋಶಗೊಂಡಿರುವ ಕೆಎಸ್ ಈಶ್ವರಪ್ಪ ಅವರು ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಬಂಡಾಯ ಸ್ಪರ್ಧೆ ಮಾಡುವುದಾಗಿ ಘೋಷಣೆ ಮಾಡಿದ್ದಾರೆ. ಇದರಿಂದಾಗಿ ಯಡಿಯೂರಪ್ಪ ಪುತ್ರ ಬಿವೈ ರಾಘವೇಂದ್ರಗೆ ಸೋಲಿನ ಭೀತಿ ಎದುರಾಗಿದ್ದು, ಬಿಜೆಪಿ ನಾಯಕರು ಈಶ್ವರಪ್ಪ ಅವರ ಮನವೊಲಿಕೆಗೆ ಹರಸಾಹಸ ಪಡುತ್ತಿದ್ದಾರೆ. ಪುಟ 2

### ಕಂಡಕ್ಟರ್‌ಗಳಿಗೆ ಅಧಿಕಾರಿಗಳಿಂದ ಟಾರ್ಚರ್



**ಬೆಂಗಳೂರು:** ಮಹಿಳೆಯರ ಸಬಲೀಕರಣಕ್ಕಾಗಿ ರಾಜ್ಯ ಸರ್ಕಾರ ಶಕ್ತಿ ಯೋಜನೆ ಜಾರಿ ಮಾಡಿದೆ. ಆದರೆ ಶಕ್ತಿ ಯೋಜನೆಗಾಗಿ ಕೆಎಸ್ ಆರ್ ಟಿಸಿಯಲ್ಲಿ ಮಹಿಳಾ ಕಂಡಕ್ಟರ್ ಗಳಿಗೆ ಹಗಲು ರಾತ್ರಿ ಶ್ರಮಿಸುವಂತೆ ಅಧಿಕಾರಿಗಳು ಟಾರ್ಚರ್ ನೀಡುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಪುಟ 2

### ರಾಜ್ಯದಲ್ಲಿ ಬೆಳ್ಳಂ ಬೆಳಿಗ್ಗೆ ರಸ್ತೆ ಅಪಘಾತದಲ್ಲಿ ನಾಲ್ವರ ಸಾವು

**ದಾವಣಗೆರೆ:** ಟಿಪ್ಪರ್ ಡಿಕ್ಕಿಯಾಗಿ ಇಬ್ಬರು ಬೈಕ್ ಸವಾರರು ಮೃತಪಟ್ಟಿರುವ ಘಟನೆ ಹರಿಹರ ತಾಲೂಕಿನ ಹನಗವಾಡಿ ಬಳಿಯ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಘಟನೆ ನಡೆದಿದೆ. ಅಪಘಾತದಲ್ಲಿ ರಾಕೇಶ್ (22), ಆಕಾಶ್ (23) ಮೃತಪಟ್ಟಿದ್ದಾರೆ. ಪುಟ 2

## ಲೋಕಸಭಾ ಚುನಾವಣೆಯಲ್ಲಿ ಯಾರ ಕೈ ಹಿಡಿಯಲಿದ್ದಾನೆ ಮತದಾರ ಪ್ರಭು

# ಎನ್‌ಡಿಎಗೆ ಜಯದ ನಿರೀಕ್ಷೆ

**ಬೆಂಗಳೂರು:** ಏಪ್ರಿಲ್ 19 ರಿಂದ 7 ಹಂತದಲ್ಲಿ ಲೋಕ ಸಭಾ ಚುನಾವಣೆ ನಡೆಯಲಿದೆ. ಸದ್ಯ ಪೀಪಲ್ಸ್ ಇನ್ ಸೈಟ್, ಪೋಲ್ ಸ್ಟ್ರಾಟ್ ನಡೆಸಿದ ಬೃಹತ್ ಸಮೀಕ್ಷೆಯಲ್ಲಿ ಮತದಾರ ಪ್ರಭು ಯಾರ ಮೇಲೆ ಹೆಚ್ಚು ಒಲವು ಇಟ್ಟುಕೊಂಡಿದ್ದಾನೆ ಎಂಬ ಅಂಶ ಹೊರ ಬಂದಿದೆ. ಫೆಬ್ರವರಿ 15ರಿಂದ ಮಾರ್ಚ್ 15ರವಗೆ ನಡೆದ ಸಮೀಕ್ಷೆಯಲ್ಲಿ ದೇಶದ 20 ಲಕ್ಷ ಜನರಿಂದ ಅಭಿಪ್ರಾಯ ಸಂಗ್ರಹಿಸಲಾಗಿದೆ. ಲೋಕಸಭೆಯ 543 ಕ್ಷೇತ್ರ ಹಾಗೂ 4 ಸಾವಿರದ 123 ವಿಧಾನಸಭಾ ಕ್ಷೇತ್ರಗಳ ಮತದಾರರಿಂದ ಐವಿಆರ್ ಅಂದ್ರೆ ಫೋನ್ ಮೂಲಕ ಮಾತನಾಡಿ ಡೇಟಾ ಸಂಗ್ರಹಿಸಲಾಗಿದೆ.

ಸಮೀಕ್ಷೆ ಪ್ರಕಾರ ಉತ್ತರ ಪ್ರದೇಶದಲ್ಲಿ ಎನ್‌ಡಿಎ ಮೈತ್ರಿಕೂಟಕ್ಕೆ ಮತದಾರರು ಜೈ ಹೋ ಎಂದಿದ್ದಾರೆ. 80 ಕ್ಷೇತ್ರಗಳು ಇರುವ ಉತ್ತರ ಪ್ರದೇಶದಲ್ಲಿ ಬರೋಬ್ಬರಿ 73 ಕ್ಷೇತ್ರಗಳಲ್ಲಿ ಎನ್‌ಡಿಎ ಭರ್ಜರಿ ಗೆಲುವು ದಾಖಲಿಸಲಿದೆ ಅಂತ ಸಮೀಕ್ಷೆಯಲ್ಲಿ ಗೊತ್ತಾಗಿದೆ. ಆದ್ರೆ ಇಂಡಿಯಾ ಮೈತ್ರಿಕೂಟ ಕೇವಲ 7 ಕ್ಷೇತ್ರಗಳಲ್ಲಿ ಗೆಲ್ಲುತ್ತೆ ಅಂತ ಸಮೀಕ್ಷೆ ಹೇಳಿದೆ.

ಇನ್ನು, ಪಂಜಾಬ್ ವಿಷ್ಯಕ್ಕೆ ಬಂದ್ರೆ ಕೇಜ್ರಿವಾಲ್ ನೇತೃತ್ವದ ಆಪ್‌ಗೆ ಮತದಾರರು ಮನಸೋತಿದ್ದಾರೆ. ಇರುವ 13 ಕ್ಷೇತ್ರಗಳಲ್ಲಿ ಆಪ್ ಬರೋಬ್ಬರಿ 11 ಕ್ಷೇತ್ರಗಳಲ್ಲಿ ಗೆಲುವು ದಾಖಲಿಸಲಿದೆ ಅಂತ ಸಮೀಕ್ಷೆ ಹೇಳಿದೆ.. ಅತ್ತ ಬಿಜೆಪಿ ಕೇವಲ2 ಸ್ಥಾನಗಳಲ್ಲಿ ಮಾತ್ರ ಗೆಲುವು ದಾಖಲಿಸು ಸಾಧ್ಯತೆ ಇದೆ.

ಇನ್ನು, ಪ್ರಧಾನಿ ಮೋದಿ ತವರು ರಾಜ್ಯ, ಗುಜರಾತ್‌ನಲ್ಲಿ ಬಿಜೆಪಿ ವೈಟ್ ವಾಷ್ ಮಾಡಿದೆ. ಅಂದ್ರೆ, ಗುಜರಾತ್‌ನಲ್ಲಿರುವ 26 ಲೋಕಸಭೆ ಕ್ಷೇತ್ರದಲ್ಲೂ ಕೇಸರಿ ಪಡೆ ಜಯಕ್ಕೆ ಮುತ್ತಿಕ್ಕಲಿದೆ ಎಂದು ಸಮೀಕ್ಷೆ ತಿಳಿಸುತ್ತಿದೆ.

ಇನ್ನು ಕರ್ನಾಟಕದಲ್ಲೂ ಬಿಜೆಪಿ ಮೇಲೆ ಮತದಾರರು ಒಲುವು ತೋರಿದ್ದಾರೆ ಅನ್ನೋದು ಸಮೀಕ್ಷೆ ಮೂಲಕ ಗೊತ್ತಾಗಿದೆ. ಒಟ್ಟು 28 ಲೋಕಸಭಾ ಕ್ಷೇತ್ರಗಳ ಪೈಕಿ 22 ಕ್ಷೇತ್ರದಲ್ಲಿ ಬಿಜೆಪಿ ಗೆಲುವು ದಾಖಲಿಸಲಿದೆ ಅಂತ ಸರ್ವೆ ಹೇಳಿದೆ. ಇನ್ನು 5 ಸ್ಥಾನದಲ್ಲಿ ಕಾಂಗ್ರೆಸ್ ಮತ್ತು ಒಂದು ಸ್ಥಾನದಲ್ಲಿ ಜೆಡಿಎಸ್ ಅಭ್ಯರ್ಥಿ ಜಯ ಗಳಿಸುತ್ತಾರೆ ಅನ್ನೋದು ಸಮೀಕ್ಷೆ ಮೂಲಕ ಗೊತ್ತಾಗಿದೆ.

ಪುಟ 2



## ಆಂಧ್ರದಿಂದ ಮೋದಿ ಮೊದಲ ರ್‍ಯಾಲಿ ಆರಂಭ

**ನವದೆಹಲಿ:** ಲೋಕಸಭಾ ಚುನಾವಣೆಯ ದಿನಾಂಕ ಘೋಷಣೆಯಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಆಂಧ್ರಪ್ರದೇಶದ ಪಲನಾಡುವಿನಿಂದ ಮೊದಲ ಚುನಾವಣಾ ರ್‍ಯಾಲಿಯನ್ನು ಆರಂಭಿಸಲಿದ್ದಾರೆ. ಟಿಡಿಪಿ ಅಧ್ಯಕ್ಷ ಎನ್ ಚಂದ್ರಬಾಬು ನಾಯ್ಡು ಮತ್ತು ಜೆಎಸ್‌ಪಿ ಮುಖ್ಯಸ್ಥ ಪವನ್ ಕಲ್ಯಾಣ್ ಅವರೊಂದಿಗೆ ವೇದಿಕೆ ಹಂಚಿಕೊಳ್ಳಲಿದ್ದಾರೆ. ಚಂದ್ರಬಾಬು ನಾಯ್ಡು ಅವರು ಪ್ರಧಾನಿ ಮೋದಿಗೆ ಔಪಚಾರಿಕ ಆಹ್ವಾನವನ್ನು ನೀಡಿದರು ಮತ್ತು ಮಾರ್ಚ್ 17 ರಂದು ಚಿಲಕಲೂರಿಪೇಟಾ ರ್‍ಯಾಲಿಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು ಎಂದು ಟಿಡಿಪಿ ನಾಯಕ ತಿಳಿಸಿದ್ದಾರೆ.

ಮಾರ್ಚ್ 9 ರಂದು ರಾಷ್ಟ್ರೀಯ ರಾಜಧಾನಿಯಲ್ಲಿ ಭಾರತೀಯ ಜನತಾ ಪಕ್ಷವು ಟಿಡಿಪಿಯೊಂದಿಗೆ ಸೀಟು ಹಂಚಿಕೆ ಮಾತುಕತೆಯನ್ನು ಅಂತಿಮಗೊಳಿಸಿತ್ತು.

ಪುಟ 2



## ಬೆಂಗಳೂರಿನಲ್ಲಿ ಅಲರ್ಟ್



**ಬೆಂಗಳೂರು:** ಲೋಕಸಭಾ ಚುನಾವಣೆ ಹಿನ್ನೆಲೆ ನಗರದಲ್ಲಿ ಅಲರ್ಟ್ ಆಗಿದ್ದು, ಮಾದರಿ ನೀತಿಸಂಹಿತೆ ಜಾರಿಗೆ ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಆದೇಶ ಹೊರಡಿಸಿದ್ದಾರೆ. ಅಧಿಕಾರಿಗಳ ಜೊತೆ ಸಭೆ ನಡೆಸಿ ಸೂಚನೆ ನೀಡಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಜನಪ್ರತಿನಿಧಿಗಳ ಹೆಸರು, ಭಾವಚಿತ್ರ, ತೆಗೆಯಲು ತಿಳಿಸಿದ್ದು, ಮಾದರಿ ನೀತಿ ಸಂಹಿತೆ ಉಲ್ಲಘನೆಗಳ ಮೇಲೆ ನಿಗಾವಹಿಸಲು ಸೂಚಿಸಿದ್ದಾರೆ. ಸರ್ಕಾರಿ ಕಛೇರಿ, ಸರ್ಕಾರಿ ಆಸ್ತಿಗಳು ಸೇರಿದಂತೆ ಇನ್ನಿತರೆ ಸಾರ್ವಜನಿಕ ಸ್ಥಳಗಳಲ್ಲಿ ಜನಪ್ರತಿನಿಧಿಗಳ ಹೆಸರು, ಭಾವಚಿತ್ರ ಹಾಗೂ ಜಾಹೀರಾತುಗಳನ್ನ ತೆಗೆಯಲು ಅಧಿಕಾರಿಗಳಿಗೆ ಆದೇಶಿಸಲಾಗಿದೆ.

ಪುಟ 2

## ಶ್ರೀರಾಮುಲು ವಿರುದ್ಧ ತೊಡೆ ತಟ್ಟಿದ ಮಾಜಿ ಶಾಸಕ



**ಚಿತ್ರದುರ್ಗ:** ಲೋಕಸಭೆ ಚುನಾವಣೆಗೆ ಅಖಾಡ ಸಿದ್ದವಾಗಿದೆ. ರಾಜ್ಯದಲ್ಲಿ ಬಂಡಾಯದ ರಾಜಕೀಯ ಆರಂಭವಾಗಿದೆ. ಅಸಮಾಧಾನಿತರು ಪಕ್ಷೇತರವಾಗಿ ಸ್ಪರ್ಧಿಸುತ್ತಿದ್ದಾರೆ. ಬಳ್ಳಾರಿ ಲೋಕಸಭಾ ಕ್ಷೇತ್ರದ ಟಿಕೆಟ್ ತಪ್ಪಿದ್ದಕ್ಕೆ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಸ್. ತಿಪ್ಪೇಸ್ವಾಮಿ ಅಸಮಾಧಾನಗೊಂಡಿದ್ದು, ಬಿ ಶ್ರೀರಾಮುಲು ವಿರುದ್ಧ ತೊಡೆ ತಟ್ಟಿದ್ದಾರೆ. ಬಳ್ಳಾರಿ ಲೋಕಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಲು ನಿರ್ಧರಿಸಿದ್ದಾರೆ.

ಬಳ್ಳಾರಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಾನು ಬಳ್ಳಾರಿ ಲೋಕಸಭೆ ಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿ ಆಗಿದ್ದೆ. ಬಿಎಸ್ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಶ್ರೀರಾಮುಲು ಜೊತೆಗೂ ಚರ್ಚಿಸಿದ್ದೆ. ಯಡಿಯೂರಪ್ಪ ಬಳಿ ಹೋಗೋಣ ಎಂದು ಶ್ರೀರಾಮುಲು ಹೇಳಿದ್ದರು. ನನ್ನ ಜತೆ ಚರ್ಚೆ ಮಾಡದೆ ಶ್ರೀರಾಮುಲುಗೆ ಟಿಕೆಟ್ ಘೋಷಿಸಿದ್ದಾರೆ. ಹಾಗಾಗಿ ನಾನು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಲು ನಿರ್ಧರಿಸಿದ್ದೇನೆ ಎಂದು ಹೇಳಿದರು.

ಎಸ್. ತಿಪ್ಪೇಸ್ವಾಮಿ 2013ರಲ್ಲಿ ಬಿಎಸ್‌ಆರ್ ಪಕ್ಷದಿಂದ ಮೊಳಕಾಲ್ಮೂರು ಕ್ಷೇತ್ರದಿಂದ ಗೆದ್ದಿದ್ದರು.

ಪುಟ 2

## ಕರ್ನಾಟಕ ರತ್ನ ಪುನೀತ್ ರಾಜ್‌ಕುಮಾರ್ ಜನ್ಮದಿನ

## ಕಂಠೀರವದಲ್ಲಿ ಅಭಿಮಾನಿಗಳ ಸಾಗರ



**ಬೆಂಗಳೂರು:** ಇಂದು ಸ್ಯಾಂಡಲ್‌ವುಡ್ ನಟ ಪವರ್ ಸ್ಟಾರ್ ದಿವಂಗತ ಪುನೀತ್ ರಾಜ್‌ಕುಮಾರ್ ಅವರ ಜನ್ಮದಿನ. ನೆಚ್ಚಿನ ನಟ ಜನ್ಮದಿನವನ್ನು ಅಭಿಮಾನಿಗಳು ಸ್ಮರಣೀಯವಾಗಿ ಆಚರಿಸುತ್ತಿದ್ದಾರೆ. ನಿನ್ನೆ ರಾತ್ರಿಯಿಂದಲೇ ಕಂಠೀರವ ಸ್ಟುಡಿಯೋಗೆ ಅಭಿಮಾನಿಗಳು ಆಗಮಿಸುತ್ತಿದ್ದು, ಅಪ್ಪು ಸಮಾಧಿ ದರ್ಶನ ಪಡೆಯುತ್ತಿದ್ದಾರೆ.

ಅಪ್ಪು ಅವರ 49ನೇ ಜನ್ಮದಿನದ ಹಿನ್ನೆಲೆಯಲ್ಲಿ ಶನಿವಾರ ರಾತ್ರಿ ನಟ ಯುವ ರಾಜ್‌ಕುಮಾರ್ ಪುನೀತ್ ಸಮಾಧಿ ದರ್ಶನ ಪಡೆದಿದ್ದಾರೆ. ನಂತರ ಅಪ್ಪು ಪುತ್ಥಳಿ ಅನಾವರಣ ಮಾಡಿದ್ದಾರೆ. ಭಾನುವಾರವಾದ ಇಂದು ನಗರದೆಲ್ಲೆಡೆ ಅಪ್ಪು ಪುತ್ಥಳಿಯ ತೇರು ಸಂಚರಿಸಲಿದೆ.

ಕುಟುಂಬ ಸಮೇತ ಅಪ್ಪು ಸಮಾಧಿ ದರ್ಶನಕ್ಕೆ ಅಭಿಮಾನಿಗಳು ಆಗಮಿಸುತ್ತಿದ್ದಾರೆ. ಎಲ್ಲೆಡೆ ಫ್ಯಾನ್ಸ್ ಪಟಾಕಿ ಸಿಡಿಸಿ ಸಂಭ್ರಮಿಸುತ್ತಿದ್ದಾರೆ. ಶನಿವಾರ ರಾತ್ರಿ 11 ಗಂಟೆಯಿಂದಲೇ ಕಂಠೀರವ ಸ್ಟೂಡಿಯೋಗೆ ಅಪ್ಪು ಫ್ಯಾನ್ಸ್ ಆಗಮಿಸುತ್ತಿದ್ದಾರೆ.

ಪುಟ 2

## ಬೆಂಗಳೂರಲ್ಲಿ ನೀರಿನ ಅಭಾವ, ಐಪಿಎಲ್ ಪಂದ್ಯ ಸ್ಥಳಾಂತರಕ್ಕೆ ಚಿಂತನೆ

## ಬಂದ್ ಎಚ್ಚರಿಕೆ ನೀಡಿದ ವಾಟಾಳ್




**ಬೆಂಗಳೂರು:** ಐಪಿಎಲ್ ಪಂದ್ಯ ಬೆಂಗಳೂರಿನಿಂದ ಬೇರೆ ರಾಜ್ಯಕ್ಕೆ ಸ್ಥಳಾಂತರವಾಗುವ ಹಿನ್ನೆಲೆ ನಗರದ ಚಿನ್ನಸ್ವಾಮಿ ಕ್ರೀಡಾಂಗಣದ ಮುಖ್ಯದ್ವಾರ ಬಳಿ ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ಪ್ರತಿಭಟನೆ ಮಾಡಲಾಗಿದೆ. ಒಂದು ವೇಳೆ ಐಪಿಲ್ ನಡೆಸದೆ ಹೋದರೆ ಕರ್ನಾಟಕ ಬಂದ್ ಮಾಡುವ ಎಚ್ಚರಿಕೆ ನೀಡಿದ್ದಾರೆ.

ಪುಟ 2

### ವಿದ್ಯಾರ್ಥಿನಿ ಮೇಲೆ ಕಳ್ಳತನದ ಆರೋಪ

## ಮನನೊಂದು ಆತ್ಮಹತ್ಯೆ



**ಬಾಗಲಕೋಟೆ:** 2 ಸಾವಿರ ರೂ. ಕಳ್ಳತನವಾಗಿದೆ ಎಂದು ಶಿಕ್ಷಕಿಯರು ಸಮವಸ್ತ್ರ ಬಿಚ್ಚಿಸಿ ವಿದ್ಯಾರ್ಥಿನಿಯನ್ನು ಪರಿಶೀಲನೆ ನಡೆಸಿದ್ದು ಇದರಿಂದ ಮನನೊಂದ ವಿದ್ಯಾರ್ಥಿನಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬಾಗಲಕೋಟೆಯಲ್ಲಿ ನಡೆದಿದೆ. 8ನೇ ತರಗತಿ ಓದುತ್ತಿದ್ದ ದಿವ್ಯಾ ಬಾರಕೇರ(14) ಆತ್ನಹತ್ಯೆ ಮಾಡಿಕೊಂಡ ವಿದ್ಯಾರ್ಥಿನಿ. ಮಾರ್ಚ್ 16 ರಂದು ವಿದ್ಯಾರ್ಥಿನಿ ಶಾಲೆಯಿಂದ ಮನೆಗೆ ಬಂದು ನೇಣಿಗೆ ಶರಣಾಗಿದ್ದಾಳೆ.

ಆ ಶಿಕ್ಷಕಿಯ 2 ಸಾವಿರ ರೂ ಶಾಲೆಯಲ್ಲಿ ಕಳೆದು ಹೋಗಿತ್ತು. ಆದರೆ ಶಿಕ್ಷಕಿಗೆ ವಿದ್ಯಾರ್ಥಿನಿಯರ ಮೇಲೆ ಸಂಶಯ. ಇದರಿಂದ ಐದು ಜನ ವಿದ್ಯಾರ್ಥಿನಿಯರ ಸಮವಸ್ತ್ರ ಬಿಚ್ಚಿ ಚೆಕ್ ಮಾಡಿದ್ದಾರಂತೆ. ಜೊತೆಗೆ ದೇವರ ಮೇಲೆ ಆಣೆ ಮಾಡಿಸಿದ್ದಾರಂತೆ. ಅವಮಾನದಿಂದ ಇದರಲ್ಲಿ ಎಂಟನೇ ತರಗತಿ ವಿದ್ಯಾರ್ಥಿನಿ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ತನ್ನ ಮೇಲೆ ಬಂದ ಸುಳ್ಳು ಆರೋಪಕ್ಕೆ ಬಾಲಕಿ ತನ್ನ ಜೀವವನ್ನು ತಾನೆ ಅಂತ್ಯ ಮಾಡಿಕೊಂಡಿದ್ದಾಳೆ. ಇದರಿಂದ ಬಾಲಕಿಯ ಕುಟುಂಬಸ್ಥರು ಕಣ್ಣೀರಲ್ಲಿ ಕೈ ತೊಳೆಯುತ್ತಿದ್ದಾರೆ. ಮಗಳ ನೆನೆದು ಬಿಕ್ಕಿ ಬಿಕ್ಕಿ ಅಳುತ್ತಿದ್ದಾರೆ. ಈ ವಿದ್ಯಾರ್ಥಿನಿ ಹೆಸರು ದಿವ್ಯಾ ಬಾರಕೇರ, 14 ವರ್ಷ ವಯಸ್ಸು. ವಿದ್ಯಾರ್ಥಿನಿ ಆತ್ಮಹತ್ಯೆಗೆ ಆಕೆಯ ಶಿಕ್ಷಕಿಯೇ ಕಾರಣರಾಗಿದ್ದಾರೆ. ಈ ಘಟನೆ ನಡೆದಿದ್ದು ಬಾಗಲಕೋಟೆ ತಾಲ್ಲೂಕಿನ ಕದಂಪುರ ಗ್ರಾಮದಲ್ಲಿ.

ಗ್ರಾಮದ ಕದಂಪುರ ಪ್ರೌಢಶಾಲೆಯ ಶಿಕ್ಷಕಿ ಜಯಶ್ರೀ ಮಿರ್ಶಿಕೋಟಿ ಇವರ 2 ಸಾವಿರ ಹಣ ಮಾರ್ಚ್ 14 ರಂದು ಕಳೆದಿತ್ತು. ಆಗ ಕನ್ನಡ ಶಿಕ್ಷಕಿ ಜಯಶ್ರೀ ಹಾಗೂ ಮುಖ್ಯಶಿಕ್ಷಕ ಇತರೆ ಶಿಕ್ಷಕರು ವಿದ್ಯಾರ್ಥಿನಿಯರ ಮೇಲೆ ಸಂಶಯ ಪಟ್ಟಿದ್ದರು. 10ನೇ ತರಗತಿಯ ನಾಲ್ವರು ಎಂಟನೇ ತರಗತಿಯ ದಿವ್ಯಾ ಮೇಲೆ ಸಂಶಯ ಪಟ್ಟಿದ್ದರು. ಹಣ ಯಾರು ಕಳ್ಳತನ ಮಾಡಿದ್ದೀರಿ ಕೊಡಿ ಎಂದು ಗದರಿಸಿದ್ದರು. ಸಾಲದು ಎಂಬಂತೆ ಸಮವಸ್ತ್ರ ಬಿಚ್ಚಿಸಿ ಚೆಕ್ ಮಾಡಿದ್ದಾರೆ.

ಪುಟ 2

## ಬೆಂಗಳೂರಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ ಲಕ್ಷ ಲಕ್ಷ ಸೀಜ್



**ಬೆಂಗಳೂರು:** ದಾಖಲೆ ಇಲ್ಲದೇ ಸಾಗಿಸುತ್ತಿದ್ದ ಲಕ್ಷ ಲಕ್ಷ ಹಣವನ್ನು ಬೆಂಗಳೂರು ಪೊಲೀಸರು ಸೀಜ್ ಮಾಡಿದ್ದಾರೆ. ಉದ್ಯಮಿಯೊಬ್ಬರು ತಡರಾತ್ರಿ ಸಾಗಿಸುತ್ತಿದ್ದ ಹಣವನ್ನು ಚೆಕ್‌ಪೋಸ್ಟ್ ಬಳಿ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಹೊಸೂರು ಮೂಲದ ನಾರಾಯಣ್ ಎಂಬ ವ್ಯಕ್ತಿಯಿಂದ ಹಣ ಸೀಜ್ ಮಾಡಲಾಗಿದೆ. ಕೋಳಿ ವ್ಯಾಪಾರ ಮಾಡುತ್ತಿದ್ದು, ಅಂಗಡಿಗಳಿಂದ ಹಣ ಕಲೆಕ್ಟ್ ಮಾಡಿಕೊಂಡು ಹೋಗುತ್ತಿದ್ದಾಗ ವಶಕ್ಕೆ ಪಡೆದಿದ್ದಾರೆ ಎಂದು ಪೊಲೀಸರ ಮುಂದೆ ನಾರಾಯಣ್ ಹೇಳಿಕೊಂಡಿದ್ದಾನೆ. ಸುಮಾರು 12.16 ಲಕ್ಷ ರೂ. ಹಣವನ್ನು ಅಶೋಕ್ ನಗರ ಠಾಣಾ ವ್ಯಾಪ್ತಿಯಲ್ಲಿ ಸೀಜ್ ಮಾಡಲಾಗಿದೆ. ಘಟನೆ ಸಂಬಂಧ ಅಶೋಕ್ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪುಟ 2

# ಕರಾರಸಾಸಂ ಸಿಬ್ಬಂದಿಗಳ ಬಾಕಿ ಮೊತ್ತ ಪಾವತಿಸಲು 84 ಕೋಟಿ ರೂ. ಮಂಜೂರು

**ಬೆಂಗಳೂರು:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಸಿಬ್ಬಂದಿಗಳ ತುಟ್ಟಿಭತ್ಯೆ ಹಿಂಬಾಕಿ, ಗಳಿಕೆ ರಜೆ ನಗದೀಕರಣ ಹಾಗೂ ಉಪಧನದ ಬಾಕಿ ಮೊತ್ತ ಪಾವತಿಸಲು ಒಟ್ಟು ರೂ. 84 ಕೋಟಿಗಳನ್ನು ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಮಂಜೂರು ಮಾಡಿದ್ದಾರೆ. ಸಂಸ್ಥೆಯ ಸಿಬ್ಬಂದಿಗಳಿಗೆ (ಸದರಿ ಅವಧಿಯಲ್ಲಿನ ನಿವೃತ್ತ ಸಿಬ್ಬಂದಿಗಳನ್ನು ಸೇರಿ) 2022-23




ಮೇ ಸಾಲಿನ ಗಳಿಕೆ ರಜೆ ನಗದೀಕರಣದ ಮೊತ್ತ ರೂ.24 ಕೋಟಿಯನ್ನು ಹಾಗೂ ಜುಲೈ-2022 ರಿಂದ ನವೆಂಬರ್-2022 ರ ಮಾಹೆಯ 5 ತಿಂಗಳು, ಜನವರಿ-2023 ರಿಂದ ಜುಲೈ-2023 ರವರೆಗಿನ 7 ತಿಂಗಳು ಮತ್ತು ಜುಲೈ-2023 ರಿಂದ ಅಕ್ಟೋಬರ್-2023 ರವರೆಗಿನ 4 ತಿಂಗಳುಗಳ ಹಿಂಬಾಕಿ ತುಟ್ಟಿಭತ್ಯೆ ಮೊತ್ತ ರೂ. 54 ಕೋಟಿಯನ್ನು ಪಾವತಿಸಲು ಆದೇಶಿಸಲಾಗಿದೆ.

ಜನವರಿ-2024 ರಲ್ಲಿ ಸಂಸ್ಥೆಯ ಸೇವೆಯಿಂದ ನಿವೃತ್ತರಾದ ಸಿಬ್ಬಂದಿಗಳ ಉಪಧನ ರೂ.6 ಕೋಟಿಮೊತ್ತವನ್ನು ಮಾರ್ಚ್ 15 2024 ರಂದು ಮಂಜೂರು ಮಾಡಲಾಗಿದೆ ಎಂದು ಸಂಸ್ಥೆಯ ಅಧಿಕೃತ ಪ್ರಕಟಣೆ ತಿಳಿಸಿದೆ.

# ದೃಷ್ಟಿ ದೋಷ ಮುಕ್ತಗೊಳಿಸಲು ಆಶಾಕಿರಣ ಯೋಜನೆ ಸಹಕಾರಿ

**ಚಾಮರಾಜನಗರ:** ದೃಷ್ಟಿ ದೋಷ ಮುಕ್ತ ಜಿಲ್ಲೆಯನ್ನಾಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಆಶಾಕಿರಣ ಯೋಜನೆಯನ್ನು ಜಾರಿಗೆ ತಂದಿದೆ ಎಂದು ಶಾಸಕರು ಹಾಗೂ ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.



ನಗರದ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂಧತ್ವ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಮನೆ ಬಾಗಿಲಿಗೆ ಆಶಾಕಿರಣ ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರಿಗೆ ಹಾಗೂ ಮಕ್ಕಳಿಗೆ ಕನ್ನಡಕ ವಿತರಿಸಿ ಅವರು ಮಾತನಾಡಿದರು.

ಆಶಾಕಿರಣವು ರಾಜ್ಯ ಸರ್ಕಾರದ ಒಂದು ಮಹತ್ವಾಕಾಂಕ್ಷೆ ಯೋಜನೆಯಾಗಿದೆ. ದೃಷ್ಟಿದೋಷ ಮುಕ್ತ ರಾಜ್ಯವನ್ನಾಗಿಸುವ ಉದ್ದೇಶವನ್ನು ಆಶಾಕಿರಣ ಯೋಜನೆ ಹೊಂದಿದೆ. ಆಶಾಕಿರಣ ಯೋಜನೆಯಡಿ ಮನೆಬಾಗಿಲಿಗೆ ಬಂದು ಕುಟುಂಬದ ಪ್ರತಿ ಸದಸ್ಯರ ಕಣ್ಣುಗಳನ್ನ ತಪಾಸಣೆ ಮಾಡಿ ದೃಷ್ಟಿ ದೋಷ'ವುಳ್ಳವರಿಗೆ ಕನ್ನಡಕ ನೀಡಲಾಗುತ್ತಿದೆ ಎಂದರು.

ಮನುಷ್ಯನಿಗೆ ಕಣ್ಣು ತುಂಬಾ ಮುಖ್ಯವಾಗಿದ್ದು ವಯೋಸಹಜ, ಅನುವಂಶಿಯತೆ, ಹಾಗೂ ಇನ್ನಿತರ ಆರೋಗ್ಯ ಸಮಸ್ಯೆಯಿಂದ ದೃಷ್ಟಿದೋಷ, ಅಂದತ್ವ ಉಂಟಾಗುತ್ತದೆ. ಇದರ ನಿವಾರಣೆಗೆ ಆಶಾಕಿರಣ ಕಾರ್ಯಕ್ರಮವನ್ನು ಅನು?ಾನಗೊಳಿಸಲಾಗಿದೆ. ರಾಜ್ಯದ ನಾಲ್ಕು ಜಿಲ್ಲೆಗಳಾದ ಹಾವೇರಿ, ಚಾಮರಾಜನಗರ, ಚಿಕ್ಕಬಳ್ಳಾಪುರ, ಕಲ್ಬುರ್ಗಿ ಜಿಲ್ಲೆಗಳಲ್ಲಿ ಮೊದಲ ಬಾರಿಗೆ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯು 10 ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿದ್ದು, ಅದರಲ್ಲಿ ಆಶಾಕಿರಣ ಯೋಜನೆಯಡಿ 8,60,000 ಜನರನ್ನು ತಪಾಸಣೆಗೆ ಒಳಪಡಿಸಲಾಗಿದೆ. ದೃಷ್ಟಿದೋಷ ಉಂಟಾಗಿರುವ ವ್ಯಕ್ತಿಗಳಿಗೆ ಅಗತ್ಯವಾಗಿರುವ ಕನ್ನಡಕ ಹಾಗೂ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಅವರು ಮಾತನಾಡಿ ಇತರೆ ಜಿಲ್ಲೆಗಳಿಗೆ ಹೋಲಿಸಿದ್ದಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ ಮಕ್ಕಳು ಉತ್ತಮವಾದ ದೃಷ್ಟಿಹೊಂದಿದ್ದಾರೆ. ಇದು ಬಹಳ ಸಮಾಧಾನದ ಸಂಗತಿಯಾಗಿದೆ. ಪ್ರಸ್ತುತ ನಮ್ಮ ಜಿಲ್ಲೆಯಲ್ಲಿ 31 ಸಾವಿರಕ್ಕೂ ಹೆಚ್ಚು ಕನ್ನಡಕಗಳನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಇದರಲ್ಲಿ ಮೂರುವರೆ ಸಾವಿರ ಮಕ್ಕಳಿದ್ದಾರೆ ಎಂದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಚಂದ್ರಶೇಖರ್, ತಾಲೂಕು ಆರೋಗ್ಯಾಧಿಕಾರಿ ಡಾ. ಶ್ರೀನಿವಾಸ್, ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಉಮಾರಾಣಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್ ಉಪಸ್ಥಿತರಿದರು.

# 40 ವರ್ಷ ಪೂರೈಸಿದ ಪ್ರತಿಯೊಬ್ಬರು ಕಣ್ಣಿನ ಒತ್ತಡ ಪರೀಕ್ಷೆ ಮಾಡಿಸಿಕೊಳ್ಳುವುದು ಸೂಕ್ತ

**ಮೈಸೂರು:** ಪ್ರತಿ ವರ್ಷ ಮಾರ್ಚ್ ಎರಡನೇ ವಾರದಲ್ಲಿ ವಿಶ್ವ ಗ್ಲಾಕೋಮ ಸಪ್ತಾಹವನ್ನು ಆಚರಿಸಲಾಗುತ್ತಿದ್ದು, ಯಾವುದೇ ರೋಗಲಕ್ಷಣಗಳಿಲ್ಲದೆ ದೃಷ್ಟಿ ಕದಿಯುವ ಕಾಯಿಲೆಯನ್ನು 40 ವರ್ಷ ಪೂರೈಸಿದ ಪ್ರತಿಯೊಬ್ಬರು ಕಣ್ಣಿನ ಒತ್ತಡ ಪರೀಕ್ಷೆ ಮಾಡಿಸಿಕೊಳ್ಳುವುದು ಸೂಕ್ತ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಕುಮಾರಸ್ವಾಮಿ ಪಿ.ಸಿ ಅವರು ಹೇಳಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನಡೆದ ವಿಶ್ವ ಗ್ಲಾಕೋಮಾ ಸಪ್ತಾಹ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಧುಮೇಹ ರಕ್ತದೊತ್ತಡ ಹಾಗೂ ಸಮೀಪ ದೃಷ್ಟಿ ದೋಷ ಇರುವವರಲ್ಲಿ ಗ್ಲಾಕೋಮಾ ಸಂಭವ ಹೆಚ್ಚಾಗುತ್ತಿದ್ದು, ವೈದ್ಯರ ಸಲಹೆ ಮೇರೆಗೆ ಸೂಕ್ತ ಚಿಕಿತ್ಸೆ ಪಡೆಯುವುದು ಉತ್ತಮ. ಇಲ್ಲವಾದಲ್ಲಿ ಶಾಶ್ವತ ಅಂದತ್ವ ಉಂಟಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿಗಳಾದ ಡಾ.ಬೃಂದಾ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ.ಮಹದೇವ್ ಪ್ರಸಾದ್, ಕಾಲರಾ ನಿಯಂತ್ರಣಾಧಿಕಾರಿಗಳಾದ ಡಾ. ಪುಟ್ಟತಾಯಮ್ಮ, ಜಿಲ್ಲಾ ಮಟ್ಟದ ನೇತ್ರ ತಜ್ಞರು, ಐಇಸಿ ವಿಭಾಗದ ಮುನೀಂದ್ರಮ್ಮ, ಪದ್ಮಾವತಿ, ಸಹಾಯಕ ಆಡಳಿತ ಅಧಿಕಾರಿಗಳಾದ ಜೈ ಪ್ರಕಾಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.



# ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮಕೈಗೊಳ್ಳಿ

**ಚಾಮರಾಜನಗರ:** ಕ್ಷೇತ್ರದಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಎಂಎಸ್ಐಎಲ್ ಅಧ್ಯಕ್ಷರಾದ ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಪ್ರವಾಸಿಮಂದಿರದಲ್ಲಿ ನಡೆದ ಬರ ಪರಿಹಾರ ನಿರ್ವಹಣೆ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬರಪರಿಹಾರದಲ್ಲಿ ಸಾಕಾಷ್ಟು ಹಣವಿದೆ. ಟೆಂಡರ್ ಆಗಿರುವ ಬೋರ್‌ವೆಲ್ ಕೊರೆಸುವುದು, ಚಾಮರಾನಗರ ಪಟ್ಟಣದಲ್ಲಿ 25ಲಕ್ಷ ಅನುದಾನದಲ್ಲಿ ಎಲ್ಲಿ ಆದ್ಯತೆ ಇದೆ ಅಲ್ಲಿ ತಕ್ಷಣವೇ ಹೊಸಬೋರ್‌ವೆಲ್ ಕೊರೆಸಿ ನೀರು ಪೂರೈಕೆ ಮಾಡುವುದು. ಅಲ್ಲದೆ ರಾಜ್ಯ ವಿಪತ್ತು ಪ್ರತಿಕ್ರಿಯೆ ನಿಧಿಯಲ್ಲಿ 40ಲಕ್ಷ ಅನುದಾನವಿದ್ದು ಬರ ಅವರಿಸಿದ್ದು, ಮಳೆ ಇಲ್ಲದ ಕಾರಣದಿಂದ ಅಂತರ್ಜಲ ಕುಸಿದು ಕುಡಿಯುವ ನೀರಿನ ಸಮಸ್ಯೆ ತಲೆದೂರಿರುವುದರಿಂದ ಅಧಿಕಾರಿಗಳು ಕುಡಿಯುವ ನೀರಿಗೆ ಅಗತ್ಯಕ್ರಮಕೊಳ್ಳಬೇಕು ಎಂದರು. ಕ್ಷೇತ್ರದ ಚಾಮರಾಜನಗರ ಪಟ್ಟಣ ಹಾಗೂ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಗಮನಕ್ಕೆ ಬಂದಿದೆ. ಕ್ಷೇತ್ರದಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರು ಪೂರೈಸುವುದು ನಮ್ಮ ಜವಾಬ್ದಾರಿಯಾಗಿದೆ. ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮಕೈಗೊಳ್ಳಬೇಕು ಎಂದರು.

> » **ಪಟ್ಟಣದ ಕುಡಿಯುವ ನೀರಿಗೆ ವಿಶೇಷ ಆದ್ಯತೆ, ಸರ್ಕಾರದಿಂದ ಹೆಚ್ಚಿನ ಅನುದಾನ ಕೊಡಿಸುವೆ**

ಕುಡಿಯುವ ನೀರಿಗೆ ಸರ್ಕಾರ ಅನುದಾನ ಕೊಡಲು ಸಿದ್ದವಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕುಡಿಯುವ ನೀರಿಗೆ ಅನುದಾನ ಕೊಡುವುದಾಗಿ ತಿಳಿಸಿದ್ದಾರೆ. ಸರ್ಕಾರದಿಂದ ಅನುದಾನ ಕೊಡಿಸಲು ನಾನು ಬದ್ದನಾಗಿದ್ದೇನೆ. ಚಾಮರಾಜನಗರ ಪಟ್ಟಣದ ವಾರ್ಡ್ಗಳಿಗೆ ಕುಡಿಯುವ ನೀರು ಒದಗಿಸಲು ವಿಶೇಷ ಒತ್ತು ನೀಡಲಾಗಿದೆ. ಹಳೆಯ ಬೋರ್‌ನಲ್ಲಿ ನೀರು ಬರುತ್ತೆ ಎಂದರೆ ಅದನ್ನೇ ಸರಿಪಡಿಸಿ, ಎಲ್ಲೆಲ್ಲಿ ಹೊಸಬೋರ್, ಪೈಪ್‌ಲೈನ್ ಅವಶ್ಯಕತೆ ಇದೆ ಅಂತ ಕಡೆ ತುರ್ತಾಗಿ ಕಾಮಗಾರಿ ಮಾಡಿ ಜನರಿಗೆ ನೀರಿನ ಸಮಸ್ಯೆಯಾದಂತೆ ಕ್ರಮಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಸಭೆಯಲ್ಲಿ ತಹಸೀಲ್ದಾರ್ ಬಸವರಾಜು, ಪೌರಾಯುಕ್ತ ರಾಮದಾಸ್, ತಾ.ಪಂ.ಇಓ ಕೃಷ್ಣಪ್ಪ, ಜೆಇ ನಟರಾಜು ಭಾಗವಹಿಸಿದ್ದರು.



# ಸ್ವಚ್ಛ ಪರಿಸರ ಗ್ರಾಹಕನ ಹಕ್ಕು

## ಪ್ಲಾಸ್ಟಿಕ್ ನಿಷೇಧದ ಅಭಿಯಾನಕ್ಕೆ ಮುಂದಾಗಬೇಕು: ಡಾ. ಜಗನ್ನಾಥ್

ಮೈಸೂರು: ವಿಶ್ವ ಗ್ರಾಹಕ ಹಕ್ಕುಗಳ ದಿನಾಚರಣೆಯನ್ನು ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು, ನಾರಾಯಣ ಶಾಸ್ತ್ರಿ ರಸ್ತೆ, ಮೈಸೂರು ಇಲ್ಲಿ ಅತ್ಯಂತ ಅರ್ಥಗರ್ಭಿತವಾಗಿ ಆಚರಿಸಲಾಯಿತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ಜಗನ್ನಾಥ್, ಇಸ್ರೋ ನಿವೃತ್ತ ವಿಜ್ಞಾನಿ, ಪ್ರಸ್ತುತ ವಾತಾವರಣದ ಕ್ರಮಬದ್ದ ನಿರ್ವಹಣೆಗಾಗಿ ಇಂದಿನ ಯುವ-ಪೀಳಿಗೆ ಮತ್ತು ವಿದ್ಯಾರ್ಥಿಗಳು ಮುಂದಾಗಬೇಕು. ಅದರಲ್ಲೂ ಪ್ಲಾಸ್ಟಿಕ್ ಬಳಕೆಯನ್ನು ನಿಷೇದಿಸಬೇಕು. ಇದನ್ನು ಗಂಭೀರವಾಗಿ ಅಳವಡಿಸಿಕೊಂಡರೆ ಇಂದಿನ ವಿಶ್ವ ಗ್ರಾಹಕ ಹಕ್ಕುಗಳ ದಿನಾಚರಣೆಯಲ್ಲಿ ಸ್ವಚ್ಛ ಪರಿಸರದ ನಿರ್ದಿಷ್ಟತೆ ಸಾಕಾರವಾಗುತ್ತದೆ ಇದಕ್ಕೆ.. ಎಲ್ಲರೂ ಸಹಕರಿಸಬೇಕು ಎಂದು ಕರೆ ಕೊಟ್ಟರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹಿರಿಯ ಸಂಶೋಧನಾ ವಿಜ್ಞಾನಿ ಡಾ. ಜಿ. ಪಾಂಡುರಂಗ ಮೂರ್ತಿ ತಮ್ಮ ವಿಶೇಷ ವಾದ ದೃಶ್ಯ-ಪ್ರಾತ್ಯಕ್ಷಿಕೆ ಆಧಾರಿತ ಉಪನ್ಯಾಸದಲ್ಲಿ.. ವಿದ್ಯಾರ್ಥಿಗಳನ್ನು ಕುರಿತು, ಗ್ರಾಹಕ ಹಕ್ಕುಗಳು ದೇಶದ ಸರ್ವತೋಮುಖ ಅಭಿವೃದ್ಧಿಗೆ ಪೂರಕ ಹಾಗು ವಿಶ್ವ ಮಾನ್ಯತೆಗೆ ಪ್ರೇರಕ ಎಂದು ಗ್ರಾಹಕರ ನಿರ್ದಿಷ್ಟ ಹಕ್ಕುಗಳ ಘೋಷಣೆ ಮೊಳಗಿಸಿದರು.

ಮುಂದುವರೆದು, ಈ ದಿನದ ಸಂಭ್ರಮಾಚರಣೆಯಲ್ಲಿ, ಪ್ರಸ್ತುತ ಸಂದರ್ಭದಲ್ಲಿನ ಪ್ರಾಕೃತಿಕ ಅಕಾಲಿಕ ಸನ್ನಿವೇಶವನ್ನು ಉಲ್ಲೇಖಿಸಿ ಮನೆಯ ಚಾವಣಿಯನ್ನು ಸಮರ್ಪಕವಾಗಿ ಬಳಸಿಕೊಂಡು, ಮಳೆ ನೀರು ಕೊಯ್ಲು (ಖಠಂಜಿ-ಖಿಠಿ ಖಚಿಟ ಘಚಿಣಜಡಿ ಊಚಿಡಿತಜಣಟಿರ) ತಂತ್ರಜ್ಞಾನ ವನ್ನು ಪ್ರತಿಯೊಬ್ಬರೂ ಅವರವರ ಮನೆಗಳಿಗೆ ಅಳವಡಿಸಿಕೊಳ್ಳಬೇಕು. ಇದರಿಂದ, ಕುಡಿಯುವ ಮತ್ತು ಬಳಸುವ ನೀರಿನ ನಿತ್ಯ ಅವಲಂಬನೆಯನ್ನು ಗಣನೀಯವಾಗಿ ಕಡಿಮೆ ಮಾಡಬಹುದು ಎಂದು ತಿಳಿಸಿದರು.

ಅಲ್ಲದೇ, ನೀರಿನಲ್ಲಿ ಫ್ಲೋರೈಡ್ ಮತ್ತು ಅರ್ಸನಿಕ್ ನಂತಹ ಗಂಭೀರ ಸಮಸ್ಯೆಗಳು ಇರುವ ಪ್ರಾಂತ್ಯಗಳಲ್ಲಿ ಮಳೆ ನೀರಿನ ಸೇವನೆ ಮಾನವನ ಆರೋಗ್ಯದ ಮೇಲೆ ಅತ್ಯಂತ ದನಾತ್ಮಕವಾದ ಪರಿಣಾಮ ಬೀರುತ್ತದೆ. ಜೊತೆಗೆ, ಮಳೆನೀರಿನ ಸಂಗ್ರಹ ಮತ್ತು ಸೇವನೆಯಿಂದ ಮನುಷ್ಯ ದೇಹದಲ್ಲಿನ ವಿಷ ಪದಾರ್ಥಗಳು ದೇಹದಿಂದ ಹೊರಹಾಕಲ್ಪಡುತ್ತವೆ. ಇದಷ್ಟೇ ಅಲ್ಲದೇ, ಮಳೆ ನೀರಿನಿಂದ ಮನೆಯ ಕೈತೋಟದ ನಿರ್ವಹಣೆ, ಶುದ್ದೀಕರಣ ಹಾಗು ಇತರೆ ದೈನಂದಿನ ಚಟುವಟಿಕೆಗಳಿಗೂ ಉಪಯೋಗವಾಗುತ್ತದೆ ಎಂದು ತಂತ್ರಜ್ಞಾನದ ಪ್ರಾಯೋಗಿಕ ದೃಶ್ಯಗಳ ಮೂಲಕ ತಿಳಿಸಿಕೊಟ್ಟರು.

ಡಾ. ಜಿ ಪಿ ಮೂರ್ತಿಯವರು, ವಿಶ್ವ ಗ್ರಾಹಕ ಹಕ್ಕುಗಳ ದಿನದಂದು, ಗ್ರಾಹಕ ಹಕ್ಕುಗಳು ತಾಯಿಯ ಗರ್ಭದಿಂದ ಪ್ರಾರಂಭವಾಗಿ-ಸಾವಿನ ನಂತರದ ಘೋರಿಯವೆರೆಗೂ ಅಸ್ತಿತ್ವದಲ್ಲಿರುತ್ತವೆ ಮತ್ತು ಗ್ರಾಹಕ ಹಕ್ಕುಗಳು ದೇಶದ ಅಭಿವೃದ್ಧಿ ಮತ್ತು ವಿಶ್ವ ಮಟ್ಟದ ಪ್ರಾತಿನಿದ್ಯವನ್ನು ಪ್ರತಿಪಾದಿಸುತ್ತವೆ, ಹಾಗಾಗಿ ನಿಮ್ಮ ಹಕ್ಕು ಎಂದೆದಿಗೂ ಆಭಾದಿತ ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ, ಪ್ರತಿಯೊಬ್ಬರೂ ಅವರ ಮನೆಗಳಿಗೆ ಮಳೆ ನೀರು ಕೊಯ್ಲು ಅಳವಡಿಕೆ ಅಗತ್ಯವಾಗಿ ಮಾಡಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಪ್ರತಿಜ್ಞಾ-ವಿಧಿ ಬೊಧಿಸುವ ಮೂಲಕ ಅಭಿಯಾನದ ಕರೆಕೊಟ್ಟರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಮರೀಗೌಡರು ವಿದ್ಯಾರ್ಥಿಗಳಿಗೆ ವಿಶ್ವ ಗ್ರಾಹಕರ ಹಕ್ಕುಗಳ ಮಂಡನೆ ಬಗ್ಗೆ ತಿಳಿಸಿಕೊಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ಶೈಲ ರಾಮ್ಮಣ್ಣನವರು ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆಯಲ್ಲಿ ಸದರಿ ಅತಿಥಿಗಳು ನೀಡಿದ ಉಪನ್ಯಾಸ ಹಾಗು ಭಾಷಣದ ಅಂಶಗಳು ವಿದ್ಯಾರ್ಥಿಗಳಿಗೆ ಅವರ ಸಾಮಾಜಿಕ ಪ್ರಗತಿಗೆ ಹಾಗು ಮುಂದಿನ ಉಜ್ವಲ ಭವಿಷ್ಯಕ್ಕೆ ಪ್ರೇರಣಾ ಶಕ್ತಿಯಾಗಿದೆ ಎಂದು ಬಣ್ಣಿಸಿದ್ದರು.

ಕಾರ್ಯಕ್ರಮದಲ್ಲಿ, ಒಉಕ ಯ ಕಾರ್ಯ ಪಡೆ ಸದಸ್ಯರಾದ ಅರುಣ್ ಕುಮಾರ್ ಶೆಟ್ಟರ್, ಭಾನು ಪ್ರಶಾಂತ್, ವಿಶ್ವನಾಥ್, ಸೋಮಶೇಖರ್, ಶಂಕರ್ ರಾಘವೇಂದ್ರ, ದಯಾನಂದ ಸಾಗರ್, ಶಿವಕುಮಾರ್ ಸ್ವಾಮಿ, ರಮೇಶ್, ಸೀತಾರಾಮ್ ಉಪಸ್ಥಿತರಿದ್ದು ಹಾಗು ಇತರ ಸದಸ್ಯರುಗಳು ಭಾಗವಹಿಸಿದ್ದರು

ಪದವಿ ವಿದ್ಯಾರ್ಥಿನಿಯ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮವನ್ನು ಅಂತಿಮವಾಗಿ ನಿರ್ವಹಣಾ ಶಾಸ್ತ್ರ ವಿಭಾಗದ ಮುಖ್ಯಸ್ಥರು ವಂದನಾರ್ಪಣೆ ಮಾಡಿದರು.

ಇದೇ ವೇಳೆ, ವಿಶ್ವ ಗ್ರಾಹಕ ಹಕ್ಕುಗಳ ದಿನಾಚರಣೆಯ ಅಂಗವಾಗಿ ಒಉಕ ಯ ವತಿಯಿಂದ ಮುಂದುವರೆದ ಸರಣಿ ಉಪನ್ಯಾಸ ಮಾಲಿಕೆ ಇತರ ಆಯ್ದು ವೇದಿಕೆಗಳಲ್ಲಿ ಮುಂದುವರೆಯಲಿದೆ ಎಂದು ಒಉಕ ಕಾರ್ಯ ನಿರ್ವಾಹಕ ಮಂಡಳಿ ತಿಳಿಸಿದೆ.

# ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ರಾಮನಗರ:** ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2024-25ನೇ ಸಾಲಿನ 6ನೇ ತರಗತಿಗೆ ಉಚಿತ ಪ್ರವೇಶ ಪಡೆಯಲು ಅರ್ಜಿ ಅಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಮಾ. 15 ಕೊನೆಯ ದಿನವಾಗಿತ್ತು. ಪ್ರಸ್ತುತ ಅರ್ಜಿ ಸಲ್ಲಿಸಲು ಮಾ. 31 ಕೊನೆಯ ದಿನವಾಗಿದೆ. ಆಸಕ್ತಿಯುಳ್ಳ ವಿದ್ಯಾರ್ಥಿಗಳು ಹಾಗೂ ಪೋಷಕರು ಸೇವಾ ಸಿಂಧು ಪೋರ್ಟಲ್ ಲಿಂಕ್ https://sevasindhuservices.karnataka.gov.in ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ: 308, 2ನೇ ಮಹಡಿ, ಕಂದಾಯ ಭವನ, ಬಿ.ಎಂ. ರಸ್ತೆ, ರಾಮನಗರ-562159, ದೂ. ಸಂಖ್ಯೆ: 080-27271104 ಅನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ರಾಮನಗರ:** 2024-25ನೇ ಶೈಕ್ಷಣಿಕ ಸಾಲಿನ ವರ್ಷಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ (ಆಂಗ್ಲ ಮಾಧ್ಯಮ) ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿಕೃತ ಜಾಲ ತಾಣ https://dom.karnataka.gov.in ಆನ್‌ಲೈನ್ ಮೂಲಕ 2024ರ ಏಪ್ರಿಲ್ 14 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ದೂ. ಸಂಖ್ಯೆ: 080-27271104 ಹಾಗೂ ಜಿಲ್ಲಾ/ತಾಲ್ಲೂಕು ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬಹುದಾಗಿದೆ ಎಂದು ರಾಮನಗರ ಜಿಲ್ಲಾ ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೇಷ್ಮೆ ಸೀರೆ ಖರೀದಿಗೆ ನೂಕುನುಗ್ಗಲು

**ಮೈಸೂರು:** ಇಲ್ಲಿನ ಮಾನಂದವಾಡಿ ರಸ್ತೆಯ ರಾಜ್ಯ ರೇಷ್ಮೆ ಕೈಗಾರಿಕೆಗಳ ನಿಗಮದ (ಕೆಎಸ್ಐಸಿ) ಸಭಾಂಗಣದಲ್ಲಿ ಶುಕ್ರವಾರ ಆರಂಭಗೊಂಡ ಮೈಸೂರು ರೇಷ್ಮೆ ಸೀರೆಗಳ ಸೆಕೆಂಡ್ಸ್ ಸೇಲ್ಸ್ ಮೇಳಕ್ಕೆ ನಿರೀಕ್ಷೆಗೂ ಮೀರಿ ಸಾವಿರಾರು ಮಹಿಳೆಯರು ಬಂದಿದ್ದರು.



ಬೆಳಿಗ್ಗೆ 10ರಿಂದ ಸಂಜೆ 6ರವರೆಗೆ ಮಾರಾಟ ನಿಗದಿಯಾಗಿದ್ದರೂ, ಬೆಳಿಗ್ಗೆ 6ರಿಂದಲೇ ಮಹಿಳೆಯರು ಸರದಿಯಲ್ಲಿ ನಿಂತಿದ್ದರಿಂದ ಸಾಲು, ಸೀರೆ ವೀಕ್ಷಣೆ ಹಾಗೂ ಬಿಲ್ಲಿಂಗ್ ಕೌಂಟರ್‌ಗಳಲ್ಲಿ ನೂಕುನುಗ್ಗಲು ಏರ್ಪಟ್ಟಿತ್ತು.

ಮೈಸೂರಷ್ಟೇ ಅಲ್ಲದೆ, ಬೆಂಗಳೂರು, ಮಂಡ್ಯ, ಹಾಸನ, ಚಾಮರಾಜನಗರ, ಕೊಡಗು, ಚಿಕ್ಕಮಗಳೂರಿನಿಂದಲೂ ಬಂದಿದ್ದ ಹಲವರಿಗೆ ತಮ್ಮ ಇಷ್ಟದ ಸೀರೆ ದೊರೆಯದೇ ಸಿಕ್ಕಿದ್ದನ್ನೇ ಖರೀದಿಸಿ ತೃಪ್ತಿಪಟ್ಟರು.

ಮಾರ್ಚ್ 17ರವರೆಗೆ ಸೆಕೆಂಡ್ಸ್ ಸೇಲ್ಸ್ ನಡೆಯಲಿದೆ. ಶೇ 30ರಷ್ಟು ರಿಯಾಯಿತಿಯಿದ್ದು, ಸಣ್ಣಪುಟ್ಟ ತಾಂತ್ರಿಕ ತೊದರೆಯಿರುವ ಸೀರೆಗಳನ್ನು ಮಾರಾಟ ಮಾಡಲಾಗುತ್ತದೆ. ಸಂಗ್ರಹದಲ್ಲಿರುವುದನ್ನು ಮೂರು ದಿನಕ್ಕೂ ವಿಭಜಿಸಿ ಮಾರಾಟ ಮಾಡುತ್ತೇವೆ. ಇಂದು ಸಾವಿರ ಸೀರೆಗಳ ಮಾರಾಟಕ್ಕೆ ಯೋಜಿಸಿದ್ದೆವು. 2 ಸಾವಿರಕ್ಕೂ ಹೆಚ್ಚು ಗ್ರಾಹಕರು ಬಂದಿ ದ್ದರಿಂದ ಒತ್ತಡ ಉಂಟಾಗಿದೆ ಎಂದು ನಿಗಮದ ಮಾರಾಟ ವಿಭಾಗದ ಪ್ರಧಾನ ವ್ಯವಸ್ಥಾಪಕ ಎಸ್.ಭಾನುಪ್ರಕಾಶ್ ತಿಳಿಸಿದರು.

# ಸ್ಪರ್ಧೆ ಮನೋಭಾವನೆ ಬೆಳೆಸಿಕೊಳ್ಳಿ; ಎಸ್‌ಪಿ ಪದ್ಮಿನಿ ಸಾಹು

**ಚಾಮರಾಜನಗರ:** ಪ್ರತಿಯೊಬ್ಬ ವಿದ್ಯಾರ್ಥಿಗಳು ಸ್ಪರ್ಧೆ ಮಾಡುವ ಅಭಿರುಚಿ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ತಿಳಿಸಿದರು.

ಶುಕ್ರವಾರ ಸಂಜೆ. ಜೆಎಸ್ಎಸ್ ಶಿಕ್ಷಣ ಮಹಾವಿದ್ಯಾಲಯ. ಬಿ ಎಡ್ ಕಾಲೇಜ್. ವತಿಯಿಂದ ಏರ್ಪಡಿಸಿದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ವಿಧವಿಧ ಸ್ಪರ್ಧೆಯಲ್ಲಿದ್ದಾರೆ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಿ ನಂತರ ಮಾತನಾಡಿದವರು. ಸ್ಪರ್ಧೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ಅಭಿರುಚಿ ಬೆಳೆಸಿಕೊಂಡಾಗ ಮಾತ್ರ. ವಿದ್ಯಾರ್ಥಿ ಜೀವನ ಯಶಸ್ವಿಯಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ. ಮಹಿಳಾ ದಿನಾಚರಣೆಯಂದು. ಸಡಗರ ಸಂಭ್ರಮದಿಂದ. ಆಚರಣೆ ಮಾಡುತ್ತಿರುವುದು ಮೆಚ್ಚುಗೆ ವಿಷಯ. ಇದರ ಜೊತೆ. ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಿ. ಪರೀಕ್ಷೆಯಲ್ಲಿ ಉನ್ನತ ಅಂಕ ಗಳಿಸಿ. ಕಾಲೇಜಿಗೆ. ಪೋಷಕರಿಗೆ ಕೀರ್ತಿ ತನ್ನಿ ಎಂದು ಕರೆ ನೀಡಿದರು. ಆರ್ ಮಧುಶ್ರೀ. ರವರು ವಕೀಲರಾಗಿ ಸೇವೆ ಸಲ್ಲಿಸಿ. ಇವಾಗ ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ. ಕಾಲೇಜಿನ ಪ್ರಾಂಶುಪಾಲ ಕೆ ಸಿ.ಬಸವಣ್ಣ ಸನ್ಮಾನಿಸಿದರು ವಿದ್ಯಾರ್ಥಿಗಳಾದ ಮಾಳವಿಕಾ. ಶಿಲ್ಪ. ಮಹಿಳಾ ದಿನಾಚರಣೆ ಕುರಿತು. ಭಾಷಣ ಮಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಿಎಡ್ ಕಾಲೇಜ್. ಪ್ರಾಂಶುಪಾಲ ಪ್ರೊ ಕೆ ಸಿ ಬಸವಣ್ಣ ಮಾತನಾಡಿ. ಜೀಸಸಯಯ ಜೆಎಸ್ಎಸ್ ಶಿಕ್ಷಣ ಸಂಸ್ಥೆ ವಿದ್ಯಾಭ್ಯಾಸ ಮಾಡಿದ ಸಾವಿರಾರು ವಿದ್ಯಾರ್ಥಿಗಳು. ಜಿಲ್ಲಾ. ಹಾಗೂ ರಾಜ್ಯದ ವಿವಿಧ ಭಾಗಗಳಲ್ಲಿ ಉತ್ತಮ ಶಿಕ್ಷಕರಾಗಿ ಸೇವೆ ಮಾಡುತ್ತಿರುವ ಸಂತೋಷದ ವಿಷಯ ಎಂದು ತಿಳಿಸಿದರು. ಕಾಲೇಜಿನ ಉಪನ್ಯಾಸಕರಾದ ಕೆ ಎಂ ಯೋಗೇಶ್, ಶಿವರಾಜ್ ಅರಸ್. ಕೆ ಎಸ್ ಸಿದ್ದರಾಜು. ಎನ್ ನಾಗರಾಜು. ಎನ್ ಮಲ್ಲೇಶ್. ಎಸ್ ಎನ್ ರಾಜು. ಡಿ ಎನ್ ಶಿವಕುಮಾರ್. ಎಂ ಗೀತಾ ಇದ್ದರು.




# ದ್ವಿತಳಿ ಹುಳುಗಳಿಂದ ರೇಷ್ಮೆ ಇಳುವರಿ ಸಾಧ್ಯ

**ಮೈಸೂರು:** ರೈತರು ದ್ವಿತಳಿ ಹುಳು ಬೆಳೆಸುವುದರಿಂದ ಗುಣಮಟ್ಟದ ಅಧಿಕ ರೇಷ್ಮೆ ಇಳುವರಿ ಪಡೆಯಲು ಸಾದ್ಯ ಎಂದು ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆಯ ವಿಜ್ಞಾನಿ ಎಲ್.ಕುಸುಮಾ ಹೇಳಿದರು.



ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ರೇಷ್ಮೆ ಕೃಷಿ ನೂತನ ಸಾಕಾಣಿಕಾ ಪದ್ದತಿಗಳು ಮತ್ತು ಮಾರುಕಟ್ಟೆ ವ್ಯವಸ್ಥೆ? ಕುರಿತು ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಮಾರುಕಟ್ಟೆಯಲ್ಲಿ ಹೆಚ್ಚು ಬೇಡಿಕೆಯಿರುವ ಈಅ1 ಥ ಈಅ2 (ದ್ವಿತಳಿ) ಬೆಳೆಯುವುದರಿಂದ ಗುಣಮಟ್ಟದ ಗೂಡು ಉತ್ಪಾದನೆ ಮಾಡಿ ರೈತರು ಹೆಚ್ಚು ಲಾಭಗಳಿಸಬಹುದು. ರೈತರು ಗಿ1 ತಳಿ ಹಿಪ್ಪನೇರಳೆ ಗಿಡಗಳನ್ನು ಬೆಳೆಯಬೇಕು. ಹುಳು ಸಾಕಾಣಿಕೆ ಮನೆ, ಸುತ್ತಮುತ್ತಲಿನ ಪರಿಸರ ಮತ್ತು ಸಾಮಗ್ರಿಗಳ ಸೋಂಕು ನಿವಾರಣೆ ಹಾಗೂ ನೈರ್ಮಲ್ಯವನ್ನು ಕಾಪಾಡುವುದು ರೋಗಗಳು ಬರದಂತೆ ತಡೆಗಟ್ಟಲು ಬಹಳ ಮುಖ್ಯ ಕ್ರಮಗಳಾಗಿವೆ ಎಂದರು.

ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರಾದ ಡಾ.ಯೋಗೇಶ್ ಜಿ.ಹೆಚ್ ಅವರು ಮಾತನಾಡಿ, ರೇಷ್ಮೆ ತ್ಯಾಜ್ಯಗಳನ್ನು ಕಾಂಪೋಸ್ಟ್ ಅಥವಾ ಎರೆಹುಳು ಗೊಬ್ಬರವಾಗಿ ಪರಿವರ್ತಿಸಿ ಮರುಬಳಕೆ ಮಾಡುವ ಮೂಲಕ ಮಣ್ಣಿನ ಫಲವತ್ತತೆ ಕಾಪಾಡಲು ರೈತರು ಮುಂದಾಗಬೇಕು ಎಂದರು ಹೇಳಿದರು.

ರೇಷ್ಮೆ ತಜ್ಞೆಯಾದ ಡಾ.ಮೇಘಲಾದೇವಿ ಅವರು ಮಾತನಾಡಿ ರೇಷ್ಮೆ ಬೆಳೆ ಮತ್ತು ಹುಳುಗಳಿಗೆ ಬರುವ ರೋಗ ಮತ್ತು ಕೀಟಗಳ ನಿರ್ವಹಣೆಗೆ ಪರತಂತ್ರ ಜೀವಿಗಳನ್ನು ಬಳಸುವುದರ ಜೊತೆಗೆ ಸಮಗ್ರ ಹತೋಟಿ ಕ್ರಮಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ರೇಷ್ಮೆ ಇಲಾಖೆಯ ಉಪನಿರ್ದೇಶಕರಾದ ವೃಷಬೇಂದ್ರ ಅವರು ಮಾತನಾಡಿ ರೇಷ್ಮೆ ಇಲಾಖೆಯಿಂದ ನರೇಗಾ ಯೋಜನೆಯಡಿ ರೇಷ್ಮೆ ಕೃಷಿಗೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುತ್ತಿದೆ. ರೈತರು ಟ್ರೆಂಚಿಂಗ್ ಮತ್ತು ಮಲ್ಚಿಂಗ್ ಪದ್ದತಿಯಲ್ಲಿ ರೇಷ್ಮೆ ಬೆಳೆಯಲು ಮುಂದಾಗಬೇಕು. ರೇಷ್ಮೆ ಮನೆ ನಿರ್ಮಿಸಲು ಮತ್ತು ಇತರೆ ಪರಿಕರಗಳನ್ನು ಸಹಾಯಧನದಲ್ಲಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಶೆಟ್ಟನಾಯಕನಹಳ್ಳಿ ಗ್ರಾಮದ ಪ್ರಗತಿಪರ ರೈತರಾದ ಎಸ್.ಬಿ. ಸ್ವಾಮಿ ಅವರು ಮಾತನಾಡಿ ತಮ್ಮ 4 ಎಕರೆ ಜಮೀನಿನಲ್ಲಿ ಹಿಪ್ಪುನೇರಳೆ ಬೆಳೆದು ಪ್ರತಿ ಬ್ಯಾಚ್‌ನಲ್ಲಿ 300 ಮೊಟ್ಟೆ ಸಾಕಾಣಿಕೆ ಮಾಡುವ ಮೂಲಕ ಉತ್ತಮ ಆದಾಯಗಳಿಸುತ್ತಿದ್ದೇನೆ ಎಂದು ತಮ್ಮ ಅನುಭವ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಸಹಾಯಕ ಕೃಷಿ ನಿರ್ದೇಶಕಿ ವಜ್ರೇಶ್ವರಿ ಎಸ್.ಕುಲಕರ್ಣಿ, ಕೃಷಿ ಅಧಿಕಾರಿ ಮಾಲತಿ ಎಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರಾಮಾಣಿಕತೆಯ ಪ್ರತಿರೂಪ ಶಾಂತವೇರಿ ಗೋಪಾಲಗೌಡ

**ಚಾಮರಾಜನಗರ:** ಶಾಂತವೇರಿ ಗೋಪಾಲಗೌಡರು ಅತ್ಯಂತ ಆದರ್ಶ ವ್ಯಕ್ತಿ. ಸತ್ಯ, ನಿಷ್ಠೆ ,ಪ್ರಾಮಾಣಿಕತೆಯ ಪ್ರತಿರೂಪ ಎಂದು ಅಖಿಲ ಕರ್ನಾಟಕ ಕನ್ನಡ ಮಹಾಸಭೆ ರಾಜ್ಯಾಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ತಿಳಿಸಿದರು.



ಕರ್ನಾಟಕಸೇನಾಪಡೆ, ಕನ್ನಡಪರ ಸಂಘಟನೆ ವತಿಯಿಂದ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ನಡೆದ ಶಾಂತವೇರಿ ಗೋಪಾಲಗೌಡರ ಜೀವನ ಮತ್ತು ಸಾಧನೆ ಕುರಿತು ಮಾತನಾಡಿದರು. ಮಲೆನಾಡಿನವರಾದ ಶಾಂತವೇರಿ ಗೋಪಾಲಗೌಡರು ಮೂರು ಬಾರಿ ಶಾಸಕರಾಗಿದ್ದು, ಸಮಾಜವಾದಿ ಸಿದ್ಧಾಂತದ ಮೂಲಕ ಹೋರಾಟ ನಡೆಸಿದವರು,

ಕರ್ನಾಟಕ ಏಕೀಕರಣ ಚಳುವಳಿಯಲ್ಲಿ ಇವರ ಪಾತ್ರ ಅನನ್ಯ. ಶಾಸನಸಭೆಯಲ್ಲಿ ಮಹತ್ವಪೂರ್ಣ ಚರ್ಚೆಗಳನ್ನು ಮಾಡುವ ಮೂಲಕ ರೈತರ, ಕಾರ್ಮಿಕರ, ಬಡವರಪರ ಕಾಳಜಿ ವಹಿಸಿದ್ದರು.ಇವರ ಹೆಸರಿನಲ್ಲಿ ರಾಜ್ಯದ ಅನೇಕ ಕಡೆ ವೃತ್ತಗಳು, ಕಟ್ಟಡಗಳು ಇವೆ. 5-50-60ರ ದಶಕದ ಇವರ ಕಾರ್ಯ ಸಾಧನೆ ಇಂದಿಗೂ ಜನಮಾನಸದಲ್ಲಿ ಹಾಸುಹೊಕ್ಕಾಗಿವೆ ಎಂದರು. ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸುರೇಶ್.ಎನ್. ಋಗ್ವೇದಿ ಮಾತನಾಡಿ,

ಸ್ವಾತಂತ್ರ ಚಳುವಳಿಯಲ್ಲಿ ಭಾಗವಹಿಸಿ ಸೆರೆಮನೆ ವಾಸ ಅನುಭವಿಸಿದ ಮಹಾನ್ ವ್ಯಕ್ತಿ. ಶಾಂತವೇರಿ ಗೋಪಾಲಗೌಡರು. ಸ್ವಾತಂತ್ರ್ಯಯ ಚಳುವಳಿಯ ನಂತರ ಕರ್ನಾಟಕ ಏಕೀಕರಣ ಚಳುವಳಿಯಲ್ಲಿ ಭಾಗವಹಿಸಿ ಕನ್ನಡ ಏಕೀಕರಣದ ಮೂಲಕ ಕನ್ನಡಿಗರಿಗೆ ಶಾಶ್ವತವಾದ ರಾಜ್ಯ ನಿರ್ಮಾಣ ಮಾಡಿದವರಲ್ಲಿ ಗೋಪಾಲಗೌಡರು ಒಬ್ಬರು. ಕುತೂಹಲ ಹೆಚ್ಚಿಸುವ ಅವರ ಜೀವಂತ ಘಟನೆಗಳು ಎಲ್ಲರಿಗೂ ಇಂದಿಗೂ ಮಾದರಿ ಎಂದರು.

ಬರಹಗಾರ ಲಕ್ಷ್ಮಿ ನರಸಿಂಹ ಮಾತನಾಡಿ, ಸರಳತೆಯ ಪ್ರಾಮಾಣಿಕ ವ್ಯಕ್ತಿಯಾಗಿದ್ದ ಶಾಂತವೇರಿ ಗೋಪಾಲಗೌಡರ ಆದರ್ಶದಲ್ಲಿ ಹಲವು ದಶಕಗಳ ಕಾಲ ರಾಜಕಾರಣವಿತ್ತು, ಇತ್ತೀಚೆಗೆ ರಾಜಕಾರಣ ಬಹಳಷ್ಟು ಬದಲಾವಣೆಯಾಗಿದೆ. ರಾಜಕಾರಣ ಸುಧಾರಣೆಯಾಗಬೇಕು ಎಂದರು. ಕನ್ನಡಪರಸಂಘಟನೆ ಮುಖಂಡರಾದ ಚಾ.ವೆಂ. ರಾಜ್‌ಗೋಪಾಲ, ಕನ್ನಡ ಸಾಹಿತ್ಯ ಪರಿಷತ್ ನಿರ್ದೇಶಕ ರವಿಚಂದ್ರಪ್ರಸಾದ್ ಕಹಳೆ, ಕನ್ನಡ ಸಂಘಟನೆಗಳ ಒಕ್ಕೂಟದ ಮಹೇಶ್‌ಗೌಡ, ಪುಣ್ಯದ ಹುಂಡಿ ರಾಜು, ಸಮಾಜಸೇವಕ ಪರಮೇಶ್ವರಪ್ಪ, ಎಸ್ಬಿಬಿ ಸಾಂಸ್ಕೃತಿಕ ಕಲಾವೇದಿಕೆ ಗೌರವಾಧ್ಯಕ್ಷ ಸುರೇಶ್ ಗೌಡ, ಬೊಮ್ಮಾಯಿ, ಮೂಡಲಪುರರವಿ, ಪ್ರಕಾಶ್ ಹಾಜರಿದ್ದರು.

## 6ನೇ ತರಗತಿಗೆ ಪ್ರವೇಶಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆ ಚಿಕ್ಕಬಳ್ಳಾಪುರ, ಗೌರಿಬಿದನೂರು, ಶಿಡ್ಲಘಟ್ಟ ಮತ್ತು ಚಿಂತಾಮಣಿ ತಾಲ್ಲೂಕುಗಳಲ್ಲಿ 2024-25ನೇ ಶೈಕ್ಷಣಿಕ ಸಾಲಿಗೆ 6ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ದಿನಾಂಕ 15-03-2024 ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು Website: https://dom.karnataka.gov.in ನಲ್ಲಿ ಆನ್ ಲೈನ್ ಮೂಲಕ ಏಪ್ರಿಲ್ 14 ರೊಳಗೆ ಸಲ್ಲಿಸಬೇಕು. ಸದರಿ ಶಾಲೆಗಳಲ್ಲಿ ಶೇ.75ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ (ಮುಸ್ಲಿಂ, ಕ್ರೈಸ್ತ, ಜೈನ್, ಸಿಖ್, ಪಾರ್ಸಿ, ಮತ್ತು ಬೌದ್ಧ) ಹಾಗೂ ಶೇ 25ರಷ್ಟು ಹಿಂದುಳಿದ ವರ್ಗ, ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆಯಲ್ಲಿ ಪಡೆದ ಅಂಕಗಳಿಗೆ ಅನುಗುಣವಾಗಿ ಹಾಗೂ ರೋಷ್ಟರ್ ನಿಯಮದಂತೆ ಪ್ರವೇಶ ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಅರ್ಜಿಗಳನ್ನು ಉಚಿತವಾಗಿ ಸಲ್ಲಿಸಲು ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಚೇರಿ, ಜಿಲ್ಲಾಡಳಿತ ಭವನ, ಎಸ್.ಎ8, 2ನೇ ಮಹಡಿ, ಶಿಡ್ಲಘಟ್ಟ ರಸ್ತೆ, ಚಿಕ್ಕಬಳ್ಳಾಪುರ. ದೂರವಾಣಿ:08156-277049, ಮುಖ್ಯೋಪಾಧ್ಯಯರು/ಮಾಹಿತಿ ಕೇಂದ್ರ, ಚಿಕ್ಕ ಬಳ್ಳಾಪುರ-9986958487/7204453320, ಗೌರಿಬಿದನೂರು-7996380525/8867760346, ಶಿಡ್ಲಘಟ್ಟ-9738882711/9739426396, ಚಿಂತಾಮಣಿ-8970337289/8746882888, ಇಲ್ಲಿಗೆ ಸಂಪರ್ಕಿಸಬಹುದು.

## ಕಾರೇಹಳ್ಳಿಯಲ್ಲಿ ಮಾ.19 ರಿಂದ ರಂಗನಾಥಸ್ವಾಮಿ ಜಾತ್ರೆ

**ಹುಳಿಯಾರು:** ಹುಳಿಯಾರು ಹೋಬಳಿಯ ಕಾರೇಹಳ್ಳಿ ಗ್ರಾಮದ ರಂಗನಾಥಸ್ವಾಮಿ ಜಾತ್ರಾ, ಮಹೋತ್ಸವ ಹಾಗೂ ಭಾರಿ ದನಗಳ ಜಾತ್ರೆಯನ್ನು ಮಾ. 19 ರ ಮಂಗಳವಾರದಿಂದ ಮಾ. 27 ರ ಬುಧವಾರದವರೆವಿಗೆ ನಡೆಯಲಿದೆ. ಮಾ.19 ರಂದು ಕಂಕಣ, ಅಂಕುರಾರ್ಪಣೆ, ಉಯ್ಯಾಲೋತ್ಸವ ನಡೆಯಲಿದೆ. ಮಾ. 20 ರಂದು ಗಜಾರೋಹಣ, ಮಾ. 21 ರಂದು ರಾತ್ರಿ 8 ಕ್ಕೆ ಗರುಡ ವಾಹನೋತ್ಸವ ನಡೆಯಲಿದೆ. ಮಾ. 22 ರಂದು ಬೆಳಿಗ್ಗೆ 12.30 ರಿಂದ ಬ್ರಹ್ಮರಥೋತ್ಸವ ನಡೆಯಲಿದೆ. ಮಾ. 23 ರಂದು ಅಡ್ಡಪಲ್ಲಕ್ಕಿ ಉತ್ಸವ, ಮಾ. 24 ರಂದು ಓಕಳಿ, ರಾತ್ರಿ 8 ಕ್ಕೆ ಶಯನೋತ್ಸವ, ಮಾ. 25 ರಂದು ರಾತ್ರಿ 8 ಕ್ಕೆ ಸರ್ಪವಾಹನೋತ್ಸವ, ಮಾ.26 ರಂದು ರಾತ್ರಿ 8 ಕ್ಕೆ ಚಂದ್ರಮಂಡಲೋತ್ಸವ, ಮಾ. 27 ರಂದು ಬೆಳಗ್ಗೆ ಪಂಚಾಮೃತಾಭಿಷೇಕ ನಡೆಯಲಿದೆ.



## ತುಟ್ಟಿಭತ್ಯೆ ಬಿಡುಗಡೆ; ಸರ್ಕಾರಕ್ಕೆ ಅಭಿನಂದನೆ

**ಹುಳಿಯಾರು :** ರಾಜ್ಯ ಸರ್ಕಾರವು ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು ಜನವರಿ 1, 2024 ರಿಂದ ಅನ್ವಯವಾಗುವಂತೆ ಶೇ.3.75 ಬಿಡುಗಡೆ ಮಾಡಿ ಮೂಲ ವೇತನದ ಶೇ.38.75 ರಿಂದ ಶೇ.42.5 ಕ್ಕೆ ಹೆಚ್ಚಳ ಮಾಡಿ ಆದೇಶ ಹೊರಡಿಸಿರುವುದಕ್ಕೆ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಆರ್.ಪರಶಿವಮೂರ್ತಿ ಹರ್ಷ ವ್ಯಕ್ತಪಡಿಸಿದ್ದಾರೆ. ಸಕಾಲದಲ್ಲಿ ತುಟ್ಟಿಭತ್ಯೆಯನ್ನು ಬಿಡುಗಡೆಗೊಳಿಸಿ, ಸಮಸ್ತ ನೌಕರರ ಹಿತವನ್ನು ರಕ್ಷಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರಿಗೆ, ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿಯವರಿಗೆ ಮತ್ತು ಸರ್ಕಾರದ ಆರ್ಥಿಕ ಇಲಾಖೆಯ ಎಲ್ಲಾ ಉನ್ನತ ಮಟ್ಟದ ಅಧಿಕಾರಿಗಳಿಗೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.



## 15 ಲಕ್ಷ ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ

**ವಿಜಯಪುರ:** ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿನ 15 ಲಕ್ಷ ರೂಗಳ ಅಭಿವೃದ್ಧಿ ಕಾಮಗಾರಿಗಳಿಗೆ ಪುರಸಭಾ ಅಧ್ಯಕ್ಷೆ ವಿಮಲಾಬಸವರಾಜು ಚಾಲನೆ ನೀಡಿದರು.

ಎಸ್.ಸಿ.ಪಿ ಟಿ.ಎಸ್.ಪಿ ಯೋಜನೆ, 15 ನೇ ಹಣಕಾಸು ಯೋಜನೆ, ಹಾಗೂ ವಿವಿಧ ಯೋಜನೆಗಳಲ್ಲಿ ವಿಜಯಪುರ ಪಟ್ಟಣಕ್ಕೆ 12 ಸೋಲಾರ್ ಸಿ.ಸಿ.ಕ್ಯಾಮರಾ, 41 ಡಸ್ಟ್ ಬಿನ್ ಹಾಗೂ ಕಸ ವಿಂಗಡಣೆ ಘಟಕ , ಸಿ.ಸಿ.ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದರು.

ಪುರಸಭೆ ವ್ಯಾಪ್ತಿಯ ವಾಲ್ಮೀಕಿ ಪಾರ್ಕ್ ಅಭಿವೃದ್ಧಿ , ಸಿ.ಸಿ ರಸ್ತೆ ಕಾಮಗಾರಿ, ಮತ್ತು ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ಇಂದು ಚಾಲನೆ ನೀಡಿದ್ದು, ಇದರ ಉಪಯೋಗವನ್ನು ಸಾರ್ವಜನಿಕರು ಪಡೆಯಬೇಕು ಪಟ್ಟಣದ ಅಭಿವೃದ್ಧಿಗೆ ಎಲ್ಲಾ ಸಾರ್ವಜನಿಕರು ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ವಿಜಯಪುರ ಪುರಸಭಾ ಮುಖ್ಯಾಧಿಕಾರಿ ಸಂತೋಷ್ ಕುಮಾರ್ ಮಾತನಾಡಿ, 20 ನೇ ವಾರ್ಡ್ ನಲ್ಲಿ ಕಾಂಕ್ರೀಟ್ ರಸ್ತೆ, ಪಟ್ಟಣ ಸ್ವಚ್ಚವಾಗಿಡುವ ನಿಟ್ಟಿನಲ್ಲಿ 41 ಕಡೆ ಕಸದ ಡಸ್ಟ್ ಬಿನ್ಸ್ ಅಳವಡಿಸುವುದು , 2 ನೇ ವಾರ್ಡ್ ನಲ್ಲಿ ಕಸ ವಿಂಗಡಣೆ ಘಟಕವನ್ನು ಉದ್ಘಾಟನೆ ಕಾರ್ಯಕ್ರಮ ಮಾಡಲಿದ್ದೇವೆ ಎಂದು ಮಾಹಿತಿ ನೀಡಿದರು.

# ಎಸ್‌ಟಿ ಸಮುದಾಯಕ್ಕೆ ಕಾಂಗ್ರೆಸ್ ಕೊಡುಗೆ ಶೂನ್ಯ: ಬಂಗಾರುಹನುಮಂತು

**ಚಾಮರಾಜನಗರ:** ದೇಶ, ರಾಜ್ಯದಲ್ಲಿ 65 ವರ್ಷಗಳ ಕಾಲ ಆಡಳಿತ ನಡೆಸಿದ ಕಾಂಗ್ರೆಸ್ ಪರಿಶಿಷ್ಠಪಂಗಡ ಸಮುದಾಯಕ್ಕೆ ಯಾವುದೇ ಕೊಡುಗೆಗಳನ್ನು ಕೊಟ್ಟಿಲ್ಲ ಎಂದು ಬಿಜೆಪಿ ಎಸ್‌ಟಿ ಮೋರ್ಚಾದ ರಾಜ್ಯಾಧ್ಯಕ್ಷ ಬಂಗಾರುಹನುಮಂತು ಆರೋಪಿಸಿದರು.

ನಗರದ ಕರಿನಂಜನಪುರ ರಸ್ತೆಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಬಿಜೆಪಿ ಪರಿಶಿಷ್ಠ ಪಂಗಡಗಳ ಮುನ್ನಡೆ ಮಹಾಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು. ಸಮುದಾಯದ ಶ್ರೀಗಳ ಹೋರಾಟ ಫಲವಾಗಿ ಬಿಜೆಪಿ ಎಸ್‌ಸಿ,ಎಸ್‌ಟಿ ಮೀಸಲಾತಿ ಹೆಚ್ಚಳ ಮಾಡಿದೆ. ವಾಲ್ಮೀಕಿ ಜಯಂತಿ ಸರ್ಕಾರ ಕಾರ್ಯಕ್ರಮ ಆಚರಣೆ, ಅಯೋಧ್ಯೆಯಲ್ಲಿ ವಿಮಾನ ನಿಲ್ದಾಣಕ್ಕೆ ಶ್ರೀವಾಲ್ಮೀಕಿಯವರ ಹೆಸರು ನಾಮಕರಣ, ಎಸ್‌ಸಿ.ಎಸ್‌ಟಿ ಅಭಿವೃದ್ದಿಗೆ ಒತ್ತು ನೀಡಿದ ಕೀರ್ತಿ ಬಿಜೆಪಿ ಸರ್ಕಾರಕ್ಕೆ ಸಲ್ಲುತ್ತದೆ ಇಂತಹ ಕೆಲಸ ಕಾಂಗ್ರೆಸ್ ಮಾಡದೆ ಸಮುದಾಯಕ್ಕೆ ಅನ್ಯಾಯ ಮಾಡಿದೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಾಂತರಾಜು ವರದಿ ಬಿಡುಗಡೆ ಮಾಡಿದ್ದು ಅದರಲ್ಲಿ ಎಸ್‌ಟಿ ಸಮುದಾಯ 38 ಲಕ್ಷ ಇದೆ. 2011 ಜನಗಣತಿ ಪ್ರಕಾರ ಎಸ್‌ಟಿ ಸಮುದಾಯದ ಜನಸಂಖ್ಯೆ 40 ಲಕ್ಷ ಇಂದಿನ ಜನಗಣತಿಗೆ ಹೋಳಿಕೆ ಮಾಡಿದರೆ 60 ರಿಂದ 70 ಲಕ್ಷ ಜನಸಂಖ್ಯೆ ಇರಬೇಕು. ಇದರಲ್ಲೂ ಕಾಂಗ್ರೆಸ್ ಅನ್ಯಾಯ ಮಾಡಿದೆ. ಇಲ್ಲಿಯ ಅನ್ನ, ಗಾಳಿ, ನೀರು ಸೇವನೆ ಮಾಡುವ ಕಾಂಗ್ರೆಸ್ ಕೆಲವರು ಪಾಕಿಸ್ತಾನ ಪರ ಘೋಷಣೆ ಕೂಗಿ ದೇಶದ್ರೋಹ ಕೆಲಸ ಮಾಡುತ್ತಿದ್ದಾರೆ. ಅಯೋಧ್ಯೆಯಲ್ಲಿ ಶ್ರೀರಾಮಮಂದಿರ ನಿರ್ಮಾಣ, 370ನೇ ವಿಧಿ ರದ್ದು, ಸಿಎಎ ಜಾರಿ ಇದು ಪ್ರಧಾನಿ ನರೇಂದ್ರಮೋದಿ ಅವರಿಂದ ಸಾಧ್ಯವಾಯಿತು ಎಂದರು.

ಕಾಂಗ್ರೆಸ್ ಸುಳ್ಳು ಗ್ಯಾರಂಟಿ ಘೋಷಣೆ ಮಾಡಿ ಹಾಲು ಸೇರಿದಂತೆ ಅಹಾರ ಪದಾರ್ಥಗಳ ಬೆಲೆ ಹೆಚ್ಚಿಮಾಡುವ ಮೂಲಕ ಜನರನ್ನು ದಿಕ್ಕುತಪ್ಪಿಸಿದರು. ಗೃಹಲಕ್ಷ್ಮಿ?ಮೀ ಯೋಜನೆಯಡಿಯಲ್ಲಿ ಸರಿಯಾಗಿ 2 ಸಾವಿರ ಕೊಡುತ್ತಿಲ್ಲ ಐದು ಗ್ಯಾರಂಟಿ ಯೋಜನೆಗಳ



ನಿರ್ವಹಿಸುವಲ್ಲಿ ಕಾಂಗ್ರೆಸ್ ವಿಫಲವಾಗಿದೆ ಎಂದರು.

**ಅತ್ಯಧಿಕ ಮತಗಳಿಂದ ಬಾಲರಾಜ್ ಗೆಲ್ಲಿಸಿ :** ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದಿಂದ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿರುವ ಎಸ್.ಬಾಲರಾಜು ಅವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸುವ ಪ್ರಧಾನಮಂತ್ರಿ ನರೇಂದ್ರಮೋದಿ ಅವರನ್ನ 3ನೇ ಬಾರಿಗೆ ಪ್ರಧಾನಿಯನ್ನಾಗಿ ಮಾಡಲು ಸಹಕರಿಸಬೇಕು ಎಂದು ಮನವಿ ಮಾಡಿದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಮಾತನಾಡಿ, ಎಸ್‌ಸಿ, ಎಸ್‌ಟಿಗಳು ಒಂದು ದೇಹ ಎರಡು ಕಣ್ಣು ಇದ್ದಂತೆ. ಎಸ್‌ಸಿ, ಎಸ್‌ಟಿಗಳಿಗೆ ನಯಾಪೈಸೆ ಅನುದಾನ ಕೊಟ್ಟಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಎಸ್‌ಸಿಪಿ, ಟಿಎಸ್‌ಪಿ ಅನುದಾನವನ್ನು ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳಿಗೆ ಬಳಸುವ ಮೂಲಕ ಎಸ್‌ಸಿ, ಎಸ್‌ಟಿ ಸಮುದಾಯಗಳಿಗೆ ಅನ್ಯಾಯ ಮಾಡಿದ್ದಾರೆ ಎಂದು ಆರೋಪಿಸಿದರು. ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಪ್ರಾಸ್ತಾವಿಕವಾಗಿ ಮಾತನಾಡಿ, ಬಿಜೆಪಿಪಕ್ಷ ನಾಯಕ ಸಮುದಾಯಕ್ಕೆ ಅನೇಕ ಕೊಡುಗೆಗಳನ್ನು ಕೊಟ್ಟಿದೆ. ಎಸ್‌ಸಿ, ಎಸ್‌ಟಿ ಮೀಸಲಾತಿ ಹೆಚ್ಚು ಮಾಡಿದೆ. ಶ್ರೀವಾಲ್ಮೀಕಿ ಜಯಂತಿಯನ್ನು ಸರ್ಕಾರಿ ಕಾರ್ಯಕ್ರಮವನ್ನಾಗಿ ಆಚರಣೆ ಮಾಡಿದೆ. ಪಕ್ಷದ ಉಪ್ಪಿನ ಋಣ ಸಮುದಾಯದ ಮೇಲಿದೆ ಆಗಾಗಿ ಕಳೆದ ಚುನಾವಣೆಗಳಲ್ಲಿ ಸಮುದಾಯ ಬಿಜೆಪಿ ಪಕ್ಷವನ್ನು ಬೆಂಬಲಿಸಿಕೊಂಡು ಬಂದಿದೆ. ಮುಂದಿನ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯಾಗಿರುವ ಎಸ್.ಬಾಲರಾಜ್ ಅವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸುವ ಮೂಲಕ 3ನೇ ಬಾರಿಗೆ ನರೇಂದ್ರಮೋದಿ ಅವರನ್ನು ಪ್ರಧಾನಿಯಾಗಿ ಆಯ್ಕೆ ಮಾಡುವ ಮೂಲಕ ದೇಶವನ್ನು ಅಭಿವೃದ್ದಿಯತ್ತ ಕಡೆ ಕೊಂಡ್ಯೊಯಲು ಸಹಕರಿಸಬೇಕು ಎಂದು ಮನವಿ ಮಾಡಿದರು.

ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್. ಬಾಲರಾಜ್ ಮಾತನಾಡಿ, ಕೇಂದ್ರ, ರಾಜ್ಯ, ಜಿಲ್ಲೆಯ ವರಿಷ್ಟರು ನಾಯಕರು, ಮುಖಂಡರೆಲ್ಲ ನನಗೆ ಆಶೀರ್ವಾದ ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದಾರೆ. 20 ವರ್ಷಗಳ ರಾಜಕೀಯ ವನವಾಸಕ್ಕೆ ಒಂದು ಅವಕಾಶ ಸಿಕ್ಕಿದೆ. ನೀವು ನನಗೆ ಕೊಡುವ ಒಂದೊಂದು ಮತವನ್ನು ಮೋದಿಯವರಿಗೆ ಅರ್ಪಣೆ ಮಾಡಿ 3ನೇ ಬಾರಿಯೂ ದೇಶದ ಪ್ರಧಾನಿಯನ್ನಾಗಿ ಆಯ್ಕೆ ಮಾಡಲು ನನಗೊಂದು ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಎಸ್‌ಸಿ ಮೋರ್ಚಾದ ಜಿಲ್ಲಾಧ್ಯಕ್ಷ ಚಂದ್ರಶೇಖರ್ ಅಧ್ಯಕ್ಷತೆ ವಹಿಸಿದ್ದರು. ಸಭೆಯಲ್ಲಿ ಮೇಯರ್ ಶಿವಕುಮಾರ್, ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿ.ಎಸ್.ನಿರಂಜನ್‌ಕುಮಾರ್, ಮಾಜಿ ಸಚಿವ ರಾಮದಾಸ್, ಲೋಕಸಭಾ ಕ್ಷೇತ್ರದ ಚುನಾವಣಾ ಪ್ರಭಾರಿ ಫಣೀಶ್, ರಾಜ್ಯ ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡುಪ್ರಕಾಶ್, ಉಪಾಧ್ಯಕ್ಷ ಶಿವುವಿರಾಟ್, ನಗರ ಮಂಡಲ ಅಧ್ಯಕ್ಷ ಶಿವರಾಜ್, ಎಸ್‌ಟಿ ಮೋರ್ಚಾದ ರಾಜ್ಯದ ಕಾರ್ಯದರ್ಶಿ ಜಯಸುಂದರ್ ಮೊದಲಾದವರು ಇದ್ದರು.

# ಸ್ವಾವಲಂಬನೆಗೆ ನಾರಿ ನ್ಯಾಯ

## ಕಾಂಗ್ರೆಸ್ ಐದು ಗ್ಯಾರಂಟಿ ವಿವರಿಸಿದ ಡಾ.ಪುಷ್ಪಾ ಅಮರನಾಥ್

**ಮೈಸೂರು:** ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ಲೋಕಸಭಾ ಚುನಾವಣೆಯ ಪ್ರಣಾಳಿಕೆಯಲ್ಲಿ ಪ್ರಕಟಿಸಿರುವ ನಾರಿ ನ್ಯಾಯ ಐದು ಗ್ಯಾರಂಟಿಗಳು ಮಹಿಳೆಯರ ಸ್ವಾವಲಂಬನೆ ಮತ್ತು ರಕ್ಷಣೆಗೆ ಒತ್ತು ನೀಡಲಿವೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷರೂ ಆದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಡಾ.ಪುಷ್ಪಾ ಅಮರನಾಥ್ ವಿಶ್ವಾಸ ವ್ಯಕ್ತಪಡಿಸಿದರು.



ನಗರದ ಕಾಂಗ್ರೆಸ್ ಭವನದಲ್ಲಿ ಶನಿವಾರ ನಾರಿ ನ್ಯಾಯ ಗ್ಯಾರಂಟಿ ಪೋಸ್ಟರ್ ಅನ್ನು ಅನಾವರಣಗೊಳಿಸಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಮತ್ತು ನಾಯಕ ರಾಹುಲ್ ಗಾಂಧಿ ಅವರು ಘೋಷಿಸಿರುವ ಗ್ಯಾರಂಟಿಗಳು ದೇಶದ ಅರ್ಧದಷ್ಟು ಮಹಿಳೆಯರಿಗೆ ನ್ಯಾಯ ದೊರಕಿಸಲಿವೆ ಎಂದು ನುಡಿದರು.

ನಾರಿ ನ್ಯಾಯ: ಮಹಾಲಕ್ಷ್ಮೀ ಗ್ಯಾರಂಟಿಯಲ್ಲಿ ಬಡ ಕುಟುಂಬಕ್ಕೆ ವಾರ್ಷಿಕ 1 ಲಕ್ಷ ಕೊಡುವುದಾಗಿ ಘೋಷಣೆ ಮಾಡಿದ್ದೇವೆ. ಅಧಿಕಾರ್ ಮೈತ್ರಿ ಮೂಲಕ ದೌರ್ಜನ್ಯಕ್ಕೆ ತುತ್ತಾದ ಹೆಣ್ಣು ಮಕ್ಕಳಿಗೆ ಕಾನೂನಿನ ನೆರವು ದೊರೆಯಲಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ವಕೀಲರನ್ನು ನೇಮಕ ಮಾಡಲಾಗುತ್ತಿದೆ. ಸರ್ಕಾರಿ ಹುದ್ದೆಗಳಲ್ಲಿ ಮಹಿಳೆಯರಿಗೆ ಶೇ. 50 ಮೀಸಲಾತಿ, ಆಶಾ ಕಾರ್ಯಕರ್ತೆಯರ ಸಂಬಳ ದ್ವಿಗುಣ, ಉದ್ಯೋಗ ನಿರತ ಮಹಿಳೆಯರಿಗಾಗಿ ಅಕ್ಷರದ್ವ ಸಾವಿತ್ರಿಬಾಯಿ ಫುಲೆ ಹೆಸರಿನಲ್ಲಿ ಹಾಸ್ಟೆಲ್ ನಿರ್ಮಾಣ ಮಾಡುತ್ತೇವೆ ಎಂದು ಹೇಳಿದರು.

ಸಿದ್ದರಾಮಯ್ಯ ಗ್ಯಾರಂಟಿ ರಾಮಯ್ಯ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚುನಾವಣಾ ಪೂರ್ವದ ಭರವಸೆಯನ್ನು ಈಡೇರಿಸುವ ಮೂಲಕ ದೇಶದಲ್ಲಿ ಗ್ಯಾರಂಟಿ ರಾಮಯ್ಯನೆಂದು ಹೆಸರು ಪಡೆದುಕೊಂಡಿದ್ದಾರೆ. ನುಡಿದಂತೆ ನಡೆದಿದ್ದೇವೆ. ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ನಾರಿ ನ್ಯಾಯವನ್ನು ಅನುಷ್ಠಾನ ಮಾಡುತ್ತೇವೆ ಎಂದರು.

ಮೋದಿ ಗ್ಯಾರಂಟಿ ಮಹಾ ಸುಳ್ಳು: ಕರ್ನಾಟಕದ ಗ್ಯಾರಂಟಿಗಳನ್ನು ಟೀಕೆ ಮಾಡುತ್ತಿದ್ದ ಬಿಜೆಪಿಯವರು ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಯನ್ನು ಕಾಪಿ ಮಾಡಿದ್ದಾರೆ. ಮತ್ತೊಮ್ಮೆ ಅಧಿಕಾರ ಕೊಟ್ಟರೆ ಗ್ಯಾರಂಟಿ ಕೊಡುವುದಾಗಿ ಆಶ್ವಾಸನೆ ಕೊಡುತ್ತಿದ್ದಾರೆ. 10 ವರ್ಷಗಳಿಂದ ಅಧಿಕಾರದಲ್ಲಿದ್ದು ಕೊಟ್ಟ ಭರವಸೆ ಈಡೇರಿಸಲಾಗದೇ ಈಗ ಮತ್ತೊಮ್ಮೆ ಅವಕಾಶ ಕೇಳುತ್ತಿದ್ದಾರೆ. ನಾಚಿಕೆಯಾಗುವುದಿಲ್ಲವೇ? ಎಂದು ಟೀಕಿಸಿದರು.

2013ರಲ್ಲಿ ಅಧಿಕಾರಕ್ಕೆ ಬಂದ 60 ದಿನಗಳಲ್ಲಿ ಮಹಿಳಾ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿದ್ದರು. 10 ವರ್ಷಗಳು ಬೇಕಾಯಿತು. ಅಗತ್ಯ ವಸ್ತುಗಳು, ಅಡುಗೆ ಅನಿಲದ ಬೆಲೆ ಯಾಕೇ ದ್ವಿಗುಣವಾಯಿತು. ಪ್ರತಿಯೊಬ್ಬರ ಖಾತೆಗೆ 15 ಲಕ್ಷ ಕಪ್ಪು ಹಣ, ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಯಾಕೇ ಮಾಡಲಿಲ್ಲ? ಪೆಟ್ರೋಲ್, ಡಿಸೇಲ್ ಬೆಲೆ ಯಾಕೇ ದುಪ್ಪಟ್ಟಾಯಿತು? ಬಿಜೆಪಿಯವರು ಉತ್ತರ ಕೊಡಬೇಕು. ಈಗ ಮೋದಿ ಕಾ ಗ್ಯಾರಂಟಿ ಅಪ್ಪಟ ಸುಳ್ಳು ಮತ್ತು ಚುನಾವಣೆಯ ಗಿಮಿಕ್. ಇದನ್ನು ಜನರು ನಂಬಬಾರದು ಎಂದರು.

10 ವರ್ಷಗಳ ಆಡಳಿತದಲ್ಲಿ ಒಮ್ಮೆಯೂ ಪ್ರಧಾನಿ ಮೋದಿ ಪತ್ರಿಕಾಗೋಷ್ಠಿ ನಡೆಸಲಿಲ್ಲ, ಪ್ರಶ್ನೆಗಳನ್ನು ಎದುರಿಸಲಾಗದೇ ಮನ್ ಕಿ ಬಾತ್ ನಲ್ಲಿ ಮಾತಾಡುತ್ತಿದ್ದಾರೆ. ಚುನಾವಣಾ ಬಾಂಡ್ ಹಗರಣ ಬೆಳಕಿಗೆ ಬಂದಿದೆ. ಯಾರು ಉತ್ತರಿಸಬೇಕು? ಎಂದು ಒತ್ತಾಯಿಸಿದರು.

ಕೇಂದ್ರ ಸರ್ಕಾರದಿಂದ ಕರ್ನಾಟಕಕ್ಕೆ ನಿರಂತರವಾಗಿ ಅನ್ಯಾಯವಾಗುತ್ತಿದೆ. ಮಲತಾಯಿ ಧೋರಣೆ ಅನುಸರಿಸಲಾಗುತ್ತಿದೆ. ನ್ಯಾಯಯುತ ತೆರಿಗೆ ಹಣ ಕೊಡದೇ ಮಹಾಮೋಸ ಮಾಡಲಾಗುತ್ತಿದೆ. ಕರ್ನಾಟಕದ ಹಣವನ್ನು ಬೇರೆ ರಾಜ್ಯಗಳಿಗೆ ಹಂಚುತ್ತಿದ್ದಾರೆ. ಹಾಗಾಗಿ ಕರ್ನಾಟಕದ ಜನತೆ ಬಿಜೆಪಿ ನಾಯಕರ ಆಶ್ವಾಸನೆಯನ್ನು ನಂಬಬಾರದು ಎಂದರು.

ಕರ್ನಾಟಕದಲ್ಲಿ ನುಡಿದಂತೆ ನಡೆದಿದ್ದೇವೆ. ಕೇಂದ್ರದಲ್ಲಿಯೂ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ನುಡಿದಂತೆ ನಡೆಯಲಿದ್ದೇವೆ. ಕೇಂದ್ರದ ವಿರುದ್ಧ ದನಿ ಎತ್ತದ ಸಂಸದರಿಂದ ಜೀವನ ಕತ್ತಲೆಯಲ್ಲಿದೆ. ಭವಿಷ್ಯ ಕಾಣುತ್ತಿಲ್ಲ. ನೆಮ್ಮದಿ ಇಲ್ಲವಾಗಿದೆ. ಸಂವಿಧಾನ ರಕ್ಷಿಸಬೇಕಿದೆ. ಈ ಎಲ್ಲ ಕಾರಣಕ್ಕೆ ಕಾಂಗ್ರೆಸ್ ಗೆ ಆಶೀರ್ವಾದ ಮಾಡುವಂತೆ ಕೇಳುತ್ತಿದ್ದೇನೆ ಎಂದು ತಿಳಿಸಿದರು.

ಬಡವರಿಗೆ ಕಾರ್ಯಕ್ರಮಗಳನ್ನು ಕೊಟ್ಟಿದ್ದು ಕಾಂಗ್ರೆಸ್ ಸರ್ಕಾರ ಮಾತ್ರ. ನೆಹರೂ ಸರ್ಕಾರದಿಂದ ಮನಮೋಹನ್ ಸಿಂಗ್ ವರೆಗೆ ಎಷ್ಟು ಕಾರ್ಯಕ್ರಮಗಳನ್ನು ಕೊಟ್ಟಿದ್ದಾರೆ? ಬಿಜೆಪಿ ಬಡವರ ಪರವಾಗಿ ಒಂದೇ ಒಂದೂ ಕಾರ್ಯಕ್ರಮ ರೂಪಿಸಿದೆಯೇ? ಯಾವ ಕೆಲಸ ಮಾಡದಿದ್ದರೂ ಭಾವನಾತ್ಮಕವಾಗಿ ಜನರನ್ನು ಸೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಡಾ.ಪುಷ್ಪಾ ಅಮರನಾಥ್ ಉತ್ತರಿಸಿದರು.

ಮಾಜಿ ಮಹಾಪೌರರಾದ ಪುಷ್ಪಾಲತಾ ಚಿಕ್ಕಣ್ಣ, ಮೋದಾಮಣಿ ಮೇಯರ್ ಉಪ ಮೇಯರ್ ಪುಷ್ಪವಲ್ಲಿ, ಮುಖಂಡರಾದ ರಾಧಾಮಣಿ, ಡಾ.ಸುಜಾತಾರಾವ್, ಲತಾ ಮೋಹನ್, ಭವ್. ಚಂದ್ರಕಲಾ. ಇಂದ್ರ. ಸುಶೀಲಾ ಮರಿಗೌಡ ಇದ್ದರು.

# ನನ್ನ ಗೆಲುವಿಗೆ ಯಾವುದೇ ಪರಿಣಾಮ ಬೀರುವುದಿಲ್ಲ

**ಚಾಮರಾಜನಗರ:** ಚಾಮರಾಜನಗರ ಲೋಕಸಭಾ ಕ್ಷೇತ್ರದ 8 ಕ್ಷೇತ್ರಗಳ ಪೈಕಿ 7 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರಿದ್ದರು ನನ್ನ ಗೆಲುವಿಗೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಬಿಜೆಪಿ ಅಭ್ಯರ್ಥಿ ಎಸ್ .ಬಾಲರಾಜ್ ಹೇಳಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಟಿಯಲ್ಲಿ 7 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರಿದ್ದು ಗೆಲುವಿಗೆ ತೊಂದರೆಯಾಗುವುದಿಲ್ಲ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಲೋಕಸಭಾ ಚುನಾವಣೆಯು ರಾಷ್ಟ್ರೀಯ ವಿಚಾರವಾಗಿರುವುದರಿಂದ ಇದಕ್ಕೂ ಕಾಂಗ್ರೆಸ್ ಶಾಸಕರಿಗೂ ಯಾವುದೇ ಸಂಬಂಧವಿಲ್ಲ. ನನಗೆ ಕಾಂಗ್ರೆಸ್‌ನಿಂದ ಯಾವುದೇ ತೊಂದರೆ ಆಗುವುದಿಲ್ಲ ಎಂದರು.

ಬಿಜೆಪಿ ನನಗೆ ಒಂದು ಒಳ್ಳೆಯ ಅವಕಾಶ ಕೊಟ್ಟಿದೆ. ಬೇರೆ ರಾಷ್ಟ್ರೀಯ ಪಕ್ಷದಲ್ಲಿ ಪ್ರೊಫೈಲ್ ಕೊಟ್ಟು ಅರ್ಜಿ ಹಾಕಬೇಕು. ಆದರೆ ಬಿಜೆಪಿಯಲ್ಲಿ ಪಕ್ಷದ ಕಾರ್ಯಕರ್ತರ, ಮುಖಂಡರ, ಸಮೀಕ್ಷೆ ವರದಿ ಪ್ರಕಾರ ಅಭ್ಯರ್ಥಿ ಘೋಷಣೆ ಮಾಡುತ್ತಾರೆ. ನಮ್ಮ ಪಕ್ಷದಲ್ಲಿ ಹಲವಾರು ಆಕಾಂಕ್ಷಿಗಳು ಇದ್ದರು ಪಕ್ಷ ನನ್ನನ್ನು ಪರಿಗಣಿಸಿರುವುದಕ್ಕೆ ನಾನು ಋಣಿಯಾಗಿರುತ್ತೇನೆ ಎಂದು ತಿಳಿಸಿದರು.

ಮಾಜಿ ಸಚಿವ ಎನ್.ಮಹೇಶ್, ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ನನ್ನ ಪರವಾಗಿದ್ದರು. ನಮ್ಮ ನಾಯಕರೆಲ್ಲರೂ ಸ್ಥಳೀಯ ಅಭ್ಯರ್ಥಿ ಬೇಕು ಎಂದು ಧನಿ ಎತ್ತಿದ್ದರು. ಹಾಲಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ನಿವೃತ್ತಿ ಘೋಷಣೆ ಮಾಡಿದ್ದಾರೆ. ವಿ.ಶ್ರೀನಿವಾಸ್ ಪ್ರಸಾದ್ ಕೂಡ ನನಗೆ ಬೆಂಬಲ ಕೊಟ್ಟಿದ್ದಾರೆ. ನಮ್ಮ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಹಾಗೂ ಪಕ್ಷದ ಎಲ್ಲಾ ಮುಖಂಡರ ಆಶೀರ್ವಾದ ನನಗೆ ಸಿಕ್ಕಿದೆ ಎಂದರು. ಈ ಕ್ಷೇತ್ರದಲ್ಲಿ ಬಿಜೆಪಿ ಗೆಲ್ಲುವ ವಾತಾವರಣ ನಿರ್ಮಾಣವಾಗಿದೆ. ವಿಶ್ವಮಟ್ಟದಲ್ಲಿ ನಮ್ಮ ದೇಶವನ್ನು ಗುರುತಿಸುವಂತೆ ಮಾಡಬೇಕು.

ಅದಕ್ಕಾಗಿ ನರೇಂದ್ರ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕು.

### ಸ್ಪರ್ಧೆ ಮಾಡಲು ಅವಕಾಶ ಮಾಡಿಕೊಡಲಿ

**1990 ರಿಂದ ನನ್ನನ್ನು ನಾನು ಪಕ್ಷದ ಸೇವೆಗೆ ತೊಡಗಿಸಿಕೊಂಡಿದ್ದು ಬಹಳಷ್ಟು ಮಹಿಳಾಪರ ಹೋರಾಟಗಳಲ್ಲಿ ಸಕ್ರಿಯವಾಗಿದ್ದು ಕೆ ಹೆಚ್ ಮುನಿಯಪ್ಪನವರ ಗೆಲುವಿನಲ್ಲೂ ಸಹಾ ಪ್ರಮುಖ ಪಾತ್ರ ವಹಿಸಿದ್ದೆ ಅಂದಿನಿಂದ ಇಂದಿನವರೆಗೂ ಪಕ್ಷಕ್ಕೆ ಪ್ರಾಮಾಣಿಕವಾಗಿ ಸೇವೆಸಲ್ಲಿಸುತ್ತಾ ಬಂದಿದ್ದೇನೆ ನನ್ನ ಸೇವೆಯನ್ನು ಗುರುತಿಸಿ ಪಕ್ಷ ನನಗೆ ಟಿಕೆಟ್ ನೀಡಿದರೆ ಗೆಲುವು ನಮ್ಮದೇ ಎಂದರು . ಪತ್ರಕರ್ತರ ಭವನದಲ್ಲಿ ಇಂದುನಡೆದ ಪತ್ರಿಕಾಘೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಶಾಂತ ಕುಮಾರಿ ನಾನು ಬಲಗೈ ಸಮಾಜದವಳಾಗಿದ್ದು ಇದುವರೆವಿಗೂ ಮಹಿಳಾ ಅಭ್ಯರ್ಥಿಗಳು ಸ್ಪರ್ಧಿಸಿಯೇಇಲ್ಲಇದುವರೆವಿಗೂಪುರುಷರೇಕಾಂಗ್ರೆಸ್ಪಕ್ಷದಿಂದಸ್ಪರ್ಧಿಸುತ್ತಾಬಂದಿದ್ದರುಈಅಂಶವನ್ನುಗಮನಿಸಿ ಮೀಸಲಾತಿಯಡಿಯಲ್ಲಿಮಹಿಳೆಯರಿಗೆವಿಶೇಷಸ್ಥಾನಮಾನ ನೀಡಿ ನನ್ನನ್ನು ಕಾಂಗ್ರೆಸ್ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಲು ಅವಕಾಶಯಿಮಾಡಿಕೊಡಬೇಕೆಂದರು.**

ಜಾತ್ಯಾತೀತ ಜನತಾದಳ ಕೂಡ ನಮಗೆ ಸಂಪೂರ್ಣ ಬೆಂಬಲ ಕೊಟ್ಟಿದೆ ಎಚ್.ಡಿ.ಕುಮಾರಸ್ವಾಮಿ ಹಾಗೂ ಜಿ.ಟಿ.ದೇವೇಗೌಡರು ಸಹಕಾರ ಕೊಡುತ್ತೇವೆ ಎಂದು ಭರವಸೆ ನೀಡಿದ್ದಾರೆ. ಚಾಮರಾಜನಗರ ಜಿಲ್ಲೆ ಅಭಿವೃದ್ಧಿಗೆ ಪೂರಕವಾದ ಅಂಶಗಳನ್ನು ಹೊಂದಿದೆ. ಶೈಕ್ಷಣಿಕ ಅಭಿವೃದ್ಧಿ ಸೇರಿದಂತೆ ಕ್ಷೇತ್ರದ ಅಭಿವೃದ್ಧಿಗೆ ಪರಿಣಾಮಕಾರಿ ಕೆಲಸ ಮಾಡುತ್ತೇನೆ. ನನ್ನನ್ನು ರಾಜಕೀಯವಾಗಿ ಬೆಳೆಸಿದ್ದು ದಿ.ರಾಜಶೇಖರಮೂರ್ತಿ ನನ್ನಂತ ಅನೇಕರನ್ನು ಹಿರಿಯ ನಾಯಕರು ಮುನ್ನೆಲೆಗೆ ತಂದಿದ್ದಾರೆ. ಇವರನ್ನೆಲ್ಲಾ ಸ್ಮರಿಸುತ್ತಾ ನಾನು ಚುನಾವಣೆ ಪ್ರಚಾರ ಮಾಡುತ್ತೇನೆ ಎಂದರು. 2004ರಲ್ಲಿ ನಾನು ಕೊಳ್ಳೇಗಾಲ ಶಾಸಕನಾಗಿದ್ದಾಗ ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇನೆ. ಕೊಳ್ಳೇಗಾಲ ಹಾಗೂ ಯಳಂದೂರು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಿದ್ದೆ. ಅಲ್ಲದೇ ಭರಚುಕ್ಕಿಯಲ್ಲಿ ಜಲಪಾತೋತ್ಸವ ಮಾಡುವ ಮೂಲಕ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡಿದ್ದೆ. ಮುಂದೆ ಜಿಲ್ಲೆಯ ಸಮಗ್ರ ಅಭಿವೃದ್ಧಿಯ ದೂರ ದೃಷ್ಟಿ ಹೊಂದಿದ್ದೇನೆ. ಮತದಾರರು ಈ ಬಾರಿ ನನ್ನನ್ನು ಆಶೀರ್ವಾದ ಮಾಡಬೇಕು ಎಂದು ಮನವಿ ಮಾಡಿದರು. ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್, ಪ್ರಭಾರಿ ಪಟೇಶ್, ಮಾಜಿ ಎಂಎಲ್‌ಸಿ ಪ್ರೊ.ಕೆ.ಆರ್.ಮಲ್ಲಿಕಾರ್ಜುನಪ್ಪ ಇದ್ದರು.

## ತತ್ವಾದರ್ಶಗಳು ನಮ್ಮೆಲರ ಭವ್ಯ ಭವಿಷ್ಯಕ್ಕ ಭದ್ರ ಬುನಾದಿ

**ವಿಜಯಪುರ:** ಜಗದ್ಗುರು ರೇಣುಕಾಚಾರ್ಯರ ತತ್ವಾದರ್ಶಗಳು , ಸಂಸ್ಕಾರ, ಸಂಸ್ಕೃತಿಗಳು ನಮ್ಮೆಲ್ಲರ ಭವ್ಯ ಭವಿಷ್ಯಕ್ಕೆ ಭದ್ರ ಬುನಾದಿಯಾಗಿದೆ ಎಂದು ಪುರಸಭಾ ಅಧ್ಯಕ್ಷೆ ವಿಮಲ ಬಸವರಾಜ್ ತಿಳಿಸಿದರು.

ಪಟ್ಟಣದ ಪುರಸಭಾ ಆವರಣದಲ್ಲಿ ಪುರಸಭೆ ವತಿಯಿಂದ ಆಯೋಜಿಸಿದ್ದ ಶ್ರೀ ಜಗದ್ಗುರು ರೇಣುಕಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ಧರ್ಮದಿಂದಲೇ ವಿಶ್ವಶಾಂತಿ: ಧರ್ಮದಿಂದಲೇ ವಿಶ್ವಶಾಂತಿ ಎಂಬುದನ್ನು ಎಲ್ಲರೂ ಅರಿಯಬೇಕು.ಕಾಯಕ ಮತ್ತು ದಾಸೋಹ ಭಾವನೆ ಮೂಲಕ ಕ್ರಿಯಾತ್ಮಕ ಬದುಕಿಗೆ ಕರೆಕೊಟ್ಟವರು. ಮಹಾಮುನಿ ಅಗಸ್ಯರಿಗೆ ಶಿವಾತ ಸಿದ್ಧಾಂತವನ್ನು ಬೋಧನೆಗೈದು ಅಸ್ಪಶ್ಯದ್ಧಾರಗಗೈದ ಕಾರಣ ಪುರುಷರು. ಜಾತಿಗಿಂತ ನೀತಿ, ತತ್ವಕ್ಕಿಂತ ಆಚರಣೆ, ಮಾತಿಗಿಂತ ಕೃತಿ, ಬೋಧನೆಗಿಂತ ಸಾಧನೆ, ದಾನಕ್ಕಿಂತ ದಾಸೋಹ, ಚರಿತ್ರೆಗಿಂತ ಚಾರಿತ್ರ್ಯ ಮಿಗಿಲೆಂದು ಸಾರಿದ ಪರಮಾಚಾರ್ಯರು. ಜಾತಿ, ಮತ, ಪಂಥಗಳ ಗಡಿ ಮೀರಿ ಮಾನವೀಯತೆಯ ಆದರ್ಶ ಮೌಲ್ಯಗಳನ್ನು ಎತ್ತಿ ಹಿಡಿದ ಕಾರುಣ್ಯಶೀಲರು ಶ್ರೀ ಜಗದ್ಗುರು ರೇಣುಕಾಚಾರ್ಯರು ಎಂದರು.

ಪುರಸಭಾ ಸದಸ್ಯ ಹನೀಪುಲ್ಲ ಮಾತನಾಡಿ, ಮನುಷ್ಯರು ಮಹಾದೇವರಾಗುವ ಮಾರ್ಗವನ್ನು ಹಾಕಿಕೊಟ್ಟವರಲ್ಲಿ ರೇಣುಕಾಚಾರ್ಯ ಮೊದಲಿಗರು. ಸಾಮಾಜಿಕ, ಲಿಂಗ ಸಮಾನತೆಗೆ ಹೆಚ್ಚಿನ ಮನ್ನಣೆ ನೀಡಿ ಅದನ್ನು ಸರ್ವರೂ ಅನುಸರಿಸುವಂತೆ ಕರೆಕೊಟ್ಟಿದ್ದರು. ಅವರ ಆದರ್ಶ ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ಸಮಾಜ ನಿರ್ಮಿಸಬಹುದು ಎಂದರು. ಪುರಸಭಾ ಮುಖ್ಯಾಧಿಕಾರಿ ಸಂತೋಷ್ ಕುಮಾರ್, ಉಪಾಧ್ಯಕ್ಷ ಕೇಶವಪ್ಪ, ವೀರಶೈವ ಮುಖಂಡ ಬಸವರಾಜ್, ಪುರಸಭಾ ಸದಸ್ಯರಾದ ನಾರಾಯಣಸ್ವಾಮಿ, ಶ್ರೀರಾಮಪ್ಪ, ಮಂಜುಳ ಮುನಿರಾಜ್, ಮಾಜಿ ಪುರಸಭಾ ಸದಸ್ಯ ಮುನಿರಾಜ್, ಮಾಂತೇಶ್ ಪುರಸಭಾ ಸಿಬ್ಬಂದಿ ಹಾಗೂ ವೀರಶೈವ ಸಮಾಜದವರು ಹಾಜರಿದ್ದರು.



# ಕಾಂಗ್ರೆಸ್ ಶಾಸಕರಿಂದ ನನ್ನ ಗೆಲುವಿಗೆ ಪರಿಣಾಮ ಬೀರುವುದಿಲ್ಲ; ಬಾಲರಾಜ್

**ಚಾಮರಾಜನಗರ:** ಚಾಮರಾಜನಗರ ಲೋಕಸಭಾ ಕ್ಷೇತ್ರದ 8 ಕ್ಷೇತ್ರಗಳ ಪೈಕಿ 7 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರಿದ್ದರು ನನ್ನ ಗೆಲುವಿಗೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಹೇಳಿದರು.



ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಟಿಯಲ್ಲಿ 7 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರಿದ್ದು ಗೆಲುವಿಗೆ ತೊಂದರೆಯಾಗುವುದಿಲ್ಲ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಲೋಕಸಭಾ ಚುನಾವಣೆಯು

ರಾಷ್ಟ್ರೀಯ ವಿಚಾರವಾಗಿರುವುದರಿಂದ ಇದಕ್ಕೂ ಕಾಂಗ್ರೆಸ್ ಶಾಸಕರಿಗೂ ಯಾವುದೇ ಸಂಬಂಧವಿಲ್ಲ. ನನಗೆ ಕಾಂಗ್ರೆಸ್‌ನಿಂದ ಯಾವುದೇ ತೊಂದರೆ ಆಗುವುದಿಲ್ಲ ಎಂದರು.

ಬಿಜೆಪಿ ನನಗೆ ಒಂದು ಒಳ್ಳೆಯ ಅವಕಾಶ ಕೊಟ್ಟಿದೆ. ಬೇರೆ ರಾಷ್ಟ್ರೀಯ ಪಕ್ಷದಲ್ಲಿ ಪ್ರೊಫೈಲ್ ಕೊಟ್ಟು ಅರ್ಜಿ ಹಾಕಬೇಕು. ಆದರೆ ಬಿಜೆಪಿಯಲ್ಲಿ ಪಕ್ಷದ ಕಾರ್ಯಕರ್ತರ, ಮುಖಂಡರ, ಸಮೀಕ್ಷೆ ವರದಿ ಪ್ರಕಾರ ಅಭ್ಯರ್ಥಿ ಘೋಷಣೆ ಮಾಡುತ್ತಾರೆ. ನಮ್ಮ ಪಕ್ಷದಲ್ಲಿ ಹಲವಾರು ಆಕಾಂಕ್ಷಿಗಳು ಇದ್ದರು ಪಕ್ಷ ನನ್ನನ್ನು ಪರಿಗಣಿಸಿರುವುದಕ್ಕೆ ನಾನು ಋಣಿಯಾಗಿರುತ್ತೇನೆ ಎಂದು ತಿಳಿಸಿದರು.

ಮಾಜಿ ಸಚಿವ ಎನ್.ಮಹೇಶ್, ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ನನ್ನ ಪರವಾಗಿದ್ದರು. ನಮ್ಮ ನಾಯಕರೆಲ್ಲರೂ ಸ್ಥಳೀಯ ಅಭ್ಯರ್ಥಿ ಬೇಕು ಎಂದು ಧನಿ ಎತ್ತಿದ್ದರು. ಹಾಲಿ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ನಿವೃತ್ತಿ ಘೋಷಣೆ ಮಾಡಿದ್ದಾರೆ. ವಿ.ಶ್ರೀನಿವಾಸ್ ಪ್ರಸಾದ್ ಕೂಡ ನನಗೆ ಬೆಂಬಲ ಕೊಟ್ಟಿದ್ದಾರೆ. ನಮ್ಮ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಹಾಗೂ ಪಕ್ಷದ ಎಲ್ಲಾ ಮುಖಂಡರ ಆಶೀರ್ವಾದ ನನಗೆ ಸಿಕ್ಕಿದೆ ಎಂದರು.ಈ ಕ್ಷೇತ್ರದಲ್ಲಿ ಬಿಜೆಪಿ ಗೆಲ್ಲುವ ವಾತಾವರಣ ನಿರ್ಮಾಣವಾಗಿದೆ. ವಿಶ್ವಮಟ್ಟದಲ್ಲಿ ನಮ್ಮ ದೇಶವನ್ನು ಗುರುತಿಸುವಂತೆ ಮಾಡಬೇಕು.

ಅದಕ್ಕಾಗಿ ನರೇಂದ್ರ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕು. ಜಾತ್ಯಾತೀತ ಜನತಾದಳ ಕೂಡ ನಮಗೆ ಸಂಪೂರ್ಣ ಬೆಂಬಲ ಕೊಟ್ಟಿದೆ ಎಚ್.ಡಿ.ಕುಮಾರಸ್ವಾಮಿ ಹಾಗೂ ಜಿ.ಟಿ.ದೇವೇಗೌಡರು ಸಹಕಾರ ಕೊಡುತ್ತೇವೆ ಎಂದು ಭರವಸೆ ನೀಡಿದ್ದಾರೆ. ಚಾಮರಾಜನಗರ ಜಿಲ್ಲೆ ಅಭಿವೃದ್ಧಿಗೆ ಪೂರಕವಾದ ಅಂಶಗಳನ್ನು ಹೊಂದಿದೆ. ಶೈಕ್ಷಣಿಕ ಅಭಿವೃದ್ಧಿ ಸೇರಿದಂತೆ ಕ್ಷೇತ್ರದ ಅಭಿವೃದ್ಧಿಗೆ ಪರಿಣಾಮಕಾರಿ ಕೆಲಸ ಮಾಡುತ್ತೇನೆ. ನನ್ನನ್ನು ರಾಜಕೀಯವಾಗಿ ಬೆಳೆಸಿದ್ದು ದಿ.ರಾಜಶೇಖರಮೂರ್ತಿ ನನ್ನಂತ ಅನೇಕರನ್ನು ಹಿರಿಯ ನಾಯಕರು ಮುನ್ನೆಲ್ಲೆಗೆ ತಂದಿದ್ದಾರೆ. ಇವರನ್ನೆಲ್ಲಾ ಸ್ಮರಿಸುತ್ತಾ ನಾನು ಚುನಾವಣೆ ಪ್ರಚಾರ ಮಾಡುತ್ತೇನೆ ಎಂದರು. 2004ರಲ್ಲಿ ನಾನು ಕೊಳ್ಳೇಗಾಲ ಶಾಸಕನಾಗಿದ್ದಾಗ ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇನೆ. ಕೊಳ್ಳೇಗಾಲ ಹಾಗೂ ಯಳಂದೂರು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಿದ್ದೆ. ಅಲ್ಲದೇ ಭರಚುಕ್ಕಿಯಲ್ಲಿ ಜಲಪಾತೋತ್ಸವ ಮಾಡುವ ಮೂಲಕ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡಿದ್ದೆ. ಮುಂದೆ ಜಿಲ್ಲೆಯ ಸಮಗ್ರ ಅಭಿವೃದ್ಧಿಯ ದೂರ ದೃಷ್ಟಿ ಹೊಂದಿದ್ದೇನೆ. ಮತದಾರರು ಈ ಬಾರಿ ನನ್ನನ್ನು ಆಶೀರ್ವಾದ ಮಾಡಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಟಿಯಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್, ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್, ಪ್ರಭಾರಿ ಪಣೇಶ್, ಮಾಜಿ ಎಂಎಲ್‌ಸಿ ಪ್ರೊ.ಕೆ.ಆರ್.ಮಲ್ಲಿಕಾರ್ಜುನಪ್ಪ, ಬಿಜೆಪಿ ಜಿಲ್ಲಾ ವಕ್ತಾರ ಕಾಡಹಳ್ಳಿ ಕುಮಾರ್, ಮುಖಂಡ ಮಂಗಲ ಶಿವಕುಮಾರ್ ಇದ್ದರು.

## ಹೆದ್ದಾರಿಗಳಲ್ಲಿ ಕಾಫಿ ಡೇ ಮಾದರಿಯಲ್ಲಿ ನೀರಾ ಕೆಫೆ ಆರಂಭಿಸಲು ಸಲಹೆ

**ಹುಳಿಯಾರು:** ತೆಂಗು ಬೆಳೆಗಾರ ಉಳಿಯಬೇಕೆಂದರೆ ತೆಂಗಿನ ಮೌಲ್ಯವರ್ದಿತ ಉತ್ಪನ್ನಗಳು ಸಿದ್ಧವಾಗಬೇಕು. ಸಿದ್ಧವಾದ ಉತ್ಪನ್ನಗಳು ಹೆದ್ದಾರಿಗಳಲ್ಲಿ ಕಾಫಿ ಡೇ ಮಾದರಿಯಲ್ಲಿ ನೀರಾ ಕೆಫೆ ಆರಂಭಿಸಿ ಮಾರಾಟ ಮಾಡಬೇಕು ಎಂದು ಹೊಸಹಳ್ಳಿ ಚಂದ್ರಣ್ಣ ಬಣದ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಸಲಹೆ ನೀಡಿದರು.



ಹುಳಿಯಾರಿನ ವಾಲ್ಮೀಕಿ ಸರ್ಕಲ್‌ನಲ್ಲಿನ ರೈತ ಸಂಘದ ಕಛೇರಿಯಲ್ಲಿ ಶನಿವಾರ ನಡೆದ ರೈತ ಸಂಘಕ್ಕೆ ಸದಸ್ಯ ಸೇರ್ಪಡೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೇಶದಲ್ಲೇ ಅತಿ ಹೆಚ್ಚು ತೆಂಗು ಬೆಳೆಯುವ ರಾಜ್ಯವೆಂಬ ಖ್ಯಾತಿಯನ್ನು ಕರ್ನಾಟಕ ಪಡೆದಿದೆ. ತುಮಕೂರು, ಹಾಸನ, ಮಂಡ್ಯ, ಮೈಸೂರು, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ, ಉಡುಪಿ, ದಾವಣಗೆರೆ ಜಿಲ್ಲೆಗಳಲ್ಲಿ ಹೆಚ್ಚು ತೆಂಗು ಬೆಳೆಯುತ್ತಾರೆ. ಆದರೆ ಇತರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಸರ್ಕಾರ ತೆಂಗಿಗೆ ಉತ್ತೇಜನ ನೀಡುತ್ತಿಲ್ಲ. ಹಾಗಾಗಿಯೇ ತೆಂಗಿನಕಾಯಿ ಮತ್ತು ಕೊಬ್ಬರಿ ಬೆಲೆ ನೆಲಕಚ್ಚಿ ರೈತರು ಕಂಗೆಟ್ಟಿದ್ದರೂ ನೆರವಿಗೆ ಬರುತ್ತಿಲ್ಲ. ಪರಿಣಾಮ ಇಂದು ತೆಂಗಿನ ಪ್ರದೇಶವನ್ನು ಅಡಿಕೆ ಆಕ್ರಮಿಸುತ್ತಿದೆ. ಆದರೆ ಬಡವರು ಮಾತ್ರ ಇನ್ನೂ ಸರ್ಕಾರದ ಸಹಾಯದ ನಿರೀಕ್ಷೆಯಲ್ಲಿದ್ದಾರೆ ಎಂದು ಸಮಸ್ಯೆ ವಿವರಿಸಿದರು.

ಒಂದು ತೆಂಗಿನ ಕಾಯಿಗೆ ಉತ್ಪಾದನಾ ವೆಚ್ಚ ಕನಿಷ್ಠ 30 ರೂ, ಒಂದು ಕೊಬ್ಬರಿಗೆ 50 ರೂ ತಗುಲಿದರೆ ಮಾರುಕಟ್ಟೆ ಬೆಲೆ ಹತ್ತದಿನ್ನೈದು ರೂಪಾಯಿ ಇದೆ. ಹೀಗಾದರೆ ತೆಂಗು ಬೆಳೆಗಾರರ ಏಳಿಗೆ ಸಾಧ್ಯವಿಲ್ಲ. ಈ ನಿಟ್ಟಿನಲ್ಲಿ ತೆಂಗು ಬೆಳೆಗಾರ ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಯೋಚಿಸಿ ಹಾಲಿನ ಡೇರಿ ಮಾದರಿಯಲ್ಲಿ ನೀರಾ ಡೇರಿ ಆರಂಭಿಸಿ ರೈತರಿಂದ ನಿತ್ಯ ನೀರಾ ಸಂಗ್ರಹಿಸಿ ಅದರಿಂದ ಬೆಲ್ಲ, ಐಸ್‌ಕ್ರೀಮ್, ಚಾಕ್ ಲೇಟ್ ಸೇರಿದಂತೆ ಮೌಲ್ಯವರ್ದಿತ ಉತ್ಪನ್ನಗಳನ್ನು ತಯಾರಿಸಿ ಕಾಫಿ ಡೇ ಮಾದರಿಯಲ್ಲಿ ಹೆದ್ದಾರಿಗಳಲ್ಲಿ ಮತ್ತು ಪಟ್ಟಣಗಳಲ್ಲಿ ನೀರಾ ಕೆಫೆ ಸ್ಥಾಪಿಸಿ ಮಾರಾಟ ಮಾಡಬೇಕು. ಇದರಲ್ಲಿ ಎಳನೀರು, ತೆಂಗಿನ ಎಣ್ಣೆ, ತೆಂಗಿನಕಾಯಿ ಪುಡಿ ಸಹ ಮಾರಾಟ ಮಾಡಬಹುದು. ಇದರಿಂದ ಉದ್ಯೋಗ ಸೃಷ್ಠಿಸುವ ಜೊತೆಗೆ ರೈತನಿಗೂ ಒಳ್ಳೆಯ ಆದಾಯ ಬರುವಂತೆ ಮಾಡಬಹುದು ಎಂದು ವಿವರಿಸಿದ್ದಾರೆ.

ತಾಲೂಕು ಕಾರ್ಯಧ್ಯಕ್ಷ ಕರಿಯಪ್ಪ, ನೀರಾ ಈರಣ್ಣ, ಹೊವಿನ ತಿಮ್ಮಸ್ವಾಮಿ, ನಂದಿಹಳ್ಳಿ ರೇವಣ್ಣ, ಸೋಮಜ್ಜನಪಾಳ್ಯದ ಪುಟ್ಟಯ್ಯ, ಪೆದ್ದಾಬೋವಿ, ತಮ್ಮಡಿಹಳ್ಳಿ ನಿಂಗಪ್ಪ, ಲಕ್ಷ್ಮೀದೇವಮ್ಮ, ಪುಟ್ಟಮ್ಮ, ಗಂಗಮ್ಮ, ಎನ್. ರಮೇಶ್, ಗಂಗಣ್ಣ, ಪೂಜಾರ್ ಪ್ರಕಾಶ್, ಗಂಗಾಧರಯ್ಯ ಮತ್ತಿತರರು ಇದ್ದರು.

## ಸಂಜೆ ಟಿಪ್ಸ್



## ನ್ಯೂಟ್ರಿ ಸೇಫ್ 2 ಅನಾವರಣಗೊಳಿಸಿದ ವೈಗಾನ್

ವಿಶೇಷ ವೈದ್ಯಕೀಯ ಸಾಧನಗಳ ತಯಾರಿಕೆ ಮತ್ತು ವಿತರಣೆಯಲ್ಲಿ ಮುಂಚೂಣಿಯಲ್ಲಿರುವ ವೈಗಾನ್, ನ್ಯೂಟ್ರಿಸೇಫ್ 2 ಅನ್ನು ಅನಾವರಣಗೊಳಿಸಿದೆ. ಈ ಅತ್ಯಾಧುನಿಕ ಎಂಟರಲ್ ಫೀಡಿಂಗ್ ಸಿಸ್ಟಮ್, ನವಜಾತ ಶಿಶುಗಳಿಗೆ ನಿಖರವಾಗಿ ವಿನ್ಯಾಸಗೊಳಿಸಲಾಗಿದೆ, NICU ನಲ್ಲಿ ಆಹಾರದ ನಿಖರತೆ ಮತ್ತು ಸುರಕ್ಷತೆಯನ್ನು ಖಾತ್ರಿಗೊಳಿಸುತ್ತದೆ. ಅದರ ಚಾಲನೆಯೊಂದಿಗೆ ವೈಗಾನ್ ಟ್ಯೂಬ್ಗಳ ತಪ್ಪುಸಂಪರ್ಕಗಳ ನಿರ್ಣಾಯಕ ಸವಾಲನ್ನು ಪರಿಹರಿಸುತ್ತದೆ, ನವಜಾತ ಶಿಶುಗಳ ಆರೈಕೆಯಲ್ಲಿ ಪ್ರಚಲಿತದಲ್ಲಿರುವ ಅಪಾಯವು ಸಾವುಗಳು ಸೇರಿದಂತೆ ಪ್ರತಿಕೂಲ ಘಟನೆಗಳಿಗೆ ಕಾರಣವಾಗಿದೆ. ಆರೋಗ್ಯ ರಕ್ಷಣೆಯ ಸೆಟ್ಟಿಂಗ್ ಗಳಲ್ಲಿ ನವಜಾತ ಶಿಶುಗಳು ವಿವಿಧ ಟ್ಯೂಬ್ಗಳು ಮತ್ತು ಕ್ಯಾತಿಟರ್ ಗಳ ಮೂಲಕ ಔಷಧ ಮತ್ತು ಇತರ ಚಿಕಿತ್ಸೆಗಳನ್ನು ಪಡೆಯುತ್ತಾರೆ. ಈ ವಿಭಿನ್ನ ವಿತರಣಾ ವ್ಯವಸ್ಥೆಗಳ ಕನೆಕ್ಟರ್ಗಳು ಸಾಮಾನ್ಯವಾಗಿ ಹೊಂದಾಣಿಕೆಯಾಗುತ್ತವೆ ಮತ್ತು ಪರಸ್ಪರ ಸಂಪರ್ಕಿಸಬಹುದು. ಔಷಧಗಳು, ದ್ರವ ಆಹಾರ ಸೂತ್ರಗಳು ಅಥವಾ ಗಾಳಿಯನ್ನು ತಪ್ಪಾದ ಟ್ಯೂಬ್ ಮೂಲಕ ಆಕಸ್ಮಿಕವಾಗಿ ವಿತರಿಸಿದಾಗ ಪ್ರತಿಕೂಲ ಘಟನೆಗಳು ಮತ್ತು ಸಾವುಗಳು ಸಂಭವಿಸಿವೆ. ಈ ದೋಷಗಳನ್ನು ಕೊಳವೆಗಳ ತಪ್ಪು ಸಂಪರ್ಕಗಳು ಎಂದು ಕರೆಯಲಾಗುತ್ತದೆ.ವೈಗಾನ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ಪವನ್ ಚೌಧರಿ ಮಾತನಾಡುತ್ತಾ, ''ಎಂಟರಲ್ ನ್ಯೂಟ್ರಿಷನ್ ನಲ್ಲಿನ ತಪ್ಪು ಸಂಪರ್ಕಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ನಿರ್ಣಾಯಕ ಕಾಳಜಿಯಾಗಿದೆ. ನವಜಾತ ಶಿಶುಗಳಲ್ಲಿನ ಎಲ್ಲಾ ತಪ್ಪು ಸಂಪರ್ಕಗಳಲ್ಲಿ 40% ಎಂಟರಲ್ ಕ್ಲಿನಿಕಲ್ ಪ್ರದೇಶಕ್ಕೆ ಕಾರಣವೆಂದು ಹೇಳಲಾಗುತ್ತದೆ ಮತ್ತು ಇದರ ಪರಿಣಾಮಗಳು ಸಾಮಾನ್ಯವಾಗಿ ಗಂಭೀರವಾಗಿರುತ್ತವೆ ಮತ್ತು ಕೆಲವೊಮ್ಮೆ ಮಾರಕವಾಗಿರುತ್ತವೆ. Nutrisafe2 ನ ಉಡಾವಣೆಯು ಉತ್ಪನ್ನಗಳ ವಿನ್ಯಾಸದಲ್ಲಿ ವೈಗಾನ್ನ ಬದ್ಧತೆಗೆ ಮತ್ತೊಂದು ಸಾಕ್ಷಿಯಾಗಿದೆ, ಅದು ರೋಗಿಗಳಿಗೆ ಅವರ ಅನಾರೋಗ್ಯವನ್ನು ಮೀರಿ ಯಾವುದೇ ಅನಿರೀಕ್ಷಿತ ಹಾನಿಯನ್ನುಂಟು ಮಾಡುವುದಿಲ್ಲ ಎಂದು ಖಚಿತಪಡಿಸುತ್ತದೆ.

## 'ರವಾ ಮಿಕ್ಸ್'

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ರವೆ-2 ಕಪ್, ಹಸಿಮೆಣಸು - 2 (ಚಿಕ್ಕದಾಗಿ ಕತ್ತರಿಸಿಕೊಳ್ಳಿ), ಶುಂಠಿ - 1 ಇಂಚು (ಕತ್ತರಿಸಿಕೊಳ್ಳಿ), ಗೋಡಂಬಿ - 5, ಕರಿಬೇವು - ಸ್ವಲ್ಪ, ಕಡಲೆಬೇಳೆ - 1 ಟೀ ಸ್ಪೂನ್, ಉದ್ದಿನಬೇಳೆ - 1 ಟೀ ಸ್ಪೂನ್, ಎಣ್ಣೆ - 1 ಟೇಬಲ್ ಸ್ಪೂನ್, ಚಿಟಿಕೆ - ಇಂಗು, ಉಪ್ಪು - 1 ಟೇಬಲ್ ಸ್ಪೂನ್.

### ಮಾಡುವ ವಿಧಾನ

ಒಂದು ದಪ್ಪ ತಳದ ಪಾತ್ರೆ ತೆಗೆದುಕೊಂಡು ಅದನ್ನು ಗ್ಯಾಸ್ ಮೇಲೆ ಇಟ್ಟು 2 ಟೇಬಲ್ ಸ್ಪೂನ್ ಎಣ್ಣೆ ಹಾಕಿ. ಅದು ಬಿಸಿಯಾಗುತ್ತಲೇ ಅದಕ್ಕೆ 1 ಟೀ ಸ್ಪೂನ್ ಸಾಸಿವೆ ಹಾಕಿ ಅದು ಸಿಡಿದಾಗ ಅದಕ್ಕೆ ಉದ್ದಿನಬೇಳೆ, ಕಡಲೆಬೇಳೆ, ಕರಿಬೇವು, ಚಿಟಿಕೆ ಇಂಗು, ಹಸಿಮೆಣಸು, ಶುಂಠಿ ಹಾಕಿ ತುಸು ಫ್ರೈ ಮಾಡಿ. ನಂತರ ಇದಕ್ಕೆ ಗೋಡಂಬಿ ಹಾಕಿ ಸಣ್ಣ ಉರಿಯಲ್ಲಿ ಫ್ರೈ ಮಾಡಿ. ನಂತರ ಇದಕ್ಕೆ ರವೆ ಹಾಕಿ ಪರಿಮಳ ಬರುವವರಗೆ ಹುರಿದುಕೊಳ್ಳಿ. ನಂತರ ಇದಕ್ಕೆ ಉಪ್ಪು ಹಾಕಿ ಮಿಕ್ಸ್ ಮಾಡಿ. ಇದು ತಣ್ಣಗಾದ ನಂತರ ಒಂದು ಗಾಳಿಯಾಡದ ಡಬ್ಬದಲ್ಲಿ ಹಾಕಿ ತುಂಬಿಸಿಡಿ.

# ಮತ್ತೆ ತೆರೆ ಮೇಲೆ ಮಿಂಚಲು ಬಂದ ಕರೀನಾ




ಬಾಲಿವುಡ್ನಲ್ಲಿ ಹೆಸರು ಮಾಡಿದಂಥ ಚೆಲುವೆಯರಾದ ಕರೀನಾ ಕಪೂರ್ ಮತ್ತು ತಬು ಹಲವು ವರ್ಷಗಳ ನಂತರ ತೆರೆ ಮೇಲೆ ಕಾಣಿಸಿಕೊಂಡಿದ್ದಾರೆ. ಇವರಿಗೆ ನಟಿ ಕೃತಿ ಸನನ್ ಸಾಥ್ ನೀಡಿದ್ದಾರೆ.

ಕ್ರೇವ್ ಚಿತ್ರದ ಟ್ರೇಲರ್ ರಿಲೀಸ್ ಆಗಿದ್ದು, ಸಖತ್ ರೆಸ್ಪಾನ್ಸ್ ಪಡೆದಿದೆ.

ಈ ಸಿನಿಮಾದಲ್ಲಿ ಕರೀನಾ, ತಬು ಮತ್ತು ಕೃತಿ ಏರ್ ಹೋಸ್ಟೆಸ್ ಪಾತ್ರದಲ್ಲಿ ಮಿಂಚಿದ್ದಾರೆ. ಸರಿಯಾಗಿ ಸಂಬಳ ಕೊಡದ ಕಂಪನಿಯಲ್ಲಿ ಇವರು ಕೆಲಸ ಮಾಡುತ್ತಿದ್ದಾಗ, ಇವರಿಗೆ ಆ ಕಂಪನಿಯವರು ಗೋಲ್ಡ್ ಸ್ಮಗ್ಲಿಂಗ್ ಮಾಡುತ್ತಿರುವುದು ಕಂಡು ಬರುತ್ತದೆ.

ಅದನ್ನೇ ಬಂಡವಾಗಿರಿಸಿಕೊಂಡು, ತಾವು ಕೂಡ ಗೋಲ್ಡ್ ಪಡೆದು ಐಶಾರಾಮಿ ಜೀವನ ನಡೆಸುವ ಕನಸು ಕಾಣುತ್ತಾರೆ. ಅಷ್ಟರಲ್ಲೇ ಎಡವಟ್ಟಾಗಿ, ಮೂವರು ಏರ್ಹೋಸ್ಟೆಸ್ಗಳ ಬಂಡವಾಳ ಬಯಲಾಗುತ್ತದೆ. ಬಳಿಕ ಏನಾಗುತ್ತದೆ ಅನ್ನೋದನ್ನ ಸಿನಿಮಾ ಮೂಲಕ ನೋಡಬೇಕೆಂದು ಎಂದು, ಟ್ರೇಲರ್ನಲ್ಲಿ ಕುತೂಹಲ ಮೂಡಿಸಲಾಗಿದೆ.

ಕರೀನಾ ಮೊದಲಿನಂತೆ, ತಮ್ಮ ಬೋಲ್ಡ್ ಆಯಕ್ಟಿಂಗ್ನಿಂದ ಕಾಮಿಡಿ ಮಾಡುತ್ತ, ಜನರ ಗಮನ ಸೆಳೆದಿದ್ದಾರೆ. ತಬು ಅದೇ ಗಂಭೀರವಾದ ಆಯಕ್ಟಿಂಗ್ ಮುಂದುವರಿಸಿದರೆ, ಕೃತಿ ಜ್ಯೂನಿಯರ್ ಆಯಕ್ಟರ್ ಆಗಿಯೇ, ಮಿಂಚಿದ್ದಾರೆ. ಇನ್ನು ಈ ಸಿನಿಮಾದಲ್ಲಿ ಕಪಿಲ್ ಶರ್ಮಾ ಸೇರಿ, ಹಲವು ಕಲಾವಿದರು ನಟಿಸಿದ್ದಾರೆ. ರಾಜೇಶ್ ಎ ಕೃಷ್ಣನ್ ನಿರ್ದೇಶನದ ಸಿನಿಮಾವನ್ನು ಶೋಭಾ ಕಪೂರ್, ಅನಿಲ್ ಕಪೂರ್, ಏಕ್ತಾ ಕಪೂರ್, ರಿಹಾ ಕಪೂರ್ ನಿರ್ಮಾಣ ಮಾಡಿದ್ದಾರೆ. ಮಾರ್ಚ್ 29ಕ್ಕೆ ಈ ಸಿನಿಮಾ ರಿಲೀಸ್ ಆಗಲಿದ್ದು, ಈ ಬಾರಿ ಈ ಮೂವರು ನಟಿಯರ ಕಾಂಬಿನೇಷನ್ ಜಾದೂ ಮಾಡತ್ತಾ ಅಂತಾ ಕಾದು ನೋಡಬೇಕಿದೆ.

# ಹಸಿ 'ಕ್ಯಾರೆಟ್' ಪ್ರಯೋಜನ



### ಹೆಲ್ತ್ ಟಿಪ್ಸ್

ಹಸಿ ಕ್ಯಾರೆಟ್ ತಿಂದರೆ, ದೇಹದಲ್ಲಿ ಈಸ್ಟ್ರೋಜನ್ ಉತ್ಪಾದನೆ ನಿಯಂತ್ರಣದಲ್ಲಿರುತ್ತದೆ. ವಾಸ್ತವವಾಗಿ, ಹೆಚ್ಚುವರಿ ಈಸ್ಟ್ರೊಜೆನ್ ಮೊಡವೆ ಮತ್ತು ಒತ್ತಡ ಸೇರಿದಂತೆ ಇತರ ಹಾರ್ಮೋನುಗಳ ಅಸಮತೋಲನವನ್ನ ಉಂಟುಮಾಡಬಹುದು. ಈ ಸಮಸ್ಯೆಯನ್ನ ತಡೆಯಲು ಕ್ಯಾರೆಟ್ ನಮಗೆ ಸಹಾಯ ಮಾಡುತ್ತದೆ. ಅಲ್ಲದೆ, ಹಸಿ ಕ್ಯಾರೆಟ್ ಹೊಟ್ಟೆಯಲ್ಲಿನ ಕೆಟ್ಟ ಬ್ಯಾಕ್ಟೀರಿಯಾವನ್ನ ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಕ್ಯಾರೆಟ್ ವಿಶಿಷ್ಟವಾದ ಫೈಬರ್ 'ಗಳನ್ನ ಹೊಂದಿರುತ್ತದೆ. ಜೀರ್ಣಕ್ರಿಯೆ ಪ್ರಕ್ರಿಯೆಯು ಸುಗಮವಾಗಿರುತ್ತದೆ. ಯಕೃತ್ತು ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡಲು ಸಹಾಯ ಮಾಡುತ್ತದೆ.

ಕಚ್ಚಾ ಕ್ಯಾರೆಟ್ ದೇಹದಲ್ಲಿನ ಕೆಟ್ಟ ಬ್ಯಾಕ್ಟೀರಿಯಾ, ಎಂಡೋಟಾಕ್ಸಿನ್ ಮತ್ತು ಈಸ್ಟ್ರೊಜೆನ್'ನ್ನ ನಿಯಂತ್ರಿಸುತ್ತದೆ. ದಿನಕ್ಕೆ ಒಂದು ಕಚ್ಚಾ ಕ್ಯಾರೆಟ್ ತಿನ್ನುವುದು ಕಾರ್ಟಿಸೋಲ್, ಎಂಡೋಟಾಕ್ಸಿನ್ ಮತ್ತು ಈಸ್ಟ್ರೊಜೆನ್ ತಡೆಯುತ್ತದೆ. ಎಂಡೋಟಾಕ್ಸಿನ್'ಗಳನ್ನ ನಿವಾರಿಸುವಲ್ಲಿ ಕ್ಯಾರೆಟ್ ಅದ್ಭುತಗಳನ್ನ ಮಾಡುತ್ತದೆ.

ಕ್ಯಾರೆಟ್ ವಿಟಮಿನ್ ಎಯಲ್ಲಿ ಸಮೃದ್ಧವಾಗಿದೆ. ಯುಎಸ್ ಫುಡ್ ಅಂಡ್ ಡ್ರಗ್ ಅಡ್ಮಿನಿಸ್ಟ್ರೇಷನ್ (ಎಫ್ಡಿಎ) ಪ್ರಕಾರ, 4 ವರ್ಷಕ್ಕಿಂತ ಮೇಲ್ಪಟ್ಟ ಮಕ್ಕಳಿಗೆ ದಿನಕ್ಕೆ ಕನಿಷ್ಠ 700 ರಿಂದ 900 ಮೈಕ್ರೊಗ್ರಾಂಗಳಷ್ಟು ವಿಟಮಿನ್ ಎ ಅಗತ್ಯವಿದೆ. ಒಂದು ಕಚ್ಚಾ ಕ್ಯಾರೆಟ್ ತಿನ್ನುವುದು ಸಾಕಷ್ಟು ವಿಟಮಿನ್ ಎ ಅನ್ನ ಒದಗಿಸುತ್ತದೆ ಎಂದು ಈಆಂ ಹೇಳುತ್ತದೆ.

ಕ್ಯಾರೆಟ್'ನಲ್ಲಿ ವಿಟಮಿನ್ ಎ ಮತ್ತು ಬೀಟಾ ಕ್ಯಾರೋಟಿನ್ ಸಮೃದ್ಧವಾಗಿದೆ. ಆದ್ದರಿಂದ, ಹಸಿ ಕ್ಯಾರೆಟ್ ತಿನ್ನುವುದರಿಂದ ಮೊಡವೆ ಮತ್ತು ಕಲೆಗಳನ್ನ ತಡೆಯಬಹುದು.

ವಿಟಮಿನ್ ಎ ಥೈರಾಯ್ಡ್ ಕಾರ್ಯದ ಮೇಲೆ ಸಕಾರಾತ್ಮಕ ಪರಿಣಾಮ ಬೀರುತ್ತದೆ. ಕ್ಯಾರೆಟ್ ವಿಟಮಿನ್ ಎ ಯಲ್ಲಿ ಸಮೃದ್ಧವಾಗಿದೆ. ಹಾಗಾಗಿ ಹೈಪೋಥೈರಾಯ್ಡಿಸಮ್ ಇರುವವರಿಗೆ ಕ್ಯಾರೆಟ್ ವರದಾನವಾಗಿದೆ.

ಹಸಿ ಕ್ಯಾರೆಟ್ ತಿಂದರೆ.. ದೃಷ್ಟಿ ಚುರುಕಾಗುತ್ತದೆ. ರಕ್ತದೊತ್ತಡವನ್ನು ಕಡಿಮೆ ಮಾಡುತ್ತದೆ. ಇದು ಪ್ರೋಟೀನ್ ಹೆಚ್ಚಿಸುವುದು, ಶಕ್ತಿಯನ್ನ ಹೆಚ್ಚಿಸುವುದು, ಮೂಳೆಗಳನ್ನ ಬಲಪಡಿಸುವುದು ಮುಂತಾದ ಅನೇಕ ಪ್ರಯೋಜನಗಳನ್ನ ಹೊಂದಿದೆ.

ಕ್ಯಾರೆಟ್'ನಲ್ಲಿ ಕಡಿಮೆ ಕ್ಯಾಲೋರಿ ಮತ್ತು ಹೆಚ್ಚಿನ ಪ್ರೋಟೀನ್ ಇರುತ್ತದೆ. ಆದ್ದರಿಂದ ತೂಕ ನಷ್ಟ ಮಾಡುತ್ತೆ. ಇದು ಅನಗತ್ಯ ಕೊಬ್ಬನ್ನ ಕಡಿಮೆ ಮಾಡುತ್ತದೆ.

# ನೇಲ್ ಪಾಲಿಶ್ ತೆಗೆಯಲು ಟಿಪ್ಸ್

### ಬ್ಯೂಟಿ ಟಿಪ್ಸ್



ಕೈ ಬೆರಳಿಗೆ ಚೆನ್ನಾಗಿ ನೇಲ್ ಪಾಲಿಶ್ ಹಾಕಿಕೊಳ್ಳುತ್ತಾರೆ ಆದರೆ ಅದು ಅರ್ಧ ಹೋದಾಗ ಮಾತ್ರ ಬೆರಳು ಚೆನ್ನಾಗಿ ಕಾಣುವುದಿಲ್ಲ. ಅದನ್ನು ತೆಗೆಯಲು ರಿಮೂವರ್ ಬಳಸೋದು ಸಾಮಾನ್ಯ. ಆದರೆ ರಿಮೂವರ್ ಇಲ್ಲದೆ ಮನೆಯಲ್ಲಿರುವ ವಸ್ತುವನ್ನು ಬಳಸಿ ನೇಲ್ ಪಾಲಿಶ್ ಹೇಗೆ ತೆಗೆಯಬಹುದು ಎನ್ನುವುದನ್ನು ನೋಡೋಣ.

ನೇಲ್ ಪಾಲಿಶ್ ರಿಮೂವರ್ ಆಗಿ ಟೂತ್ಪೇಸ್ಟ್ ಬಳಸಬಹುದು.ಟೂತ್ಪೇಸ್ಟ್ ಬರೀ ಹಲ್ಲುಜ್ಜಲು ಮಾತ್ರ ಉಪಯೋಗಿಸಬೇಕೆಂದಿಲ್ಲ ನೇಲ್ ಪಾಲಿಶ್ ತೆಗೆಯಲು ಕೂಡ ಇದನ್ನು ಬಳಸಬಹುದು.ಈಥೈಲ್ ಅಸಿಟೇಟ್, ಟೂತ್ಪೇಸ್ಟ್ ನಲ್ಲಿ ಇರುತ್ತದೆ. ಇದು ಉಗುರುಗಳನ್ನು ಸ್ವಚ್ಛಗೊಳಿಸಲು ಕೂಡ ಸಹಕಾರಿ. ಉಗುರುಗಳನ್ನು ಸ್ವಚ್ಛಗೊಳಿಸಲು ಟೂತ್ಪೇಸ್ಟ್ ಮತ್ತು ಹಳೆಯ ಟೂತ್ ಬ್ರಷ್ ತೆಗೆದುಕೊಳ್ಳಬೇಕು ಉಗುರುಗಳ ಮೇಲೆ ಟೂತ್ಪೇಸ್ಟ್ ಹಚ್ಚಿಕೊಂಡು ಬ್ರಷ್ ಅನ್ನು ಒದ್ದೆ ಮಾಡಿ ಉಗುರುಗಳ ಮೇಲೆ ಉಜ್ಜಬೇಕು ಇದರಿಂದ ನೇಲ್ ನಲ್ಲಿರುವ ನೇಲ್ ಪಾಲಿಷ್ ತೆಗೆಯಬಹುದು.

ನೇಲ್ ಪಾಲಿಶ್ ಬಣ್ಣ ತೆಗೆಯಲು ಹ್ಯಾಂಡ್ ಸ್ಯಾನಿಟೈಸರ್ ಕೂಡ ಬಳಸಬಹುದು. ಸ್ಯಾನಿಟೈಸರ್ನಲ್ಲಿ ರಬ್ಬಿಂಗ್ ಆಲ್ಕೋಹಾಲ್ ಇರುತ್ತದೆ. ಇದು ಉಗುರುಗಳನ್ನು ಸ್ವಚ್ಛಗೊಳಿಸಲು ತುಂಬಾ ಸಹಾಯ ಮಾಡುತ್ತದೆ. ಸ್ಯಾನಿಟೈಸರ್ ನಿಂದ ನೇಲ್ ಪಾಲಿಶ್ ತೆಗೆಯಲು ಮೊದಲು ಹತ್ತಿಯನ್ನು ತೆಗೆದುಕೊಂಡು. ಅದರ ಮೇಲೆ ಸ್ಯಾನಿಟೈಸರ್ ಹಚ್ಚಿ ನಂತರ ಉಗುರಿಗೆ ಹಚ್ಚಿ ಉಜ್ಜಿ. ಇದನ್ನು 3 ರಿಂದ 4 ಬಾರಿ ಮಾಡಬೇಕು ಇದರಿಂದ ನೇಲ್ ನಲ್ಲಿರುವ ನೇಲ್ ಪಾಲಿಶ್ ಬಣ್ಣ ಹೋಗುತ್ತದೆ.

# ಭಾರತದಲ್ಲಿ ರೆಡಿ-ಟು-ಈಟ್ ಆಹಾರ ಕ್ಷೇತ್ರಕ್ಕೆ ಹೊಸ ಶಕ್ತಿ



ಬದಲಾದ ಜೀವನಶೈಲಿ, ನಗರೀಕರಣ ಮತ್ತು ಹೆಚ್ಚುತ್ತಿರುವ ಆದಾಯದಿಂದಾಗಿ ಇತ್ತೀಚಿನ ವರ್ಷಗಳಲ್ಲಿ ಭಾರತದಲ್ಲಿ ರೆಡಿ-ಟು-ಈಟ್ (ಆರ್.ಟಿ.ಇ.) ಆಹಾರೋದ್ಯಮವು ಗಮನಾರ್ಹವಾಗಿ ಬೆಳೆದಿದೆ. ಅನುಕೂಲ ಮತ್ತು ಸಮಯ-ಉಳಿತಾಯ ಎರಡೂ ಆಗುವುದರಿಂದವ್ಯಸ್ಥರಾದ ವಿದ್ಯಾರ್ಥಿಗಳು ಮತ್ತು ವೃತ್ತಿಪರರಿಗೆ ಆರ್.ಟಿ.ಇ.ಊಟ ಬಹಳ ಪ್ರಿಯವಾಗಿದೆ. ಸ್ಯಾಟ್ಸ್ಪ್ರಾಜೆಕ್ಟ್ ಗಳ ಗಾತ್ರದ ಅಧ್ಯಯನದ ಪ್ರಕಾರ: ಭಾರತದಲ್ಲಿ 2023 ರಲ್ಲಿ 52 ಶತಕೋಟಿ ಡಾಲರುಗಳ ಮೌಲ್ಯದ ಸಿದ್ಧ ಊಟದ ಮಾರಾಟವಾಗಿದೆ ಮತ್ತು 2026 ರ ವೇಳೆಗೆ ಇದು 64 ಶತಕೋಟಿ ಡಾಲರುಗಳನ್ನು ತಲುಪುತ್ತದೆ. ಎಂದರೆ, 2021 ಮತ್ತು 2026 ರ ನಡುವೆ, ಈ ಮೌಲ್ಯ ಶೇ.45 ರಷ್ಟು ಹಿಗ್ಗಿದೆ. ಸಿದ್ಧ ಊಟದಲ್ಲಿ ಎಲ್ಲ ಅನುಕೂಲಕರ ಆಹಾರ ಉತ್ಪನ್ನಗಳು ಇರುತ್ತವೆ. ಬೇಯಿಸಿದ ಮತ್ತು ಸಂಸ್ಕರಿಸಿದ ಅಥವಾ ಬೇಯಿಸದೆಯೇಹಾಗೇ ತಿನ್ನುವ ಆಹಾರಗಳನ್ನು ಪ್ಯಾಕ್ ಮಾಡಲ್ಪಟ್ಟಿರುತ್ತವೆ. ಭಾರತದಲ್ಲಿನ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವಾಲಯದ (ಎಂ.ಒ.ಎಫ್.ಪಿ.ಐ) ಪ್ರಕಾರ, 2028 ರ ವೇಳೆಗೆ ಭಾರತದ ಯುವ ಗ್ರಾಹಕರು ಮತ್ತು ಈ ಸಹಸ್ರಮಾನದ ಪೀಳಿಗೆಯವರಲ್ಲಿ 34 ಪ್ರತಿಶತದಷ್ಟು ಜನರು ಹೆಚ್ಚು ಆರ್ .ಟಿ.ಇ.ಊಟವನ್ನು ಸೇವಿಸುತ್ತಾರೆ. ಭಾರತೀಯ ಆರ್.ಟಿ.ಇ.ಆಹಾರ ಉತ್ಪನ್ನಗಳ ಜಾಗತಿಕ ಬೇಡಿಕೆ ದೇಶೀಯ ಬೇಡಿಕೆಯನ್ನು ಮೀರಿಸುತ್ತದೆ. ದೇಶೀಯ ಮತ್ತು ಅಂತರಾಷ್ಟ್ರೀಯ ಮಾರುಕಟ್ಟೆಗಳ ಬೇಡಿಕೆಯನ್ನು ಪೂರೈಸಲು, ಸ್ಯಾಟ್ಸ್ಲ್.. (ಸ್ಯಾಟ್ಸ್) ನ ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯಾದ ಸ್ಯಾಟ್ಸುಫ್ಡ್ ಸಲ್ಯೂಷನ್ಸ್ ಇಂಡಿಯಾ (ಎಸ್. ಎಫ್.ಎಸ್.ಐ.), ಭಾರತದ ಬೆಂಗಳೂರಿನಲ್ಲಿ ತನ್ನ ಅತಿದೊಡ್ಡ ಅಂತಾರಾಷ್ಟ್ರೀಯ ಆಹಾರ ಪರಿಹಾರ ಸೌಲಭ್ಯವನ್ನು ತೆರೆದಿದೆ. ಈಗಾಗಲೇ ಸಿಂಗಾಪುರ, ಚೀನಾ, ಜಪಾನ್ ಮತ್ತು ಥೈಲ್ಯಾಂಡ್ನಲ್ಲಿ ಭಾರಿ ಆಹಾರ ಸೌಲಭ್ಯಗಳು ಇವೆ.

61ಮಿಲಿಯನ್ SG$ಹೂಡಿಕೆ ಇರುವ ಸ್ಯಾಟ್ಸ್ಇಂಡಿಯಾ ಫುಡ್ ಸಲ್ಯೂಷನ್ಸ್ (ಎಸ್. ಎಫ್.ಎಸ್.ಐ.) ಹೆಪ್ಪುಗಟ್ಟಿದ ಆಹಾರ ಉತ್ಪಾದನಾ ಸೌಲಭ್ಯವಾಗಿದ್ದು, ಪಾಕಶಾಲೆಯ ಪರಿಣತಿಯನ್ನು,ಅತ್ಯುನ್ನತ ಆಹಾರ ಸುರಕ್ಷತಾ ಮಾನದಂಡಗಳ ಪ್ರಕಾರ ಇರುವ ರುಚಿಕರವಾದ, ಪೌಷ್ಟಿಕ ಆಹಾರ ಉತ್ಪನ್ನಗಳನ್ನು ಉತ್ಪಾದಿಸಲು ಸ್ಮಾರ್ಟ್ ತಂತ್ರಜ್ಞಾನವನ್ನು ಹೊಂದಿದೆ. ಉತ್ಪನ್ನಗಳೇ ಅಲ್ಲದೆ, ನಾವೀನ್ಯತೆಯಿಂದ ಕೂಡಿದ ಆಹಾರ ಪರಿಹಾರಗಳ ಸೌಲಭ್ಯವೂಇದ್ದುಸ್ಯಾಟ್ಸ್ನ ಅನುಭವ ಮತ್ತು ನಾವೀನ್ಯತೆ ಕೇಂದ್ರಗಳ ಜಾಗತಿಕ ನೆಟ್ವರ್ಕ್ ಭಾಗವಾಗಿ ಪ್ಯಾಕೇಜಿಂಗ್ ಸಾಮರ್ಥ್ಯಗಳನ್ನು ಸಹ ಒದಗಿಸುತ್ತದೆ.

ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಮೀಪದಲ್ಲಿರುವ ಈ ಸೌಲಭ್ಯವು 221,000 ಚದರ ಅಡಿ ವಿಸ್ತೀರ್ಣವನ್ನು ಹೊಂದಿದ್ದು ಸಂಸ್ಥೆಗಳಿಗೆಕೇಟರಿಂಗ್, ಖಾಸಗಿಯವರಿಗೆ, ಮತ್ತು ವಾಣಿಜ್ಯಕ ಗ್ರಾಹಕರಿಗೆ, ದೊಡ್ಡ ಪ್ರಮಾಣದ ಚಿಲ್ಲರೆ ಆಹಾರ ವ್ಯಾಪಾರಿಗಳು, ರೆಸ್ಟೋರೆಂಟ್ಗಳು, ಕ್ಲೌಡ್ ಕಿಚನ್ಗಳು, ಕೆಫೆಗಳು ಮತ್ತು ಭಾರತದಲ್ಲಿ ಲಾಂಜ್ಗಳು ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆಗಳಿಗೆ ನಿತ್ಯವೂ 40,000 ಕೆಜಿಯಷ್ಟು ಸಿದ್ಧ ಆಹಾರೋತ್ಪನ್ನಗಳನ್ನು ಪೂರೈಸುವ ಸಾಮರ್ಥ್ಯವನ್ನು ಹೊಂದಿದೆ..

ಏಷ್ಯಾದಲ್ಲಿ ಸ್ಯಾಟ್ಸ್ಆಹಾರ ಉತ್ಪಾದನಾ ಜಾಲಕ್ಕೆ ಈ ಸೌಲಭ್ಯವನ್ನು ತೆರೆದಿರುವುದು ಒಂದು ಪ್ರಮುಖ ಮೈಲಿಗಲ್ಲು ಎಂದು ಸ್ಯಾಟ್ಸ್ಆಹಾರ ಪರಿಹಾರಗಳ ಸಿಇಒ ಸ್ಟಾನ್ಲಿ ಗೋಹ್ ಹೇಳಿದ್ದಾರೆ. ವಿಶ್ವ-ದರ್ಜೆಯ ಏರ್ ಲೈನ್ಸ್ ಮತ್ತು ವಾಣಿಜ್ಯ ಮತ್ತು ಸಾರ್ವಜನಿಕ ಸಂಸ್ಥೆಗಳಿಗೆ ಏಷ್ಯಾದ ಪ್ರಮುಖ ಕ್ಯಾಟರರ್ಸ್ ನಾವು. ನಮ್ಮ ಗ್ರಾಹಕರು ವಿಮಾನದಲ್ಲಿಯಾಗಲಿ ನೆಲದ ಮೇಲಾಗಲಿ ಸ್ಯಾಟ್ಸ್ಮತ್ತು ಸಿಂಗಾಪುರದ ನಮ್ಮ ಕೇಂದ್ರ, ಅಡಿಗೆಮನೆಗಳುಅಸಲಿ ರುಚಿ, ಉನ್ನತ-ಗುಣಮಟ್ಟದ ಆಹಾರ ಪರಿಹಾರಗಳನ್ನು ನೀಡುತ್ತವೆ ಎಂದು ನಂಬಿದ್ದಾರೆ. ವಾಣಿಜ್ಯ ಚಾನೆಲ್ಗಳು ಮತ್ತು ಗ್ರಾಹಕರ ಒಳನೋಟಗಳ ಆಧಾರದ ಮೇಲೆಹೇಳುವುದಾದರೆಕಳೆದ ಐದು ದಶಕಗಳಲ್ಲಿ:ಮೌಲ್ಯವರ್ಧಿತ ಸಂಸ್ಕರಣೆ, ಉತ್ಪಾದನೆ, ವಾಣಿಜ್ಯೀಕರಣ ಮತ್ತು ವಿತರಣೆಯವರೆಗೆ ಸಂಪೂರ್ಣ ಆಹಾರ ಮೌಲ್ಯ ಸರಪಳಿ... ಇವುಗಳಲ್ಲಿ ನಮ್ಮ ಸಾಮರ್ಥ್ಯಗಳ ಶ್ರೇಣಿಯು ಬೆಳೆದಿದೆ.

**ರೋಹಿತ್ ಕಪೂರ್, ಸಿಇಒ, ಫುಡ್ ಮಾರ್ಕೆಟ್ ಪ್ಲೇಸ್, ಸ್ವಿಗ್ಗಿ:** ಭಾರತದಲ್ಲಿ ದೊಡ್ಡ ಪ್ರಮಾಣದ ಆಹಾರ ಉತ್ಪಾದನೆಯಲ್ಲಿ ಅಗ್ರಪಂಕ್ತಿಯಲ್ಲಿರುವ ಎಸ್ಎಫ್ಎಸ್ಐ,ಉತ್ತಮ ಭವಿಷ್ಯವನ್ನು ಹೊಂದಿದೆ ಎಂದು ನಾವು ನಂಬುತ್ತೇವೆ. ಅವರ ಪಾಕಶಾಲೆಯ ಪರಿಣತಿ ಮತ್ತು ಆಹಾರ ತಂತ್ರಜ್ಞಾನ ಆಹಾರ ಸುರಕ್ಷತೆ, ನೋಟ, ಪೋಷಣೆ ಮತ್ತು ರುಚಿ ಮತ್ತು ಗ್ರಾಹಕರಿಗೆ ಉತ್ತಮ ಮೌಲ್ಯವನ್ನು ತಲುಪಿಸಬೇಕೆನ್ನುವತುಡಿತ ನಮ್ಮ ಬದ್ಧತೆಯೊಂದಿಗೆ ಹೊಂದುತ್ತದೆ. ನಾವು ಒಟ್ಟಿಗೆ ಸಹಕಾರದೊಂದಿಗೆ ಕೆಲಸ ಮಾಡುವ ಮಾರ್ಗಗಳನ್ನು ಅನ್ವೇಷಿಸಲು ಎದುರು ನೋಡುತ್ತಿದ್ದೇವೆ ಎಂದರು.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ನೆಮ್ಮದಿ ಇರುವುದಿಲ್ಲ, ವೈದ್ಯ ವೃತ್ತಿಯವರಿಗೆ ಲಾಭ, ವ್ಯಾಸಂಗದಲ್ಲಿ ಹಿನ್ನಡೆ

**ವೃಷಭ:** ಪರರ ಮಾತಿಗೆ ಕಿವಿ ಕೊಡಬೇಡಿ, ಗೆಳೆಯರಿಂದ ಸಹಾಯ, ಸಾಲಭಾದೆ

**ಮಿಥುನ:** ವೈಯಕ್ತಿಕ ಕೆಲಸದಲ್ಲಿ ನಿಗಾವಹಿಸಿ, ವಿವಾಹ ಯೋಗ, ಮನೆಯಲ್ಲಿ ಸಂತಸದ ವಾತಾವರಣ

**ಕಟಕ:** ಯತ್ನ ಕಾರ್ಯಗಳಲ್ಲಿ ಜಯ, ಆಕಸ್ಮಿಕ ಖರ್ಚು, ದಾಯಾದಿ ಕಲಹ

**ಸಿಂಹ:** ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ, ಮನಶಾಂತಿ, ಎಷ್ಟೇ ಹಣ ಬಂದರೂ ಉಳಿಯುವುದಿಲ್ಲ

**ಕನ್ಯಾ:** ಸಕಾಲದಲ್ಲಿ ಹಣ ಒದಗಿಬರುವುದು, ವ್ಯಾಪಾರದಲ್ಲಿ ಉತ್ತಮ ವಹಿವಾಟು, ಸಮಸ್ಯೆಗಳನ್ನು ಶಾಂತಿಯಿಂದ ಪರಿಹರಿಸಿಕೊಳ್ಳಿ

**ತುಲಾ:** ಅಮೂಲ್ಯ ವಸ್ತುಗಳನ್ನು ಕಳೆದುಕೊಳ್ಳುವಿರಿ, ಇತರರ ಭಾವನೆಗೆ ಸ್ಪಂದಿಸುವಿರಿ, ಸ್ತ್ರೀಯರು ತಾಳ್ಮೆಯಿಂದಿರಿ

**ವೃಶ್ಚಿಕ:** ಉದ್ಯೋಗದಲ್ಲಿ ಕಿರಿಕಿರಿ, ಚಂಚಲ ಮನಸ್ಸು, ಹಿತಶತ್ರು ಕಾಟ

**ಧನಸ್ಸು:** ಮಿತ್ರರಿಂದ ಸಹಾಯ, ಕಾರ್ಯಸಾಧನೆ, ಅಧಿಕಾರ ಪ್ರಾಪ್ತಿ

**ಮಕರ:** ಅಲ್ಪ ಆದಾಯ, ವಸ್ತ್ರ ವ್ಯಾಪಾರಿಗಳಿಗೆ ಲಾಭ, ಮನಶಾಂತಿ

**ಕುಂಭ:** ಆತ್ಮೀಯರಿಂದ ಸಹಾಯ, ಸ್ಥಿರಾಸ್ತಿ ಖರೀದಿ, ಪ್ರಿಯ ಜನರ ಭೇಟಿ

**ಮೀನ:** ಮಾನಸಿಕ ಒತ್ತಡ, ಎಲ್ಲರ ಪ್ರೀತಿ ವಿಶ್ವಾಸಗಳಿಸುವಿರಿ, ಮಂಗಳ ಕಾರ್ಯಗಳಲ್ಲಿ ಭಾಗಿ

# ಕ್ಯಾಂಪ್ ಫೈರ್ ಗರ್ಲ್ಸ್ ಡೇ



ಕ್ಯಾಂಪ್ ಫೈರ್ ಗರ್ಲ್ಸ್ ಡೇ ಅನ್ನು ಪ್ರತಿ ವರ್ಷ ಮಾರ್ಚ್ 17 ರಂದು ಆಚರಿಸಲಾಗುತ್ತದೆ. ಇದು ಯುವಕರ ಅಭಿವೃದ್ಧಿ ಸಂಸ್ಥೆಯಾದ ಕ್ಯಾಂಪ್ ಫೈರ್ನ ಕೆಲಸವನ್ನು ಆಚರಿಸುತ್ತದೆ. ಈ ಗುಂಪನ್ನು ಆರಂಭದಲ್ಲಿ ಕ್ಯಾಂಪ್ ಫೈರ್ ಗರ್ಲ್ಸ್ ಆಫ್ ಅಮೇರಿಕಾ ಎಂದು ಕರೆಯಲಾಗುತ್ತಿತ್ತು ಮತ್ತು 1975 ರಲ್ಲಿ ಅದರ ಹೆಸರನ್ನು ಕ್ಯಾಂಪ್ ಫೈರ್ ಬಾಯ್ಸ್ ಮತ್ತು ಗರ್ಲ್ಸ್ ಎಂದು ಬದಲಾಯಿಸಲಾಯಿತು, ನಂತರ ಹುಡುಗರು ಸಹ ಸೇರಲು ಅವಕಾಶ ನೀಡಿದರು. 2001 ರಲ್ಲಿ, ಹೆಸರನ್ನು ಮತ್ತೊಮ್ಮೆ ಕ್ಯಾಂಪ್ ಫೈರ್ ಗ.ಖ.ಂ ಎಂದು ಬದಲಾಯಿಸಲಾಯಿತು ಮತ್ತು ಅಂತಿಮವಾಗಿ, 2012 ರಲ್ಲಿ ಸಂಸ್ಥೆಯನ್ನು ಕ್ಯಾಂಪ್ ಫೈರ್ ಎಂದು ಮರುನಾಮಕರಣ ಮಾಡಲಾಯಿತು. ಸಂಸ್ಥೆಯ ಸ್ಥಾಪನೆ ಮತ್ತು ಅವರು ಮಾಡುವ ಎಲ್ಲಾ ಅದ್ಭುತ ಕಾರ್ಯಗಳನ್ನು ಗುರುತಿಸಲು ಕ್ಯಾಂಪ್ ಫೈರ್ ಗರ್ಲ್ಸ್ ಡೇ ಅನ್ನು ಆಚರಿಸಲಾಗುತ್ತದೆ. ಬಾಯ್ ಸ್ಕೌಟ್ಸ್ ಸ್ವಲ್ಪ ಸಮಯದವರೆಗೆ ಇತ್ತು, ಮತ್ತು ಯುವತಿಯರು ಇದೇ ರೀತಿಯ ಸಂಘಟನೆಯನ್ನು ಹೊಂದಿರಲಿಲ್ಲ, ಅದು ಅವರ ಆಸಕ್ತಿಗಳನ್ನು ಮುಂದುವರಿಸಲು ಅವಕಾಶ ಮಾಡಿಕೊಟ್ಟಿತು. ವಿಲಿಯಂ ಚೌನ್ಸಿ ಲ್ಯಾಂಗ್ಡನ್ ಅವರು ಶ್ರೀಮತಿ ಚಾರ್ಲ್ಸ್ ಫಾರ್ನ್ಸ್ವರ್ತ್ ಮತ್ತು ಶ್ರೀ ಮತ್ತು ಶ್ರೀಮತಿ ಲೂಥರ್ ಗುಲಿಕ್ ಅವರೊಂದಿಗೆ ಹುಡುಗಿಯರಿಗಾಗಿ ರಾಷ್ಟ್ರೀಯ ಸಂಸ್ಥೆಯನ್ನು ರಚಿಸಿದರು. ಲ್ಯಾಂಗ್ಡನ್ ಈ ಹುಡುಗಿಯರ ಗುಂಪಿಗೆ ಕ್ಯಾಂಪ್ ಫೈರ್ ಗರ್ಲ್ಸ್ ಎಂದು ಹೆಸರಿಟ್ಟರು. 1912 ರಲ್ಲಿ, ಕ್ಯಾಂಪ್ ಫೈರ್ ಗರ್ಲ್ಸ್ ಔಪಚಾರಿಕವಾಗಿ ಸಂಘಟಿತ ಗುಂಪಾಯಿತು ಮತ್ತು ಕ್ಯಾಂಪ್ ಫೈರ್ ಗರ್ಲ್ಸ್ ಆಫ್ ಅಮೇರಿಕಾವನ್ನು ಸಂಯೋಜಿಸಲಾಯಿತು.

ಈ ಗುಂಪನ್ನು ಅಮೆರಿಕದ ಬಾಯ್ ಸ್ಕೌಟ್ಸ್ನ ಸಹೋದರಿ ಸಂಸ್ಥೆಯಾಗಿ ನೋಡಲಾಯಿತು. 1913 ರ ಅಂತ್ಯದ ವೇಳೆಗೆ, ಕ್ಯಾಂಪ್ ಫೈರ್ 60,000 ಸದಸ್ಯರನ್ನು ಹೊಂದಿತ್ತು! ಅವರ ಮೊದಲ ಕೈಪಿಡಿಯನ್ನು 1914 ರಲ್ಲಿ ಪ್ರಕಟಿಸಲಾಯಿತು. ಮೊದಲ ವಿಶ್ವ ಯುದ್ಧದ ಸಮಯದಲ್ಲಿ, ಅವರು ಲಿಬರ್ಟಿ ಬಾಂಡ್ಗಳನ್ನು ಮಾರಾಟ ಮಾಡಿದರು, ಆಹಾರವನ್ನು ಸಂರಕ್ಷಿಸಿದರು ಮತ್ತು ಫ್ರೆಂಚ್ ಮತ್ತು ಬೆಲ್ಜಿಯನ್ ಅನಾಥರನ್ನು ಬೆಂಬಲಿಸಿದರು. ಗುಂಪಿನ 50 ನೇ ವಾರ್ಷಿಕೋತ್ಸವವನ್ನು ಎರಡು ಮಿಲಿಯನ್ ಮರಗಳನ್ನು ನೆಡುವ ಮತ್ತು 13,000 ಪಕ್ಷಿಧಾಮಗಳನ್ನು ನಿರ್ಮಿಸುವ ಯೋಜನೆಯೊಂದಿಗೆ ಆಚರಿಸಲಾಯಿತು. 1974 ರ ಹೊತ್ತಿಗೆ, ಅವರ ಸದಸ್ಯತ್ವವು 274,000 ಆಗಿತ್ತು, ಮತ್ತು 1975 ರಲ್ಲಿ ಅವರು ಹುಡುಗರನ್ನು ಸೇರಲು ಅನುಮತಿಸಿದರು. ಶಿಬಿರವನ್ನು ಆಗ ಕ್ಯಾಂಪ್ ಫೈರ್ ಹುಡುಗರು ಮತ್ತು ಹುಡುಗಿಯರು ಎಂದು ಕರೆಯಲಾಗುತ್ತಿತ್ತು.ಕ್ಯಾಂಪ್ ಫೈರ್ ಮುಖ್ಯವಾಗಿ ನಾಯಕತ್ವದ ಅಭಿವೃದ್ಧಿ, ಕ್ಯಾಂಪಿಂಗ್ ಮತ್ತು ಪರಿಸರ ಶಿಕ್ಷಣ, ಮಕ್ಕಳ ಆರೈಕೆ ಕಲಿಕೆ ಮತ್ತು ಸೇವಾ ಕಲಿಕೆಯ ಮೇಲೆ ಕೇಂದ್ರೀಕೃತವಾಗಿರುವ ಕಾರ್ಯಕ್ರಮಗಳನ್ನು ಹೊಂದಿದೆ. ಸಮುದಾಯದ ಅಗತ್ಯಗಳಿಗೆ ನಿರ್ದಿಷ್ಟವಾದ ಕಾರ್ಯಕ್ರಮಗಳೂ ಇವೆ. ಕ್ಯಾಂಪಿಂಗ್ ಬಹಳ ಹಿಂದಿನಿಂದಲೂ ಕ್ಯಾಂಪ್ ಫೈರ್ನ ದೊಡ್ಡ ಭಾಗವಾಗಿದೆ ಮತ್ತು ಈಗ ದೇಶಾದ್ಯಂತ 130 ಶಿಬಿರಗಳಿವೆ. ಸದಸ್ಯರು ವಿವಿಧ ವಯೋಮಾನದ ಹಂತಗಳಲ್ಲಿ ಕೆಲಸ ಮಾಡುತ್ತಾರೆ.

ಸಂಜೆ ಮುಗಿಲು
ಭಾನುವಾರ
17.3.2024



# ಚೀನಾದ ಚಂದ್ರಯಾನ ಯೋಜನೆಗೆ ಹಿನ್ನಡೆ



**ಬೀಜಿಂಗ್:** ಚಂದ್ರನ ಅಧ್ಯಯನಕ್ಕಾಗಿ ಚೀನ ಉಡಾವಣೆ ಮಾಡಿದ್ದ ರಾಕೆಟ್ ತಾಂತ್ರಿಕ ತೊಂದರೆಯಿಂದ ಶುಕ್ರವಾರ ವಿಫಲಗೊಂಡಿದೆ. ಹೀಗಾಗಿ ಚಂದ್ರನ ಕಕ್ಷಗೆ ಒಂದೇ ಬಾರಿ 2 ಉಪಗ್ರಹಗಳನ್ನು ತಲುಪಿಸುವ ಚೀನದ ಮಹತ್ವಾಕಾಂಕ್ಷಿ ಯೋಜನೆಯೊಂದು ವಿಫಲಗೊಂಡಿದೆ.ಚಂದ್ರನ ಅಧ್ಯಯನಕ್ಕಾಗಿ 2 ಉಪಗ್ರಹ ಗಳನ್ನು ಹೊತ್ತ ಚೀನದ ರಾಕೆಟ್ ಬುಧವಾರ ಸಾಯಂಕಾಲ ಉಡಾವಣೆಗೊಂಡಿತ್ತು. ರಾಕೆಟ್ನ ಮೊದಲ 2 ಹಂತಗಳು ಸರಿಯಾಗಿ ಕಾರ್ಯನಿರ್ವಹಿಸಿದರೂ ಸಹ 3ನೇ ಹಂತದಲ್ಲಿ ತಾಂತ್ರಿಕ ಸಮಸ್ಯೆ ಕಾಣಿಸಿಕೊಂಡ ಕಾರಣ ಉಪಗ್ರಹಗಳು ಕಕ್ಷೆಗೆ ತಲುಪುವಲ್ಲಿ ವಿಫಲಗೊಂಡವು ಎಂದು ಚೀನದ ಬಾಹ್ಯಾಕಾಶ ಸಂಸ್ಥೆ ಹೇಳಿದೆ. ಚಂದ್ರ ಹಾಗೂ ಭೂಮಿ ನಡುವೆ ನ್ಯಾವಿಗೇಶನ್ ವ್ಯವಸ್ಥೆ ತರುವುದಕ್ಕಾಗಿ ಈ ಉಪಗ್ರಹವನ್ನು ಉಡಾವಣೆ ಮಾಡಲಾಗಿತ್ತು ಎಂದು ಸಂಸ್ಥೆ ತಿಳಿಸಿದೆ.

# ಗಾಯಕಿ ಅನುರಾಧಾ ಪೌಡ್ವಾಲ್ ಬಿಜೆಪಿಗೆ ಸೇರ್ಪಡೆ

**ದೆಹಲಿ:** ಖ್ಯಾತ ಗಾಯಕಿ ಅನುರಾಧಾ ಪೌಡ್ವಾಲ್ ಇಂದು ಬಿಜೆಪಿಗೆ ಸೇರ್ಪಡೆಯಾಗಿದ್ದಾರೆ.

ಬಿಜೆಪಿ ಸಂಸದ ಅನಿಲ್ ಬಲೂನಿ ಮತ್ತು ಇತರ ನಾಯಕರು ಹೂಗುಚ್ಛ ಮತ್ತು ಪ್ರಾಥಮಿಕ ಸದಸ್ಯತ್ವದ ಪ್ರಮಾಣಪತ್ರದೊಂದಿಗೆ ಅವರನ್ನು ಪಕ್ಷಕ್ಕೆ ಸ್ವಾಗತಿಸಿದರು. ವರದಿಗಳ ಪ್ರಕಾರ, ಅನುರಾಧಾ ಪೌಡ್ವಾಲ್ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ನಲ್ಲಿ ಸ್ಪರ್ಧಿಸಬಹುದು ಎನ್ನಲಾಗುತ್ತಿದೆ.

ಬಿಜೆಪಿ ಪಕ್ಷದ ಸ್ಟಾರ್ ಚುನಾವಣಾ ಪ್ರಚಾರಕ್ಕೂ ಅನುರಾಧಾ ಬರಬಹುದು ಎಂದು ನಿರೀಕ್ಷಿಸಲಾಗಿದೆ. ಹಿಂದಿ ಚಿತ್ರರಂಗದ ಪ್ರಸಿದ್ಧ ಗಾಯಕಿಯೂ ಆಗಿರುವ ಅನುರಾಧಾ ಪೌಡ್ವಾಲ್ ,ಭಕ್ತಿಗೀತೆ, ಭಜನಾ ಗಾಯನ ಲೋಕದಲ್ಲಿ ತಮ್ಮದೇ ಛಾಪು ಮೂಡಿಸಿದ್ದಾರೆ. ಲೋಕಸಭೆ ಚುನಾವಣೆ ದಿನಾಂಕ ಘೋಷಣೆಯಾಗುವ ಮುನ್ನವೇ ಅನುರಾಧಾ ಪೌಡ್ವಾಲ್ ಬಿಜೆಪಿ ಸೇರಿರುವುದರಿಂದ ಪಕ್ಷವು ಚುನಾವಣೆಯ ದೊಡ್ಡ ಜವಾಬ್ದಾರಿಯನ್ನು ನೀಡಬಹುದು ಎಂದು ತಜ್ಞರು ಹೇಳುತ್ತಾರೆ.




# ಕೆನಡಾದಲಿ ಬೆಂಕಿ ತಗುಲಿ ಭಾರತೀಯ ನಿವಾಸಿಗಳ ಸಾವು

**ಕೆನಡಾ:** ಕೆನಡಾದಲ್ಲಿ ಬೆಂಕಿ ತಗುಲಿ ಭಾರತೀಯರಾದ ಪತಿ ಪತ್ನಿ ಮತ್ತು ಮಗಳು ಸಾವನ್ನಪ್ಪಿದ್ದಾರೆ. ಕೆನಡಾದ ಒಂಟಾರಿಯೋ ಎಂಬಲ್ಲಿ, ಈ ಘಟನೆ ನಡೆದಿದ್ದು, ಮಾರ್ಚ್ 7ರಂದು ಸಾವನ್ನಪ್ಪಿದ್ದಾರೆ. ಇನ್ನು ಸ್ಥಳೀಯ ಪೊಲೀಸರ ತನಿಖೆಯ ಪ್ರಕಾರ, ಇದು ಆತಸ್ಮಿಕವಾಗಿ ಹೊತ್ತಿಕೊಂಡ ಬೆಂಕಿಯಲ್ಲದೇ, ಯಾರೋ, ಬೆಂಕಿ ಹಚ್ಚಿರುವ ಕಾರಣದಿಂದ ನಡೆದಿರುವ ದುರಂತ ಎನ್ನಲಾಗಿದೆ. ರಾಜೀವ್ ವಾರಿಕೂ(51), ಶಿಲ್ಪಾ ಕೋಥಾ(47), ಮಾಹೆಕ್ ವಾರಿಕೋ(16) ಸಾವಿಗೀಡಾಗಿದ್ದಾರೆ.ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಮೊದಲು ಇದು ಸಹಜ ಸಾವು, ಬೆಂಕಿ ತಗುಲಿ ಸಾವನ್ನಪ್ಪಿದ್ದಾರೆಂದು ವರದಿಯಾಗಿತ್ತು. ಆದರೆ ಹೆಚ್ಚಿನ ತನಿಖೆ ನಡೆಸಿದ ಬಳಿಕ, ಇದು ಆಕಸ್ಮಿಕವಾಗಿ ಬೆಂಕಿ ತಗುಲಿ ಸಾವನ್ನಪ್ಪಿದ್ದಲ್ಲ. ಬದಲಾಗಿ, ಇವರನ್ನು ಯಾರೋ ಬೆಂಕಿ ಇಟ್ಟು ಕೊಂದಿದ್ದಾರೆನ್ನಲಾಗಿದೆ.ಆದರೆ ನೆರೆಮನೆಯವರು ಹೇಳುವ ಪ್ರಕಾರ, ನಾವೆಲ್ಲ ಮನೆಯಲ್ಲೇ ಇದ್ದೆವು. ನಮಗೆ ದೊಡ್ಡ ಶಬ್ದವೊಂದು ಕೇಳಿ ಬಂತು. ಹಾಗಾಗಿ ನಾವು ಹೊರಬಂದು ಕಂಡಾಗ, ಮನೆಗೆ ಬೆಂಕಿ ಹೊತ್ತಿಕೊಂಡಿತ್ತು. ಬೆಂಕಿ ನಂದಿಸಲು ನಾವು ಪ್ರಯತ್ನಿಸಿದೆವು. ಆದರೆ ಅದು ಸಾಧ್ಯವಾಗಲಿಲ್ಲ. ಅಗ್ನಿ ಶಾಮಕ ದಳದವರು ಬರುವಷ್ಟರಲ್ಲಿ, ಮೂವರ ಸ್ಥಿತಿ ಗಂಭೀರವಾಗಿತ್ತು ಎಂದಿದ್ದಾರೆ. ಇನ್ನು ಸ್ಥಳೀಯ ಪೊಲೀಸರು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.



# ರಷ್ಯಾ ಕ್ಷಿಪಣಿ ದಾಳಿಗೆ ಉಕ್ರೇನ್‌ನಲ್ಲಿ 20 ಮಂದಿ ನಾಗರಿಕರು ಸಾವು!



**ಒಡೆಸಾ:** ಉಕ್ರೇನ್ ನ ಒಡೆಸಾ ನಗರದ ಮೇಲೆ ರಷ್ಯಾದ ಕ್ಷಿಪಣಿ ದಾಳಿಯಲ್ಲಿ ಕನಿಷ್ಠ 20 ಮಂದಿ ಮೃತಪಟ್ಟಿದ್ದಾರೆ ಎಂದು ಸಿಎನ್ ಎನ್ ವರದಿ ಮಾಡಿದೆ.

ಈ ದಾಳಿಯಲ್ಲಿ ಇನ್ನೂ ಹಲವಾರು ಜನರು ಗಾಯಗೊಂಡಿದ್ದಾರೆ, ಇದು ರಷ್ಯಾದ ಪೂರ್ಣ ಪ್ರಮಾಣದ ಆಕ್ರಮಣ ಪ್ರಾರಂಭವಾದ ನಂತರ ಕಪ್ಪು ಸಮುದ್ರದ ಬಂದರು ನಗರದ ಮೇಲೆ ನಡೆದ ಭೀಕರ ದಾಳಿಯಾಗಿದೆ ಎಂದು ಸಿಎನ್‌ಎನ್ ವರದಿ ಮಾಡಿದೆ.

ಶುಕ್ರವಾರ ಮುಂಜಾನೆ ನಾಗರಿಕ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡ ರಷ್ಯಾದ ಕ್ಷಿಪಣಿ ಒಡೆಸಾ ಮೇಲೆ ದಾಳಿ ನಡೆಸಿದೆ . ಆರಂಭಿಕ ದಾಳಿಯು ಭಾರಿ ಹತ್ಯಾಕಾಂಡಕ್ಕೆ ಕಾರಣವಾಯಿತು, ಮುಗ್ಧ ನಾಗರಿಕರ ಪ್ರಾಣವನ್ನು ಬಲಿ ತೆಗೆದುಕೊಂಡಿತು ಮತ್ತು ಅನೇಕರನ್ನು ಗಾಯಗೊಳಿಸಿತು.

ಸಿಎನ್‌ಎನ್ ವರದಿಯ ಪ್ರಕಾರ, ಸಂತ್ರಸ್ತರಿಗೆ ಸಹಾಯ ಮಾಡಲು ಧಾವಿಸಿದ ತುರ್ತು ಸೇವಾ ಸಿಬ್ಬಂದಿ ಎರಡನೇ ದಾಳಿಯಲ್ಲಿ ಸಿಕ್ಕಿಬಿದ್ದರು ಈ ತಂತ್ರವನ್ನು ''ಡಬಲ್ ಟ್ಯಾಪ್'' ಎಂದು ಕರೆಯಲಾಗುತ್ತದೆ, ಇದು ಉಕ್ರೇನ್ನಲ್ಲಿ ನಡೆಯುತ್ತಿರುವ ಸಂಘರ್ಷದಲ್ಲಿ ರಷ್ಯಾದ ತಂತ್ರಗಳ ಕ್ರೂರ ಲಕ್ಷಣವಾಗಿದೆ ಎಂದು ಹೇಳಿದೆ.

# ಮಾಲ್ಡೀವ್ಸ್‌ನಿಂದ ಮರಳಿದ ಭಾರತೀಯ ಸೇನಾ ಸಿಬ್ಬಂದಿಗಳ ಮೊದಲ ತಂಡ

**ಹೊಸದಿಲ್ಲಿ:** ಮಾಲ್ಡೀವ್ಸ್ ನಲ್ಲಿ ಅಡ್ವಾನ್ಸ್ಡ್ ಲೈಟ್ ಹೆಲಿಕಾಪ್ಟರನ್ನು ಕಾರ್ಯಾಚರಿಸುತ್ತಿದ್ದ ಭಾರತೀಯ ಸೇನಾ ಸಿಬ್ಬಂದಿಗಳ ಮೊದಲ ತಂಡವು ಭಾರತಕ್ಕೆ ಮರಳಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯವು ತಿಳಿಸಿದೆ. ಮಿಲಿಟರಿ ತಂಡದ ಬದಲು ಅಲ್ಲಿ ನಾಗರಿಕ ತಾಂತ್ರಿಕ ತಜ್ಞರನ್ನು ನಿಯೋಜಿಸಲಾಗಿದೆ.

ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು ಶುಕ್ರವಾರ ತನ್ನ ಸಾಪ್ತಾಹಿಕ ಸುದ್ದಿಗೋಷ್ಠಿಯಲ್ಲಿ ಈ ವಿಷಯವನ್ನು ಪ್ರಕಟಿಸಿದರು.

ಮಾಲ್ಡೀವ್ಸ್ ಅಧ್ಯಕ್ಷ ಮುಹಮ್ಮದ್ ಮುಯಿಝ್ಝು ಅವರು ತನ್ನ ದೇಶದಿಂದ ಭಾರತೀಯ ಸೇನಾ ಸಿಬ್ಬಂದಿಗಳ ಮೊದಲ ತಂಡವನ್ನು ವಾಪಸ್ ಕರೆಸಿಕೊಳ್ಳಲು ಮಾ.10ರ ಗಡುವನ್ನು ವಿಧಿಸಿದ್ದರು.

ನವಂಬರ್ ನಲ್ಲಿ ಮುಯಿಝ್ಝು ಅಧಿಕಾರಕ್ಕೆ ಬಂದ ಬಳಿಕ ಭಾರತ ಮತ್ತು ಮಾಲ್ಡೀವ್ಸ್ ನಡುವಿನ ಸಂಬಂಧಗಳು ಸ್ವಲ್ಪ ಹಳಿತಪ್ಪಿವೆ.

ಚೀನಾ ಪರ ನಾಯಕರಾಗಿ ವ್ಯಾಪಕವಾಗಿ ಪರಿಗಣಿಸಲಾಗಿರುವ ಮುಯಿಝ್ಝು ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬಳಿಕ ತನ್ನ ದೇಶದಿಂದ ಭಾರತೀಯ ಸೇನಾ ಸಿಬ್ಬಂದಿಗಳನ್ನು ತೆರವುಗೊಳಿಸುವ ತನ್ನ ಚುನಾವಣಾ ಭರವಸೆಯನ್ನು ಉಳಿಸಿಕೊಳ್ಳುವುದಾಗಿ ಹೇಳಿದ್ದರು.



# ಸಿಎಂ ಅರವಿಂದ್ ಕೇಜ್ರಿವಾಲ್‌ಗೆ ಜಾಮೀನು ಮಂಜೂರು

**ನವದೆಹಲಿ:** ಅರವಿಂದ್ ಕೇಜ್ರಿವಾಲ್ ಅವರಿಗೆ ದೆಹಲಿಯ ರೂಸ್ ಅವೆನ್ಯೂ ನ್ಯಾಯಾಲಯ ಇಂದು (ಮಾ.16) ಜಾಮೀನು ಮಂಜೂರು ಮಾಡಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅರವಿಂದ್ ಕೇಜ್ರಿವಾಲ್ ಅವರಿಗೆ ಇಡಿ 11 ಬಾರಿ ಸಮನ್ಸ್ ನೀಡಿತ್ತು. ಆದರೆ ಯಾವುದಕ್ಕೂ ಉತ್ತರ ನೀಡದ ಕೇಜ್ರಿವಾಲ್ ವಿರುದ್ಧ ಇಡಿ ರೂಸ್ ಅವೆನ್ಯೂ ನ್ಯಾಯಾಲಯದ ಮೊರೆ ಹೋಗಿತ್ತು. ಹಾಗಾಗಿ ಕೋರ್ಟ್ ಕೇಜ್ರಿವಾಲ್ ಅವರಿಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೋರ್ಟ್ ಹಾಜರಾಗುವಂತೆ ಆದೇಶ ನೀಡತ್ತು. ಈ ಹಿನ್ನಲೆಯಲ್ಲಿ ಕೇಜ್ರಿವಾಲ್ ಇಂದು ಕೋರ್ಟ್ಗೆ ಹಾಜರಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಕೋರ್ಟ್ ಅವರಿಗೆ ವಿಚಾರಣೆ ನಡೆಸಿ ಜಾಮೀನು ನೀಡಿದೆ. ಇಂದು ವಿಚಾರಣೆ ವೇಳೆ ಅರವಿಂದ್ ಕೇಜ್ರಿವಾಲ್ ನ್ಯಾಯಾಧೀಶರ ಮುಂದೆ ಹಾಜರಾಗುತ್ತಿದ್ದಂತೆ ಅವರ ಅನುಪಸ್ಥಿತಿಯಲ್ಲಿ ವಿಚಾರಣೆ ನಡೆಸಲು ಅನುಮತಿ ನೀಡಬೇಕು ಎಂದು ಮನವಿ ಮಾಡಿದರು. ಇದಕ್ಕೆ ಕೋರ್ಟ್ ಒಪ್ಪಿತು. ಬಳಿಕ ಕೇಜ್ರಿವಾಲ್ ಕೋರ್ಟ್ನಿಂದ ಹೊರ ಬಂದರು. ಇನ್ನು ಕೇಜ್ರಿವಾಲ್ ವಿಚಾರಣೆ ಹಿನ್ನೆಲೆ ಕೋರ್ಟ್ ಮುಂದೆ ಭಾರಿ ಭದ್ರತೆ ಒದಗಿಸಲಾಗಿತ್ತು. ದೆಹಲಿ ಮದ್ಯದ ಅಬಕಾರಿ ನೀತಿಯಲ್ಲಿ ಅಕ್ರಮ ಹಣ ವರ್ಗಾವಣೆ ನಡೆಸಿದ್ದಾರೆ ಎಂದು ಸಮನ್ಸ್ ನೀಡಲಾಗಿತ್ತು. ಈ ಸಮನ್ಸ್ಗೆ ಕೇಜ್ರಿವಾಲ್ ಅವರು ಅವಿಧೇಯರಾಗಿದ್ದರು. ಈ ಕಾರಣಕ್ಕೆ ಅವರ ವಿರುದ್ಧ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಎರಡು ದೂರುಗಳನ್ನು ಸಲ್ಲಿಸಲಾಗಿತ್ತು.



# ನಾನು ಅಮೆರಿಕ ಅಧ್ಯಕ್ಷನಾಗಿ ಆಯ್ಕೆಯಾಗದಿದ್ದರೆ ದೇಶದಲ್ಲಿ ರಕ್ತಪಾತವಾಗುತ್ತೆ: ಟ್ರಂಪ್

**ವಾಷಿಂಗ್ಟನ್:** ಈ ಬಾರಿ ಅಧ್ಯಕ್ಷೀಯ ಚುನಾವಣೆಯಲ್ಲಿ ನಾನು ಆಯ್ಕೆಯಾಗದಿದ್ದರೆ ದೇಶದಲ್ಲಿ ರಕ್ತಪಾತವಾಗುತ್ತದೆ ಎಂದು ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ.

ಓಹಿಯೋದ ಡೇಟನ್ ಬಳಿ ರ‍್ಯಾಲಿಯಲ್ಲಿ ಮಾತನಾಡಿದ ಟ್ರಂಪ್, ಈ ಬಾರಿ ನಾನು ಚುನಾಯಿತನಾಗದಿದ್ದರೆ ರಕ್ತಪಾತವಾಗುತ್ತದೆ ಎಂದು ಮಾತನಾಡಿದ್ದಾರೆ. ತಾನು ಮರು ಆಯ್ಕೆಯಾದರೆ ಚೀನಾವು ಅಮೆರಿಕಕ್ಕೆ ಯಾವುದೇ ವಾಹನಗಳನ್ನು ಮಾರಾಟ ಮಾಡಲು ಸಾಧ್ಯವಾಗುವುದಿಲ್ಲ ಎಂದು ಟ್ರಂಪ್ ಹೇಳಿದ್ದಾರೆ.

ಚುನಾವಣೆ ಹಿನ್ನೆಲೆಯಲ್ಲಿ ಅಮೆರಿಕ ಅಧ್ಯಕ್ಷ ಜೋ ಬೈಡೆನ್ ವಿರುದ್ಧ ಟ್ರಂಪ್ ವಾಗ್ದಾಳಿ ನಡೆಸುತ್ತಿದ್ದಾರೆ. ಬೈಡೆನ್ ಆಡಳಿತದ ಬಗ್ಗೆ ಟೀಕಾಪ್ರಹಾರ ನಡೆಸುತ್ತಿದ್ದಾರೆ. ಯುಎಸ್ ಅಧ್ಯಕ್ಷ ಜೋ ಬೈಡೆನ್ ಮತ್ತು ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕ್ರಮವಾಗಿ ಡೆಮಾಕ್ರಟಿಕ್ ಮತ್ತು ರಿಪಬ್ಲಿಕನ್ ಅಧ್ಯಕ್ಷೀಯ ನಾಮನಿರ್ದೇಶನಗಳನ್ನು ಪಡೆದುಕೊಂಡಿದ್ದಾರೆ. ಪರಸ್ಪರು ಅಧ್ಯಕ್ಷ ಸ್ಥಾನಕ್ಕಾಗಿ ಮತ್ತೆ ಫೈಟ್‌ಗೆ ಇಳಿದಿದ್ದಾರೆ. ಟ್ರಂಪ್ ಬುಧವಾರ ಬೆಳಗ್ಗೆ ಅಧ್ಯಕ್ಷರ ರಿಪಬ್ಲಿಕನ್ ನಾಮನಿರ್ದೇಶನ ಗೆದ್ದರು. ಬೈಡೆನ್ ಡೆಮಾಕ್ರಟಿಕ್ ಅನುಮೋದನೆಯನ್ನು ಪಡೆದುಕೊಂಡಿದ್ದಾರೆ.

# ಕಾಂಗ್ರೆಸ್, ಬಿಆರ್‌ಎಸ್ ತೆಲಂಗಾಣದ ಎಲ್ಲಾ ಕನಸುಗಳನ್ನು ಭಗ್ನಗೊಳಿಸಿದೆ: ಮೋದಿ

**ನಾಗರ್ಕರ್ನೂಲ್:** ಕಾಂಗ್ರೆಸ್ ಮತ್ತು ಬಿಆರ್‌ಎಸ್ ತೆಲಂಗಾಣದ ಎಲ್ಲಾ ಕನಸುಗಳನ್ನು ಭಗ್ನಗೊಳಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನಾಗರ್ಕರ್ನೂಲ್ನಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು ಇಂದು ತೆಲಂಗಾಣ ಜನರು ಮೂರನೇ ಬಾರಿಗೆ ಮೋದಿಯನ್ನು ಅಧಿಕಾರಕ್ಕೇರಿಸಲು ನಿರ್ಧರಿಸಿರುವುದನ್ನು ನಾನು ನೋಡಿದ್ದೇನೆ ಎಂದು ಹೇಳಿದರು. ಲೋಕಸಭಾ ಚುನಾವಣೆ 2024 ದಿನಾಂಕವನ್ನು ದೆಹಲಿಯಲ್ಲಿ ಸ್ವಲ್ಪ ಸಮಯದ ನಂತರ ಪ್ರಕಟಿಸಲಾಗುವುದು. ಆದರೆ, ಚುನಾವಣಾ ದಿನಾಂಕಗಳು ಅಧಿಕೃತವಾಗಿ ಘೋಷಣೆಯಾಗುವ ಮೊದಲೇ ದೇಶದ ಜನರು ಫಲಿತಾಂಶಗಳನ್ನು ಪ್ರಕಟಿಸಿದ್ದಾರೆ. ದೇಶವು 'ಅಬ್ ಕೀ ಬಾರ್ 400 ಪಾರ್' ಎಂದು ಘೋಷಿಸಿದೆ. ನಾಗರ್ಕರ್ನೂಲ್ನಲ್ಲಿರುವ ಜನಸಮೂಹವು ಅದಕ್ಕೆ ಸಾಕ್ಷಿಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.



# ರಷ್ಯಾ ಅಧ್ಯಕ್ಷ 'ಪುಟಿನ್' ಪೋಷಕರ ಸಮಾಧಿಗೆ ಮೂತ್ರ ವಿಸರ್ಜಿಸಿದ ಕಿಡಿಗೇಡಿ

**ರಷ್ಯಾ:** ಸೇಂಟ್ ಪೀಟರ್ಸ್ಬರ್ಗ್ ನ ಸೆರಾಫಿಮೊವ್ಸ್ಕಿ ಸ್ಮಶಾನದಲ್ಲಿ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಪೋಷಕರ ಸಮಾಧಿಯ ಮೇಲೆ ಕಿಡಿಗೇಡಿಯೋರ್ವ ಮೂತ್ರ ವಿಸರ್ಜನೆ ಮಾಡಿದ್ದಾನೆ ಎನ್ನಲಾಗಿದ್ದು, ಸೋಶಿಯಲ್ ಮೀಡಿಯಾದಲ್ಲಿ ಈ ವಿಡಿಯೋ ವೈರಲ್ ಆಗಿದೆ. ಈ ಹೇಯ ಕೃತ್ಯವನ್ನು ವೀಡಿಯೊದಲ್ಲಿ ಸೆರೆಹಿಡಿಯಲಾಗಿದ್ದು , ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದೆ. ವೀಡಿಯೊದ ಸತ್ಯಾಸತ್ಯತೆ ಮತ್ತು ಬಳಸಿದ ದ್ರವದ ಸ್ವರೂಪವನ್ನು ದೃಢಪಡಿಸಲಾಗಿಲ್ಲ. ರಷ್ಯಾದ ಅಧ್ಯಕ್ಷೀಯ ಚುನಾವಣೆಯ ಮಧ್ಯೆ ಈ ಕೃತ್ಯವು ನಡೆದಿದೆ. ವೈರಲ್ ವಿಡಿಯೋದ ಸತ್ಯಾನುಸತ್ಯತೆ ಇನ್ನೂ ನಿಖರವಾಗಿಲ್ಲ. ವ್ಲಾಡಿಮಿರ್ ಪುಟಿನ್ ಅವರ ಪೋಷಕರ ಸಮಾಧಿಯ ಮೇಲೆ ಈ ಕೃತ್ಯ ನಡೆಸಲಾಗಿದ್ದು, ಸೋಶಿಯಲ್ ಮೀಡಿಯಾದಲ್ಲಿ ವ್ಯಾಪಕ ಟೀಕೆಗಳಿಗೆ ಕಾರಣವಾಗಿದೆ.




# ಪಾಕ್ ಸೇನಾಠಾಣೆಯ ಮೇಲೆ ಆತ್ಮಾಹುತಿ ಬಾಂಬ್ ದಾಳಿ

**ಇಸ್ಲಮಾಬಾದ್:** ಅಫ್ಘಾನಿಸ್ತಾನ ಗಡಿಭಾಗದ ಬಳಿಯಿರುವ ಪಾಕಿಸ್ತಾನ ಸೇನಾ ಠಾಣೆಯ ಮೇಲೆ ಶನಿವಾರ ಉಗ್ರರು ನಡೆಸಿದ ಆತ್ಮಾಹುತಿ ಬಾಂಬ್ದಾಳಿಯಲ್ಲಿ ಕನಿಷ್ಠ 5 ಯೋಧರು ಸಾವನ್ನಪ್ಪಿದ್ದಾರೆ. ಭದ್ರತಾ ಪಡೆಗಳ ಪ್ರತಿದಾಳಿಯಲ್ಲಿ 5 ಉಗ್ರರು ಹತರಾಗಿದ್ದು ಇಬ್ಬರು ಯೋಧರೂ ಮೃತಪಟ್ಟಿದ್ದಾರೆ ಎಂದು ಪಾಕಿಸ್ತಾನದ ಮಿಲಿಟರಿ ಹೇಳಿದೆ. ವಾಯವ್ಯ ಪಾಕಿಸ್ತಾನದ ಖೈಬರ್ ಪಖ್ತೂಂಕ್ವಾ ಪ್ರಾಂತದ ನಾರ್ತ್ ವಝೀರಿಸ್ತಾನ್ ಜಿಲ್ಲೆಯ ಸೇನಾ ಠಾಣೆಯ ಮೇಲೆ ಆತ್ಮಾಹುತಿ ಬಾಂಬರ್ ದಾಳಿ ನಡೆಸಿದ ಜತೆಗೆಯೇ ಸ್ಫೋಟಕ ತುಂಬಿದ್ದ ವಾಹನವನ್ನು ನುಗ್ಗಿಸಿದರು. ದಾಳಿಯಲ್ಲಿ ಸೇನಾಠಾಣೆಯ ಒಂದು ಭಾಗ ಕುಸಿದುಬಿದ್ದಿದ್ದು 7 ಯೋಧರು ಸಾವನ್ನಪ್ಪಿದ್ದಾರೆ. ಬಳಿಕ ಭದ್ರತಾ ಸಿಬಂದಿ ನಡೆಸಿದ ಪ್ರತಿದಾಳಿಯಲ್ಲಿ 6 ಭಯೋತ್ಪಾದಕರು ಹತರಾಗಿದ್ದು ಕಾರ್ಯಾಚರಣೆಯಲ್ಲಿ ಇಬ್ಬರು ಯೋಧರೂ ಮೃತರಾಗಿದ್ದಾರೆ ಎಂದು ವರದಿಯಾಗಿದೆ.



# ಅಮೆರಿಕದಲ್ಲಿ ಸುಂಟರ ಗಾಳಿ ಅಬ್ಬರ

**ವಾಷಿಂಗ್ಟನ್:** ಅಮೆರಿಕದ ಇಂಡಿಯಾನಾ ಮತ್ತು ಓಹಿಯೊ ರಾಜ್ಯದ ಗ್ರಾಮೀಣ ಭಾಗದಲ್ಲಿ ಶುಕ್ರವಾರ ಅಪ್ಪಳಿಸಿದ ಚಂಡಮಾರುತದಿಂದ ಕನಿಷ್ಠ 3 ಮಂದಿ ಮೃತಪಟ್ಟಿದ್ದು 38ಕ್ಕೂ ಅಧಿಕ ಮಂದಿ ಗಾಯಗೊಂಡಿರುವುದಾಗಿ ವರದಿಯಾಗಿದೆ.

ಓಹಿಯೋದ ಲೊಗಾನ್ ಕೌಂಟಿಯಲ್ಲಿ ಮೂರು ಸಾವಿನ ಪ್ರಕರಣ ವರದಿಯಾಗಿದೆ.



ವಿದ್ಯುತ್ ಪೂರೈಕೆ ಜಾಲಕ್ಕೆ ಹಾನಿಯಾಗಿರುವುದರಿಂದ ಹಲವೆಡೆ ವಿದ್ಯುತ್ ವ್ಯವಸ್ಥೆ ಮೊಟಕುಗೊಂಡಿದ್ದು ರಕ್ಷಣೆ ಮತ್ತು ಪರಿಹಾರ ಕಾರ್ಯಾಚರಣೆಗೆ ತೊಡಕಾಗಿದೆ. ಹಲವು ಮನೆಗಳು ಕುಸಿದಿರುವ ಮಾಹಿತಿಯಿದೆ. ಲೇಕ್ವ್ಯೂ ಪ್ರದೇಶದಲ್ಲಿ ಸಂಚಾರಿ ಮನೆಗಳು ತೀವ್ರ ಹಾನಿಗೊಂಡಿದ್ದು ಭಾರೀ ಗಾತ್ರದ ಮರಗಳು ರಸ್ತೆಗೆ ಉರುಳಿಬಿದ್ದು ರಸ್ತೆ ಸಂಚಾರಕ್ಕೆ ಅಡ್ಡಿಯಾಗಿದೆ ಎಂದು ಓಹಿಯೋದ ಮುಖ್ಯಾಧಿಕಾರಿ ರ್‍ಯಾಂಡಲ್ ಡಾಡ್ಸ್ ಹೇಳಿದ್ದಾರೆ.

ಪೂರ್ವ ಇಂಡಿಯಾನಾದಲ್ಲಿ 38 ಮಂದಿ ಗಾಯಗೊಂಡಿದ್ದು ಮೂವರ ಸ್ಥಿತಿ ಗಂಭೀರವಾಗಿದೆ. 22 ಮನೆಗಳು ನಾಶವಾಗಿದ್ದು 100ಕ್ಕೂ ಅಧಿಕ ಮನೆಗಳು ತೀವ್ರವಾಗಿ ಹಾನಿಗೊಳಗಾಗಿವೆ ಎಂದು ವರದಿಯಾಗಿದೆ.

# ಮತ್ತೆ ಗದ್ದುಗೆ ಹಿಡಿಯಲಿದ್ದಾರೆ ಪುಟಿನ್: 6ನೇ ಬಾರಿಗೆ ಅಧ್ಯಕ್ಷರಾಗಿ ಆಯ್ಕೆ ಸಾಧ್ಯತೆ

**ರಷ್ಯಾ:** ರಷ್ಯಾ ಅಧ್ಯಕ್ಷರ ಆಯ್ಕೆಗೆ ಶುಕ್ರವಾರ ಚುನಾವಣೆ ಆರಂಭವಾಗಿದ್ದು, ಹಾಲಿ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತೊಮ್ಮೆ ಅಧ್ಯಕ್ಷರಾಗುವುದು ಬಹುತೇಕ ಖಚಿತವಾಗಿದೆ. ರಷ್ಯಾದಲ್ಲಿ ಪ್ರಬಲ ವಿಪಕ್ಷವಿಲ್ಲದೇ ಚುನಾವಣೆ ನಡೆಯುತ್ತಿದೆ. ನಾಳೆ ಅಂದರೆ ಭಾನುವಾರದ ವರೆಗು ಚುನಾವಣೆ ನಡೆಯಲಿದ್ದು, ಇದೇ ಮೊದಲ ಬಾರಿಗೆ ಆನ್ ಲೈನ್ನಲ್ಲಿ ಮತಹಾಕಲು ಅವಕಾಶ ನೀಡಲಾಗಿದೆ. ಚುನಾವಣೆ ಆರಂಭವಾಗುತ್ತಿದ್ದಂತೆ ಮಾಸ್ಕೋದಲ್ಲಿ 2 ಲಕ್ಷ ಮಂದಿ ಹಕ್ಕು ಚಲಾಯಿಸಿದ್ದಾರೆ. ರತೀಶ್ ನಾಯರ್, ರಷ್ಯಾ ಒಕ್ಕೂಟದ ಕೇಂದ್ರ ಚುನಾವಣಾ ಆಯೋಗವು ಕೇರಳದಲ್ಲಿರುವ ರಷ್ಯಾದ ನಾಗರಿಕರು ತಮ್ಮ ಹೊಸ ಅಧ್ಯಕ್ಷರನ್ನು ಆಯ್ಕೆ ಮಾಡುವ ಪ್ರಕ್ರಿಯೆಯಲ್ಲಿ ಮತ ಚಲಾಯಿಸಿದ್ದಾರೆ. ಮತದಾನದಲ್ಲಿ ಸಹಕರಿಸಿದ ಎಲ್ಲರಿಗೂ ಧನ್ಯವಾದ ಎಂದಿದ್ದಾರೆ. ನಾವು ಅಧ್ಯಕ್ಷೀಯ ಚುನಾವಣೆಯ ಚೌಕಟ್ಟಿನಲ್ಲಿ ಪ್ರಾಥಮಿಕ ಮತದಾನ ಆಯೋಜಿಸಿದ್ದೇವೆ. ಭಾರತದಲ್ಲಿ ವಾಸಿಸುವ ರಷ್ಯಾದ ಒಕ್ಕೂಟಗಳ ನಾಗರಿಕರಿಗೆ ಅವಕಾಶ ಒದಗಿಸಲು ನಾವು ಇಲ್ಲಿದ್ದೇವೆ ಎಂದು ಚೆನ್ನೈನ ಹಿರಿಯ ಕಾನ್ಸುಲ್ ಜನರಲ್ ಸೆರ್ಗೆ ಅಜುರೊವ್ ಹೇಳಿದ್ದಾರೆ ಭಾರತದಲ್ಲಿ ಕೇರಳ ಸಹಿತ 144 ದೇಶಗಳ 288 ಮತಗಟ್ಟೆಗಳಲ್ಲಿ ರಷ್ಯಾ ನಾಗರಿಕರಿಗೆ ಹಕ್ಕು ಚಲಾಯಿಸಲು ಅವಕಾಶ ನೀಡಲಾಗಿದೆ.



# ಚೀನಾದಲಿ ನಾಲ್ಕು ಇಂಚಿನ ಬಾಲದೊಂದಿಗೆ ಜನಿಸಿದ ಮಗು!

**ಚೀನಾ:** ನೆರೆ ರಾಷ್ಟ್ರ ಚೀನಾದಲ್ಲಿ ನಾಲ್ಕು ಇಂಚಿನ ಬಾಲದೊಂದಿಗೆ ಮಗುವೊಂದು ಜನಿಸಿದೆ. ಈ ಘಟನೆ ವೈದ್ಯ ಲೋಕವನ್ನೇ ಬೆರಗಾಗಿಸಿದೆ.

ಚೀನಾದ ಹ್ಯಾಂಗ್ಝು ಮಕ್ಕಳ ಆಸ್ಪತ್ರೆಯಲ್ಲಿ ಜನಿಸಿದ ಈ ಮಗುವಿನ ಬೆನ್ನಿನ ಭಾಗದಲ್ಲಿ ಬಾಲವಿರುವುದು ಪತ್ತೆಯಾಗಿದೆ. ಇದೊಂದು ಅಸಹಜ ಬೆಳವಣಿಗೆಯಾಗಿದ್ದು, ಬೆನ್ನುಮೂಳೆಗೆ ಸಂಬಂಧಿಸಿದ ಅಸ್ವಸ್ಥತೆಗಳ ಕಾರಣದಿಂದ ಇಂತಹ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ ಎಂದು ವೈದ್ಯರು ಹೇಳಿದ್ದಾರೆ.

ಆಸ್ಪತ್ರೆಯ ಪೀಡಿಯಾಟ್ರಿಕ್ ನ್ಯೂರೋಸರ್ಜರಿ ವಿಭಾಗದ ವೈದ್ಯ ಡಾ ಲೀ ನವಜಾತ ಶಿಶುವಿನ ಬೆನ್ನಿನ ಭಾಗದಲ್ಲಿ ಬಾಲ ಇರುವುದನ್ನು ಪತ್ತೆ ಹಚ್ಚಿದ್ದು, ಈ ಕುರಿತ ವಿಡಿಯೋವೊಂದನ್ನು ಅವರು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡಿದ್ದಾರೆ.



ಮಗುವಿನ ಬೆನ್ನುಹುರಿ ಸರಿಯಾಗಿ ಬೆಳವಣಿಗೆಯಾಗದಿದ್ದಾಗ ಸಂಭವಿಸುವ ಜನ್ಮ ದೋಷದಿಂದ ಈ ರೀತಿ ಬಾಲದಂತಹ ಅಂಗ ಬೆಳವಣಿಗೆಯಾಗುತ್ತದೆ ಎಂದು ಡಾ. ಲೀ ಹೇಳಿದ್ದಾರೆ. ಇದು ಬೆನ್ನು ಹುರಿಯ ಸುತ್ತಮುತ್ತಲಿನ ಅಂಗಾಂಶಗಳಿಗೆ ಅಸಹಜವಾಗಿ ಜೋಡಿಸಲ್ಪಟ್ಟಿರುವ ಒಂದು ರೀತಿಯ ಸ್ಥಿತಿಯಾಗಿದ್ದು, ಇದರಿಂದ ಬಾಲ ಬೆಳೆಯುವ ಸಾಧ್ಯತೆ ಇರುತ್ತದೆ. ಸಾಮಾನ್ಯವಾಗಿ ಇಂತಹ ಸ್ಥಿತಿ ಯಾರಲ್ಲಿಯೂ ಕಾಣಿಸಿಕೊಳ್ಳುವುದಿಲ್ಲ. ಆದರೆ ಇಂತಹ ಸಮಸ್ಯೆಗಳು ಸಂಭವಿಸಿದರೆ ಅದು ನರ ಸಂಬಂಧಿ ಸಮಸ್ಯೆಗಳನ್ನು ಉಂಟು ಮಾಡುವ ಸಾಧ್ಯತೆ ಇರುತ್ತದೆ ಎಂದು ವೈದ್ಯರು ಹೇಳಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಸೀರೆ' ಹಿಂದೆ ಬಿದ್ದ ನಿರ್ದೇಶಕ ರಾಮ್ ಗೋಪಾಲ್ ವರ್ಮಾ



ಹೆಸರಾಂತ ನಿರ್ದೇಶಕ ರಾಮ್ ಗೋಪಾಲ್ ವರ್ಮಾ, ಈ ಹಿಂದೆ 'ಸೀರೆ' ಹೆಸರಿನ ಸಿನಿಮಾವೊಂದನ್ನು ಘೋಷಣೆ ಮಾಡಿದ್ದರು. ಈ ಸಿನಿಮಾಗೆ ಮಲಯಾಳಿ ನಟಿ ಆರಾಧ್ಯ ದೇವಿ ಅಲಿಯಾಸ್ ಶ್ರೀಲಕ್ಷ್ಮಿಯನ್ನು ನಾಯಕಿಯನ್ನಾಗಿ ಆಯ್ಕೆ ಮಾಡಿಕೊಂಡಿದ್ದರು. ಈಗ ಈ ಸಿನಿಮಾದ ಶೂಟಿಂಗ್‌ಗೆ ಸಿದ್ಧ ಮಾಡಿಕೊಂಡಿದ್ದಾರೆ ವರ್ಮಾ. ಅದಕ್ಕೂ ಮೊದಲ ನಾಯಕಿಯು ಬದಲಾದ ಪರಿಗೆ ಮೆಚ್ಚಿಕೊಂಡಿದ್ದಾರೆ.

ಆರಾಧ್ಯ ದೇವಿಯ ಹೊಸ ಫೋಟೋ ಶೂಟ್ ಅನ್ನು ಹಂಚಿಕೊಂಡಿರುವ ಆರ್.ಜಿ.ವಿ ನಟಿಯ ಬದಲಾವಣೆ ಕುರಿತು ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ. ಅದಕ್ಕಾಗಿ ಅವರು ಮಾಡಿಕೊಂಡಿದ್ದ ತಯಾರಿಯನ್ನು ಹಾಡಿ ಹೊಗಳಿದ್ದಾರೆ. ಜೊತೆಗೆ ಕ್ಯಾಮೆರಾದಲ್ಲಿ ಆಕೆಯನ್ನು ಸೆರೆ ಹಿಡಿದವರನ್ನು ವರ್ಮಾ ನೆನೆದಿದ್ದಾರೆ. ಆರಾಧ್ಯ ಫೋಟೋ ಶೂಟ್ ನಲ್ಲಿ ಸಖತ್ ಹಾಟ್ ಹಾಟ್ ಆಗಿ ಕಂಡಿದ್ದಾರೆ.

ರಾಮ್ ಗೋಪಾಲ್ ವರ್ಮಾ ಇತ್ತೀಚಿನ ವರ್ಷಗಳಲ್ಲಿ ಸಿನಿಮಾಕ್ಕಿಂತ ಹೆಚ್ಚು ಹುಡುಗಿಯರ ಅಂದವನ್ನು ಹೊಗಳುವುದರಲ್ಲಿ ಮತ್ತು ಸದಾ ಹುಡುಗಿಯರ ಜತೆಯೇ ಕಾಲ ಕಳೆಯುವುದರಲ್ಲಿ ಬ್ಯುಸಿಯಾಗಿದ್ದಾರೆ.

ಮಾಡೆಲ್ ಗಳ ಜತೆ ಬಾರ್ ನಲ್ಲಿ ಪಾರ್ಟಿ ಮಾಡುವುದು ಮತ್ತು ತಮ್ಮದೇ ಸಿನಿಮಾಗಳಲ್ಲಿ ನಟಿಸಿರುವ ನಟಿಯರ ಜತೆ ಬಿಂದಾಸ್ ಆಗಿ ಇರುವುದನ್ನೇ ಹವ್ಯಾಸ ಮಾಡಿಕೊಂಡಿರುವ ವರ್ಮಾ, ಈಗ ನಟಿ ಅಪ್ಸರಾ ರಾಣಿಯ ಹಿಂದೆ ಬಿದ್ದಿದ್ದಾರೆ. ನಿತ್ಯವೂ ಅಪ್ಸರಾ ಫೋಟೋಗಳನ್ನು ಸೋಷಿಯಲ್ ಮೀಡಿಯಾಗಳಲ್ಲಿ ಪೋಸ್ಟ್ ಮಾಡುತ್ತಿರುವ ವರ್ಮಾ, ಅದಕ್ಕೊಂದು ಕ್ಯಾಪ್ಷನ್ ಕೊಟ್ಟು ಕುತೂಹಲ ಮೂಡಿಸುತ್ತಿದ್ದಾರೆ.

ಈ ರಾಮ್ ಗೋಪಾಲ್ ವರ್ಮಾಗೂ ಮತ್ತು ಅಪ್ಸರಾ ನಡುವಿನ ಸಂಬಂಧವೇನು ಎನ್ನುವ ಕುರಿತು ಸೋಷಿಯಲ್ ಮೀಡಿಯಾದಲ್ಲಿ ಭಾರೀ ಚರ್ಚೆಯಾಗುತ್ತಿದೆ. ನಿತ್ಯವೂ ಅಪ್ಸರಾ ಧ್ಯಾನವನ್ನೇ ವರ್ಮಾ ಮಾಡುತ್ತಿರುವುದರ ಹಿಂದಿನ ಉದ್ದೇಶವೇನು ಎನ್ನುವುದು ಗೊತ್ತಿಲ್ಲ. ಆದರೆ, ಅಪ್ಸರಾರ ಹೊಸ ಫೋಟೋಗಳನ್ನು ಆರ್.ಜಿ.ವಿ ಪೋಸ್ಟ್ ಮಾಡುತ್ತಲೇ ಇದ್ದಾರೆ.

ಅಪ್ಸರಾ ಜೊತೆ ವರ್ಮಾ ಸಲುಗೆಯಿಂದ ಇರುವುದು ಇದೇ ಮೊದಲೇನೂ ಅಲ್ಲ. ಈ ಹಿಂದೆ ಅಪ್ಸರಾ ರಾಣಿ ವಿಚಿತ್ರ ಪ್ರಶ್ನೆಯೊಂದನ್ನು ವರ್ಮಾಗೆ ಕೇಳಿದ್ದರು. ಅದಕ್ಕೆ ರಾಮ್ ಗೋಪಾಲ್ ವರ್ಮಾ ಸಖತ್ತಾಗಿಯೇ ಉತ್ತರ ಕೊಟ್ಟಿದ್ದರು.

ಅಲ್ಲದೇ ಅಪ್ಸರಾ ರಾಣಿ ಈ ಹಿಂದೆ ಒಂದು ಹಾಟ್ ಹಾಟ್ ಆಗಿರುವ ವಿಡಿಯೋವನ್ನು ಟ್ವಿಟ್ ಮಾಡಿದ್ದರು. ಪಡ್ಡೆಗಳ ನಿದ್ದೆಗೆಡಿಸುವಂತಹ ಆ ವಿಡಿಯೋಗೆ ರಾಮ್ ಗೋಪಾಲ್ ವರ್ಮಾ ಅಷ್ಟೇ ಸುಂದರವಾಗಿ ಪದಗಳನ್ನು ಪೋಣಿಸಿದ್ದರು. 'ಡೇಂಜರೆಸ್ ಹುಡುಗಿಯ ನೋಟವು, ಅಪಾಯಕಾರಿ ಅಲ್ಲವೆಂದು ಹೇಳುತ್ತದೆ' ಎಂದು ವಿಡಿಯೋಗೆ ಕಾಮೆಂಟ್ ಮಾಡಿದ್ದರು.



# ಸದ್ಯಕ್ಕೆ ಒಟಿಟಿಯಲ್ಲಿ ಸಿಗಲ್ಲ ಹನುಮಾನ್




ಭಾರತೀಯ ಸಿನಿಮಾ ರಂಗದಲ್ಲಿ ಭಾರೀ ಸದ್ದು ಮಾಡಿರುವ ಹನುಮಾನ್ ಸಿನಿಮಾ ಥಿಯೇಟರ್ ನಲ್ಲಿ ಪ್ರದರ್ಶನ ಕಾಣುತ್ತಿರುವಾಗಲೇ ಒಟಿಟಿಯಲ್ಲಿ ಸ್ಟ್ರೀಮಿಂಗ್ ಆಗುವ ಕುರಿತಂತೆ ಸುದ್ದಿಯೊಂದು ಬಂದಿತ್ತು. ಒಪ್ಪಂದ ಪ್ರಕಾರ ಸಿನಿಮಾ ರಿಲೀಸ್ ಆಗಿ ಮೂರೇ ಮೂರು ವಾರದಲ್ಲಿ ಚಿತ್ರ, ಒಟಿಟಿಯಲ್ಲಿ ಬರಬೇಕಿತ್ತು. ಸಿನಿಮಾ ಇನ್ನೂ ಥಿಯೇಟರ್ ನಲ್ಲಿ ಇರುವ ಕಾರಣದಿಂದಾಗಿ 55 ದಿನಗಳ ನಂತರ ಚಿತ್ರವನ್ನು ಒಟಿಟಿಯಲ್ಲಿ ತರಲು ನಿರ್ಧರಿಸಲಾಗಿತ್ತು. ಅಂದುಕೊಂಡಂತೆ ಆಗಿದ್ದರೆ ಮಾರ್ಚ್ 2ರಿಂದ ಝೀ 5ನಲ್ಲಿ ಚಿತ್ರ ಬರಬೇಕಿತ್ತು. ಅದು ಆಗಲಿಲ್ಲ. ಮಾರ್ಚ್ 2ನೇ ತಾರೀಖು ಒಟಿಟಿಯಲ್ಲಿ ಹನುಮಾನ್ ಸಿಗಲಿಲ್ಲ. ಹಾಗಾಗಿ ಮತ್ತೊಂದು ದಿನಾಂಕವನ್ನು ಘೋಷಣೆ ಮಾಡಲಾಯಿತು. ಅದರಂತೆ ಮಾರ್ಚ್ 16ಕ್ಕೆ ಒಟಿಟಿಗೆ ಹನುಮಾನ್ ಬರಬೇಕಿತ್ತು. ಸದ್ಯ ಸಿಕ್ಕಿರುವ ಮಾಹಿತಿ ಪ್ರಕಾರ ನಾಳೆಯೂ ಸಿನಿಮಾ ಒಟಿಟಿಯಲ್ಲಿ ಲಭ್ಯವಿರುವುದಿಲ್ಲ. ಅದಕ್ಕಾಗಿ ಕಾರಣವನ್ನೂ ನೀಡಿದ್ದಾರೆ ನಿರ್ದೇಶಕರು. ತಾಂತ್ರಿಕ ಕಾರಣದಿಂದಾಗಿ ನಾಳೆ ಒಟಿಟಿಯಲ್ಲಿ ಹನುಮಾನ್ ಲಭ್ಯವಿಲ್ಲವಂತೆ.

ಪ್ರಶಾಂತ್ ವರ್ಮಾ ನಿರ್ದೇಶನದಲ್ಲಿ ಮೂಡಿ ಬಂದಿರುವ ಹನುಮಾನ್ ಚಿತ್ರ ಜಾಗತಿಕ ಮಟ್ಟದಲ್ಲಿ ಸಖತ್ ಸದ್ದು ಮಾಡುತ್ತಿದೆ. ರಿಲೀಸ್ ಆದ 14 ದಿನಕ್ಕೆ 250 ಕೋಟಿ ರೂಪಾಯಿ ಗಳಿಕೆ ಮಾಡಿದೆ. ಈ ಮೂಲಕ ಸಿನಿಮಾ ತನ್ನ ನಾಗಲೋಟವನ್ನು ಮುಂದುವರೆಸಿದೆ. ಈ ನಡುವೆ ಪಾರ್ಟ್ 2 ಮಾಡುವ ಕುರಿತೂ ಸುದ್ದಿ ಹರಿದಾಡುತ್ತಿದೆ.

ಕೆಜಿಎಫ್, ಕೆಜಿಎಫ್ 2 ಚಿತ್ರದ ಸಕ್ಸಸ್ ನಂತರ ಪ್ಯಾನ್ ಇಂಡಿಯಾ ಸ್ಟಾರ್ ಆಗಿರುವ ಯಶ್ ಬಗ್ಗೆ ಸದಾ ಒಂದಲ್ಲಾ ಒಂದು ವಿಚಾರವಾಗಿ ಚಾಲ್ತಿಯಲ್ಲಿರುತ್ತಾರೆ. ಸುದ್ದಿಗೋಷ್ಠಿಯೊಂದರಲ್ಲಿ ಶಾರುಖ್ ಖಾನ್, ಕರೀನಾ ಕಪೂರ್ 'ಟಾಕ್ಸಿಕ್' ಚಿತ್ರಕ್ಕೆ ಎಂಟ್ರಿ ಕೊಡ್ತಾರಾ ಎಂಬ ವಿಚಾರಕ್ಕೆ ಯಶ್ ಸ್ಪಷ್ಟನೆ ನೀಡಿದ್ದರು. ಅದರಂತೆ 'ಹನುಮಾನ್' 2ನಲ್ಲಿ ರಾಕಿಬಾಯ್ ನಟಿಸ್ತಾರಾ ಎಂಬ ವಿಚಾರಕ್ಕೆ ಸ್ವತಃ ಯಶ್ ಕ್ಲ್ಯಾರಿಟಿ ಕೊಟ್ಟಿದ್ದಾರೆ.

'ಹನುಮಾನ್' ಪಾರ್ಟ್ 2ನಲ್ಲಿ ನಾನು ನಟಿಸುತ್ತಿಲ್ಲ. ಈಗ 'ಟಾಕ್ಸಿಕ್' ಸಿನಿಮಾ ಬಿಟ್ಟು ಬೇರೆ ಕಡೆ ಯೋಚನೆ ಮಾಡುತ್ತಿಲ್ಲ. ಪರಭಾಷೆಯಿಂದ ಸಾಕಷ್ಟು ಸಿನಿಮಾಗಳು ನನ್ನನ್ನು ಅರಸಿ ಬಂದಿರೋದು ನಿಜ. ಆದರೆ ಯಾವ ಚಿತ್ರಕ್ಕೂ ನಾನು ಸಹಿ ಹಾಕಿಲ್ಲ ಎಂದು ಯಶ್ ಉತ್ತರಿಸಿದ್ದಾರೆ. ಅಲ್ಲಿಗೆ ಹನುಮಾನ್ 2ನಲ್ಲಿ ಯಶ್ ನಟಿಸುತ್ತಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

ತೇಜ ಸಜ್ಜ ನಟಿಸಿರುವ 'ಹನುಮಾನ್' ಸಿನಿಮಾ ಈಗಾಗಲೇ ಸೂಪರ್ ಡೂಪರ್ ಹಿಟ್ ಆಗಿದೆ. ಈ ಚಿತ್ರವನ್ನು ಪಾರ್ಟ್ 2 ಮಾಡಲು ತೆರೆಮರೆಯಲ್ಲಿ ಭರದಿಂದ ಸಿದ್ಧತೆ ನಡೆಯುತ್ತಿದೆ. ಹೀಗಿರುವಾಗ ಪ್ರದೀಪ್ ವರ್ಮಾ ಅವರ ನಿರ್ದೇಶನದಲ್ಲಿ 'ಹನುಮಾನ್ ಪಾರ್ಟ್ 2' ಮೂಡಿ ಬರಲಿದ್ದು, ಯಶ್ ಲೀಡ್ ರೋಲ್‌ನಲ್ಲಿ ನಟಿಸುತ್ತಾರೆ ಎಂದೇ ಸುದ್ದಿಯಾಗಿತ್ತು. ಅದಕ್ಕೆ ರಾಕಿಭಾಯ್ ಈಗ ಉತ್ತರ ನೀಡಿದ್ದಾರೆ.

# 'ಪುಷ್ಪ'ಗಾಗಿ ಐಟಂ ಹಾಡಿಗೆ ಹೆಜ್ಜೆ ಹಾಕಲಿದ್ದಾರೆ ಜಾಹ್ನವಿ ಕಪೂರ್



ಪುಷ್ಪ 2 ಚಿತ್ರದ ಅಡ್ಡಾದಿಂದ ಲೇಟೆಸ್ಟ್ ಸುದ್ದಿಯೊಂದು ಹರಿದಾಡುತ್ತಿದೆ. ಈ ಸಿನಿಮಾದ ಮಾದಕ ಗೀತೆ ಬಾಲಿವುಡ್ ನಟಿ ಜಾಹ್ನವಿ ಕಪೂರ್ ಹೆಜ್ಜೆ ಹಾಕಲಿದ್ದಾರೆ ಎಂದು ಹೇಳಲಾಗಿತ್ತು. ಈ ಹಿಂದೆ ನಾನಾ ನಾಯಕಿಯರ ಹೆಸರು ಇದೇ ಹಾಡಿಗೆ ಕೇಳಿ ಬಂದಿತ್ತು. ಆದರೆ, ಇದೀಗ ಜಾಹ್ನವಿ ಹೆಸರು ಓಡಾಡುತ್ತಿದೆ. ಅವರು ಡಾನ್ಸ್ ಮಾಡಿದ ನಂತರವೇ ಪಕ್ಕಾ ಆಗುವುದು.

ಈ ನಡುವೆ ಚಿತ್ರದ ಬಜೆಟ್ ಬಗ್ಗೆ ಸಾಕಷ್ಟು ಕುತೂಹಲ ಮೂಡಿದೆ. ಕಾರಣ ಬಜೆಟ್ ತುಂಬಾನೇ ಏರಿಕೆ ಆಗಿದೆಯಂತೆ. ಅಲ್ಲು ಅರ್ಜುನ್ ನಟನೆಯ ಪುಷ್ಪ 2 ಸಿನಿಮಾ ಕುರಿತಂತೆ ಅಚ್ಚರಿಯ ಸಂಗತಿಗಳು ಹೊರ ಬೀಳುತ್ತಲೇ ಇವೆ. ಪ್ರತಿ ಬಾರಿಯೂ ಅವುಗಳೆಲ್ಲ ಕಟ್ಟುಕಥೆಗಳೇ ಇರುತ್ತಿದ್ದವು. ಇದೀಗ ಸ್ವತಃ ಸಿನಿಮಾದ ನಿರ್ದೇಶಕ ಸುಕುಮಾರನ್ ಮಾತನಾಡಿದ್ದಾರೆ. ಸಿನಿಮಾ ಕುರಿತಂತೆ ಹಲವಾರು ವಿಷಯಗಳನ್ನು ಅವರು ಹಂಚಿಕೊಂಡಿದ್ದಾರೆ. ಅದರಲ್ಲೂ ಪ್ರಮುಖವಾಗಿ ಚಿತ್ರ, ಬಜೆಟ್ ಬಗ್ಗೆ ಮಾತನಾಡಿದ್ದಾರೆ.

ಪುಷ್ಪ ಸಿನಿಮಾಗಿಂತ ಪುಷ್ಪ 2 ಸಿನಿಮಾದ ಬಜೆಟ್ ಡಬಲ್ ಆಗಿದೆಯಂತೆ. ಜೊತೆಗೆ ಅಷ್ಟೇ ಶ್ರೀಮಂತಿಕೆಯಿಂದ ಕೂಡಿದೆಯಂತೆ. ಫಹಾದ್ ಫಾಸಿಲ್ ಮತ್ತು ಅಲ್ಲು ಅರ್ಜುನ್ ನಡುವಿನ ದೃಶ್ಯ ಮತ್ತೊಂದು ಲೆವಲ್ ನಲ್ಲಿ ಇದೆ ಎಂದಿದ್ದಾರೆ ನಿರ್ದೇಶಕ ಸುಕುಮಾರನ್. ಇಡೀ ಕಥೆಯನ್ನು ಈ ಇಬ್ಬರೂ ನಟರು ಹೇಗೆ ತೂಗಿಸಿಕೊಂಡು ಹೋಗಿದ್ದಾರೆ ಎನ್ನುವುದನ್ನು ವಿವರಿಸಿದ್ದಾರೆ.

ಒಂದು ಕಡೆ ಶೂಟಿಂಗ್ ನಲ್ಲಿ ಬ್ಯುಸಿಯಾಗಿದ್ದಾರೆ ಇನ್ನೊಂದು ಕಡೆ 'ಪುಷ್ಪ 2' ಸಿನಿಮಾದ ಆಡಿಯೋ ಹಕ್ಕು ಭರ್ಜರಿ ಮೊತ್ತಕ್ಕೆ ಸೇಲ್ ಆಗಿದೆಯಂತೆ. ಈವರೆಗೂ ದಾಖಲಾಗಿದ್ದ ಎಲ್ಲ ಮೊತ್ತವನ್ನೂ ಅದು ಹಿಂದಿಕ್ಕಿದ್ದು ಟಿ ಸೀರಿಸ್ ಕಂಪೆನಿಯು 65 ಕೋಟಿ ರೂಪಾಯಿ ಹಣ ನೀಡಿ ಆಡಿಯೋ ಹಕ್ಕುಗಳನ್ನು ಖರೀದಿಸಿದೆ ಎಂದು ವರದಿಯಾಗಿದೆ. ಕನ್ನಡ, ಹಿಂದಿ, ತೆಲುಗು, ಮಲಯಾಳಂ, ತಮಿಳು ಸೇರಿದಂತೆ ರಿಲೀಸ್ ಆಗುವ ಅಷ್ಟು ಭಾಷೆಗಳಿಗೆ ಈ ಹಕ್ಕು ಅನ್ವಯಿಸಲಿದೆ.

ಆರ್‌ಸಿಬಿ, ಡೆಲ್ಲಿ ಕ್ಯಾಪಿಟಲ್ಸ್ ಇಂದು ಮುಖಾಮುಖಿ

# ಈ ಸಲ ಕಪ್ ಯಾರಿಗೆ?



ಮಹಿಳಾ ಪ್ರೀಮಿಯರ್ ಲೀಗ್‌ನ 2ನೇ ಆವೃತ್ತಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಮುಂಬೈ ವಿರುದ್ಧ ರೋಚಕ ಗೆಲುವು ದಾಖಲಿಸುವ ಮೂಲಕ ಮೊದಲ ಬಾರಿಗೆ ಫೈನಲ್ ತಲುಪಿದೆ. ಇಂದು ದೆಹಲಿಯ ಅರುಣ್ ಜೆಟ್ಲಿ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯಲಿರುವ ಡಬ್ಲ್ಯೂಪಿಎಲ್ 2024ರ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಸೆಣಸಾಡಲಿವೆ.

ಇಬ್ಬರಲ್ಲಿ ಯಾರೇ ಗೆದ್ದರೂ ಸಹ ಹೊಸ ಇತಿಹಾಸ ನಿರ್ಮಾಣವಾಗಲಿದೆ. ಡೆಲ್ಲಿ ಕ್ಯಾಪಿಟಲ್ಸ್ ತಂಡವು ಸತತ 2ನೇ ಬಾರಿಗೆ ಡಬ್ಲ್ಯೂಪಿಎಲ್ ಫೈನಲ್ ತಲುಪಿದ್ದು, ಬೆಂಗಳೂರು ತಂಡವು ಇದೇ ಮೊದಲ ಬಾರಿಗೆ ಫೈನಲ್ ಹಂತಕ್ಕೆ ತಲುಪಿದೆ. ಇದರಿಂದಾಗಿ ಇಬ್ಬರಲ್ಲಿ ಯಾರೇ ಗೆದ್ದರೂ ಇಬ್ಬರಿಗೂ ಅದು ಮೊದಲ ಕಪ್ ಆಗಲಿದೆ. ಈ ಹೈವೋಲ್ಟೇಜ್ ಪಂದ್ಯವು ಸಂಜೆ 7 ಗಂಟೆಗೆ ಟಾಸ್ ನಡೆದು, 7:30ಕ್ಕೆ ಪಂದ್ಯ ಆರಂಭವಾಗಲಿದೆ. ಈಗಾಗಲೇ ಪಂದ್ಯದ ಬಗ್ಗೆ ಕುತೂಹಲ ಹೆಚ್ಚಿದ್ದು, ಉಭಯ ತಂಡಗಳ ಅಭಿಮಾನಿಗಳಲ್ಲೂ ಕುತೂಹಲ ಮೂಡಿಸಿದೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ: ಸ್ಮೃತಿ ಮಂಧಾನ, ಸೋಫಿ ಮೊಲಿನೆಕ್ಸ್, ಎಲ್ಲಿಸ್ ಪೆರ್ರಿ, ಸೋಫಿ ಡಿವೈನ್, ರಿಚಾ ಘೋಷ್, ಜಾರ್ಜಿಯಾ ವಾರೆಹಮ್, ದಿಶಾ ಕಸತ್, ಶ್ರೇಯಾಂಕಾ ಪಾಟೀಲ್, ಆಶಾ ಸೋಭಾನಾ, ಶ್ರದ್ಧಾ ಪೋಖರ್ಕರ್, ರೇಣುಕಾ ಠಾಕೂರ್ ಸಿಂಗ್, ಸಿಮ್ರಾನ್ ಬಹದ್ದೂರ್, ಇಂದ್ರಾಣಿ ರಾಯ್, ಶುದಿನೆ ರಾಯ್, ಡಿ ಕ್ಲರ್ಕ್, ಸಬ್ಬಿನೇನಿ ಮೇಘನಾ, ಕೇಟ್ ಕ್ರಾಸ್, ಏಕ್ತಾ ಬಿಷ್ಟ್.

ಡೆಲ್ಲಿ ಕ್ಯಾಪಿಟಲ್ಸ್ ತಂಡ: ಆಲಿಸ್ ಕ್ಯಾಪ್ಸೆ, ಅರುಂಧತಿ ರೆಡ್ಡಿ, ಜೆಮಿಮಾ ರಾಡ್ರಿಗಸ್, ಜೆಸ್ ಜೊನಾಸೆನ್, ಲಾರಾ ಹ್ಯಾರಿಸ್, ಮರಿಜಾನ್ನೆ ಕಪ್, ಮೆಗ್ ಲ್ಯಾನಿಂಗ್, ಮಿನ್ನು ಮಣಿ, ಪೂನಂ ಯಾದವ್, ರಾಧಾ ಯಾದವ್, ಶಫಾಲಿ ವರ್ಮಾ, ಶಿಖಾ ಪಾಂಡೆ, ಸ್ನೇಹಾ ದೀಪ್ತಿ, ತನಿಯಾ ಭಾಟಿಯಾ, ಅನ್ನಾಪರ್ ಮೋನ್‌ಡಾಲ್ ಸಾಧು, ಅಶ್ವನಿ ಕುಮಾರಿ.

ಈಡಿಗ ಮಹಾಮಂಡಳಿಯಿಂದ ಬಿಗ್ ಶಾಕ್!

# ಗೀತಾ ಶಿವರಾಜ್ ಕುಮಾರ್‌ಗೆ ಸಂಕಷ್ಟ!



**ಬೆಂಗಳೂರು:** 2024ರ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷದಿಂದ ಶಿವಮೊಗ್ಗ ಟಿಕೆಟ್ ಪಡೆದುಕೊಂಡಿರುವ ಗೀತಾ ಶಿವರಾಜ್ ಕುಮಾರ್ ಅವರಿಗೆ ಸಂಕಷ್ಟ ಎದುರಾಗಿದೆ. ಈಡಿಗ ಮಹಾಮಂಡಳಿ ಸಭೆಯಲ್ಲಿ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದ್ದು, ಈ ಚುನಾವಣೆಯಲ್ಲಿ ಗೀತಾ ಶಿವರಾಜ್ ಕುಮಾರ್ ಅವರಿಗೆ ಬೆಂಬಲ ಕೊಡಲ್ಲ ಎಂದು ಪ್ರಣವಾನಂದ ಸ್ವಾಮೀಜಿ ಹೇಳಿದ್ದಾರೆ.

ಮಾಧ್ಯಮದೊಂದಿಗೆ ಮಾತನಾಡಿದ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಅಧ್ಯಕ್ಷ ಪ್ರಣವಾನಂದ ಸ್ವಾಮೀಜಿ, ಇಂದು ಮಹಾಮಂಡಳಿಯ ಸಭೆ ಆಗಿದೆ, ಸಭೆಯಲ್ಲಿ ಕೆಲ ನಿರ್ಣಯಕ್ಕೆ ಬಂದಿದ್ದೇವೆ. ಶಿವಮೊಗ್ಗದಲ್ಲಿ ಗೀತಾ ಶಿವರಾಜ್ ಕುಮಾರ್ ನಮ್ಮ ಬೆಂಬಲ ಇಲ್ಲ, ಈ ಚುನಾವಣೆಯಲ್ಲಿ ಗೀತಾ ಶಿವರಾಜ್ ಕುಮಾರ್ ಅವರಿಗೆ ಬೆಂಬಲ ಕೊಡಲ್ಲ. ನಾವು ಬೆಂಬಲ ಕೊಡದೇ ಇರೋದಕ್ಕೆ ಮಧು ಬಂಗಾರಪ್ಪ ಕಾರಣ. ಮಧು ಬಂಗಾರಪ್ಪ ಅವರ ಸಮಾಜ ವಿರೋಧಿ ಹೇಳಿಕೆಗಳು ಹಾಗೂ ನನ್ನನ್ನು ಸ್ವಾಮೀಜಿ ಅಲ್ಲವೇ ಅಲ್ಲ ಅಂತಾ ಹೇಳ್ತಾರೆ. ಅಲ್ಲಿ ಪಕ್ಷೇತರನಾಗಿ ನಮ್ಮ ಸಮುದಾಯದಿಂದ ಮತ್ತೊಬ್ಬರನ್ನು ಕಣಕ್ಕಿಳಿಸುತ್ತೇವೆ ಎಂದು ತಿಳಿಸಿದರು.

ಅಲ್ಲದೇ, ಮೇರು ನಟ ರಾಜ್ ಕುಮಾರ್ ಅವರ ಕುಟುಂಬದಿಂದ ಚುನಾವಣೆಗೆ ನಿಲ್ಲೋದು ಸೂಕ್ತ ಅಲ್ಲ, ರಾಜ್‌ಕುಮಾರ್ ಅವರು ಸಿಎಂ ಸ್ಥಾನ ಬೇಡ ಎಂದವರು. ಇಂಥ ಕುಟುಂಬದವರು ರಾಜಕಾರಣಕ್ಕೆ ಬರೋದು ಸರಿಯಲ್ಲ. ಶಿವಮೊಗ್ಗದಲ್ಲಿ ಈಡಿಗ ಮಹಾಮಂಡಳಿಯ ರಾಜ್ಯ ಅಧ್ಯಕ್ಷರನ್ನ ಸ್ವಾತಂತ್ರ್ಯ ಅಭ್ಯರ್ಥಿ ಕಣಕ್ಕಿಳಿಸ್ತೇವೆ, ಮಂಜೇ ಗೌಡ ಅವರನ್ನು ಚುನಾವಣೆಗೆ ಸ್ಪರ್ಧೆ ಮಾಡಲು ನಿರ್ಣಯ ಮಾಡಿದ್ದೇವೆ ಎಂದು ಸ್ವಾಮೀಜಿ ಸ್ಪಷ್ಟಪಡಿಸಿದ್ದಾರೆ.

ಕಲಬುರಗಿಯಲ್ಲಿ ಉಮೇಶ್ ಜಾಧವ್ ಅವರಿಗೆ ಬೆಂಬಲ ಕೊಡಲ್ಲ, ಕೋಟಾ ಶ್ರೀನಿವಾಸ್ ಪೂಜಾರಿಗೆ ಸಂಪೂರ್ಣ ಬೆಂಬಲ ಕೊಡುತ್ತೇವೆ. ಕಾಂಗ್ರೆಸ್ ಸಮುದಾಯದ ನಾಯಕರನ್ನ ತುಳಿಯುತ್ತಿದೆ ಎಂದು ಹೇಳಿದರು.

ಇನ್ನು, ಇಂದು ರಾಷ್ಟ್ರೀಯ ಈಡಿಗ ಸಮುದಾಯ ಮಹಾ ಮಂಡಳಿ ಸಭೆಯನ್ನು ಮಹಾ ಮಂಡಳಿ ರಾಷ್ಟ್ರೀಯ ಅಧ್ಯಕ್ಷ ಪ್ರಣವಾನಂದ ಶ್ರೀಗಳ ನೇತೃತ್ವದಲ್ಲಿ ಬೆಂಗಳೂರಿನ ಶೇಷಾದ್ರಿಪುರನಲ್ಲಿರುವ ಎಸ್.ಎಸ್. ಕೆ ಭವನದಲ್ಲಿ ಆಯೋಜಿಸಲಾಗಿತ್ತು. ಸಭೆಯಲ್ಲಿ ಈಡಿಗ ಸಮುದಾಯದ ಮುಖಂಡರು ಹಾಗೂ ಸಂಘದ ಪದಾಧಿಕಾರಿಗಳು ಭಾಗಿಯಾಗಿದ್ದರು. ಈ ಸಭೆಯಲ್ಲಿ ಲೋಕಸಭೆ ಚುನಾವಣೆಯಲ್ಲಿ ಯಾರಿಗೆ ಬೆಂಬಲ ನೀಡಬೇಕು ಎಂಬ ಬಗ್ಗೆ ಚರ್ಚೆ ನಡೆಸಿ ನಿರ್ಧಾರ ಕೈಗೊಂಡಿದ್ದಾರೆ. ಇನ್ನು, ರಾಜ್ಯದ ಯಾವ ಯಾವ ಕ್ಷೇತ್ರಗಳಲ್ಲಿ ಈಡಿಗ, ಬಿಲ್ಲವರು ಹೆಚ್ಚಿದ್ದಾರೆ ಅಂತಹ ಕ್ಷೇತ್ರದಲ್ಲಿ ಯಾರನ್ನ ಬೆಂಬಲಿಸಬೇಕು ಎಂಬ ಬಗ್ಗೆ ಚರ್ಚೆ ನಡೆಸಿ ನಿರ್ಧಾರ ಕೈಗೊಳ್ಳಲಾಗಿದೆ.

# ಐಪಿಎಲ್ ಸಂಪೂರ್ಣ ಲೀಗ್ ಭಾರತದಲ್ಲೇ ನಡೆಯುತ್ತೆ: ಜಯ್ ಶಾ ಸ್ಪಷ್ಟನೆ




ಈ ಬಾರಿ ಲೋಕಸಭಾ ಚುನಾವಣೆ ಹೊರತಾಗಿಯೂ ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಯನ್ನು ವಿದೇಶಕ್ಕೆ ಸ್ಥಳಾಂತರಿಸುವುದಿಲ್ಲ. ಸಂಪೂರ್ಣ ಲೀಗ್ ಭಾರತದಲ್ಲೇ ನಡೆಯಲಿದೆ ಎಂದು ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಸ್ಪಷ್ಟನೆ ನೀಡಿದ್ದಾರೆ.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮೊದಲ 21 ಪಂದ್ಯಗಳು ಭಾರತದಲ್ಲಿ ನಡೆಯಲಿದ್ದು, ಉಳಿದ ಪಂದ್ಯಗಳು ದುಬೈಗೆ ಸ್ಥಳಾಂತರಿಸಲಾಗುತ್ತದೆ ಎಂಬ ಸುದ್ದಿ ಸೋಶಿಯಲ್ ಮೀಡಿಯಾಗಳಲ್ಲಿ ಹರಿದಾಡುತ್ತಿತ್ತು. ಈ ಬೆನ್ನಲ್ಲೇ ಜಯ್ ಶಾ ಸ್ಪಷ್ಟನೆ ನೀಡಿದ್ದಾರೆ.

ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಈ ಹಿಂದೆ ಮಾಡಿದಂತೆ ಟೂರ್ನಿಯನ್ನು ಸ್ಥಳಾಂತರಿಸುವುದಿಲ್ಲ. ಈ ಬಾರಿ ಸಂಪೂರ್ಣ ಐಪಿಎಲ್ ಭಾರತದಲ್ಲೇ ನಡೆಯಲಿದೆ. ಯಾವುದೇ ಕಾರಣಕ್ಕೂ ಸ್ಥಳಾಂತರಿಸುವುದಿಲ್ಲ. ಚುನಾವಣೆಗೂ ಸಮಸ್ಯೆಯಾಗದಂತೆ ಉಳಿದ ವೇಳಾಪಟ್ಟಿ ಸಿದ್ಧಪಡಿಸುವ ಕಾರ್ಯದಲ್ಲಿ ಬಿಸಿಸಿಐ ಮಂಡಳಿ ತೊಡಗಿದೆ. ಶೀಘ್ರವೇ ಅದನ್ನು ಸಾರ್ವಜನಿಕಗೊಳಿಸಲಿದೆ ಎಂದು ತಿಳಿಸಿದ್ದಾರೆ.

**ಐಪಿಎಲ್ ಆರಂಭ ಯಾವಾಗ?:** ಬಹುನಿರೀಕ್ಷಿತ 17ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಇದೇ ಮಾರ್ಚ್ 22 ರಿಂದ ಆರಂಭವಾಗಲಿದೆ. ಲೋಕಸಭಾ ಚುನಾವಣೆ ಹಿನ್ನೆಲೆ ಮೊದಲ 15 ದಿನಗಳು ಕಾಲ ನಡೆಯುವ 21 ಪಂದ್ಯಗಳ ವೇಳಾಪಟ್ಟಿ ಸದ್ಯಕ್ಕೆ ಪ್ರಕಟಿಸಲಾಗಿದೆ. ಮಾ. 22ರಿಂದ ಏಪ್ರಿಲ್ 7ರ ತನಕ 21 ಪಂದ್ಯಗಳು ನಡೆಯಲಿದ್ದು, ಈ ಪೈಕಿ 4 ಡಬಲ್ ಹೆಡ್ಡರ್ ಪಂದ್ಯಗಳು ನಡೆಯಲಿವೆ.

ಉದ್ಘಾಟನಾ ಪಂದ್ಯವು ರಾತ್ರಿ 8 ಗಂಟೆಗೆ ಆರಂಭವಾಗಲಿದೆ. ಉಳಿದ ಪಂದ್ಯಗಳು ಸಂಜೆ 7.30ಕ್ಕೆ ಪ್ರಾರಂಭವಾಗಲಿವೆ. ಡಬಲ್ ಹೆಡ್ಡರ್ ದಿನದಂದು ಮೊದಲ ಪಂದ್ಯ ಮಧ್ಯಾಹ್ನ 3.30ಕ್ಕೆ ಆರಂಭವಾಗಲಿದೆ.

# ಬಿಜೆಪಿ ರಾಜಕೀಯ ದಾಳಕ್ಕೆ ಕಾಂಗ್ರೆಸ್ ಕಂಗಾಲು



**ಬೆಂಗಳೂರು:** ಕಾಂಗ್ರೆಸ್ ಪಕ್ಷಕ್ಕೂ ಮೊದಲು ಉಡುಪಿ ಚಿಕ್ಕಮಗಳೂರು ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯನ್ನು ಘೋಷಣೆ ಮಾಡುವ ಮೂಲಕ ಕೈ ಪಕ್ಷಕ್ಕೆ ಬಿಜೆಪಿ ಟೆನ್ಶನ್ ಕೊಟ್ಟಿದೆ. ಶೋಭಾ ಕರಂದ್ಲಾಜೆಗೆ ಟಿಕೆಟ್ ಸಿಗಬಹುದು ಎಂದು ಕಾಂಗ್ರೆಸ್ ಲೆಕ್ಕಾಹಾರ ಹಾಕಿ, ಜಯಪ್ರಕಾಶ್ ಹೆಗ್ಡೆ ಅವರನ್ನು ಪಕ್ಷಕ್ಕೆ ಸೆಳೆದುಕೊಂಡಿತ್ತು. ಆದರೆ ಈ ನಡುವೆ ಹಿಂದುಳಿದ ವರ್ಗದ ನಾಯಕನಿಗೆ ಟಿಕೆಟ್ ಕೊಟ್ಟು ಬಿಜೆಪಿ ರಾಜಕೀಯ ದಾಳ ಉರುಳಿಸಿದೆ. ಕಾಂಗ್ರೆಸ್ ಮತ್ತೆ ಹೊಸದಾಗಿ ಕೂಡಿ-ಕಳೆಯುವ ಲೆಕ್ಕಾಚಾರ ಮಾಡಬೇಕಿದೆ. ಅನಿರೀಕ್ಷಿತ ಅಚ್ಚರಿ ಎಂಬಂತೆ ಕೋಟ ಶ್ರೀನಿವಾಸ ಪೂಜಾರಿಗೆ ಉಡುಪಿ ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ನೀಡಲಾಗಿದೆ. ಹೀಗೆ ಹೊಸ ಅಭ್ಯರ್ಥಿ ಘೋಷಣೆ ಮಾಡಿ ಕಾಂಗ್ರೆಸ್ ಗೆ ಟೆನ್ಶನ್ ಕೊಟ್ಟಿದೆ. ಜಾತಿ ಲೆಕ್ಕಾಚಾರ ಮಾಡಿ ಬಿಜೆಪಿ ಟಿಕೆಟ್ ನೀಡಿದ್ದು, ಕಾಂಗ್ರೆಸ್ ಅನಿವಾರ್ಯವಾಗಿ ಹೊಸ ಲೆಕ್ಕ ಶುರು ಮಾಡಿದೆ. ಬಿಜೆಪಿ ಗೌಡ ಸಮುದಾಯದ ಶೋಭಾ ಕರಂದ್ಲಾಜೆ ಗೆ ಟಿಕೆಟ್ ಎಂದು ಭಾವಿಸಿದ್ದ ಕಾಂಗ್ರೆಸ್, ಬಂಟ ಸಮುದಾಯದ ಜಯಪ್ರಕಾಶ್ ಹೆಗ್ಡೆಯನ್ನು ಪಕ್ಷಕ್ಕೆ ಸೆಳೆದಿತ್ತು. ಬದಲಾದ ಪರಿಸ್ಥಿತಿಯಲ್ಲಿ ಶೋಭಾ ಕರಂದ್ಲಾಜೆ ಬೆಂಗಳೂರು ಉತ್ತರಕ್ಕೆ ಶಿಫ್ಟ್ ಆಗಿದ್ದು, ಶೋಭಾ ಸ್ಥಾನಕ್ಕೆ ಶ್ರೀನಿವಾಸ ಪೂಜಾರಿ ನಿಂತಿದ್ದಾರೆ.

ಕಾಂಗ್ರೆಸ್ ಹೊಸದಾಗಿ ಎಲ್ಲಾ ಸಾಧ್ಯತೆಗಳನ್ನು ಅಳೆದು ತೂಗುತ್ತಿದೆ. ಟಿಕೆಟ್ ಜಯಪ್ರಕಾಶ್ ಹೆಗ್ಡೆಗೇ ಕೊಡಬೇಕಾ? ಮಾಜಿ ಸಚಿವ ಮಾಜಿ ಸಂಸದ ವಿನಯಕುಮಾರ್ ಸೊರಕೆಗೋ? ಈ ನಡುವೆ ಆಕಾಂಕ್ಷಿಗಳಾಗಿರುವ ಡಾ. ಅಂಶುಮಂತ್- ಸುಧೀರ್ ಕುಮಾರ್ ಮರೋಳ್ಳಿ ಹೆಸರು ಮತ್ತೆ ಚರ್ಚೆಗೆ ಬಂದಿದೆ. ಬಿಲ್ಲವ ಅಭ್ಯರ್ಥಿ ಎದುರು ಯಾರನ್ನು ಕಣಕ್ಕಿಳಿಸಬೇಕು ಎಂಬ ಚರ್ಚೆ ನಡೆಯುತ್ತಿದೆ. ಈ ವರೆಗೆ ಜಯಪ್ರಕಾಶ್ ಹೆಗ್ಡೆಯ ಒಂದು ಹೆಸರನ್ನು ಮಾತ್ರ ಹೈಕಮಾಂಡ್ ಗೆ ಕಳುಹಿಸಿರುವ ರಾಜ್ಯ ನಾಯಕರು ಈಗ ಪುನರ್ ವಿಮರ್ಷೆ ಮಾಡುತ್ತಿದ್ದಾರಂತೆ. ಚಿಕ್ಕಮಗಳೂರು ಮೂಲದ ಅಭ್ಯರ್ಥಿ ಗೆ ಅವಕಾಶ ನೀಡುವ ಬಗ್ಗೆ ಕಾಂಗ್ರೆಸ್ ಪಾಳಯದಲ್ಲಿ ಚರ್ಚೆ ನಡೆಯುತ್ತಿದೆ. ಈವರೆಗೆ ಟಿಕೆಟ್ ಕೂಡಾ ಘೋಷಣೆಯಾಗಿಲ್ಲ. ಅಧಿಕೃತ ಘೋಷಣೆಗೆ ಜಯಪ್ರಕಾಶ ಹೆಗ್ಡೆ ಕಾಯುತ್ತಿದ್ದಾರೆ.

ಜಯಪ್ರಕಾಶ್ ಹೆಗ್ಡೆಗೆ ಟಿಕೆಟ್ ಕೊಡುವುದಾಗಿ ಈಗಾಗಲೇ ಪಕ್ಷ ನಿರ್ಧರಿಸಿದೆ. ಈ ನಡುವೆ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಚಿಕ್ಕಮಗಳೂರಿನ ನಾಲ್ಕು ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆದ್ದಿದೆ. ಆ ನಾಲಕ್ಕೂ ಶಾಸಕರ ಅಭಿಪ್ರಾಯ ಪಡೆದು ತಂತ್ರಗಾರಿಕೆ ಮಾಡುತ್ತಿದೆ. ಚಿಕ್ಕಮಗಳೂರು ಜಿಲ್ಲೆಯಿಂದ ಅಭ್ಯರ್ಥಿ ಆಯ್ಕೆ ಮಾಡಿದರೆ ಕಣ ರಂಗೇರುತ್ತದೆ ಎಂಬ ಲೆಕ್ಕಾಚಾರವೂ ಕಾಂಗ್ರೆಸ್ ಪಡಸಾಲೆಯಲ್ಲಿ ನಡೆಯುತ್ತಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com